ಸಂಪುಟ: 04 ಸಂಚಿಕೆ: 37 ಪುಟಗಳು: 08 ಭಾನುವಾರ 21 ಏಪ್ರಿಲ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

ಮುಂಜಾನೆ ಮಾತು

ಮನುಷ್ಯನ ಉದ್ಯೋಗಕ್ಕೂ ಆದರ್ಶಕ್ಕೂ ಪರಸ್ಪರ ಹೊಂದಿಕೆ ಬಾರದೆ ಹೋದಲ್ಲಿ ಜೀವನದಲ್ಲಿ ಸುಖ ಸಿಗಲಾರದು

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಈ ವರ್ಷ ಒಳ್ಳೆಯದಕ್ಕಿಂತ ಕೆಟ್ಟದ್ದೇ ಕೇಳೋದು ಬಹಳ ಐತಿ

• ಉದಯವಾಹಿನಿ, ವಿಜಯಪುರ

ರಾಜ್ಯದಲ್ಲಿ ಮಳೆ ಬೆಳೆ ಈ ಬಾರಿ ಚೆನ್ನಾಗಿ ಆಗುತ್ತದೆ. ದಕ್ಷಿಣ ಭಾಗದಲ್ಲಿ ಸ್ವಲ್ಪ ಹೆಚ್ಚಿಗೆ ಮಳೆಯಾಗುತ್ತದೆ, ವಾತಾವರಣದಲ್ಲಿ ವ್ಯತ್ಯಾಸವಾಗಿ ಗಾಳಿಯ ರಭಸವು ಹೆಚ್ಚಾಗಿದೆ ಎಂದು ಕೊಡೆಕಲ್ ಬಸವೇಶ್ವರ ದೇವಸ್ಥಾನದ ಶೂನ್ಯ ಶಂಕರಲಿಂಗ ದಿಂಡವಾರ ಶರಣರು ಕಾರ್ಣಿಕ ನುಡಿದಿದ್ದಾರೆ. ವಿಜಯಪುರ ತಾಲ್ಲೂಕಿನ ಜಂಬಗಿ (ಆ) ಗ್ರಾಮದ ಶರಣ ಶಿವಶಂಕರ ದಿಂಡವಾರ ತೋಟದಲ್ಲಿ ಕೊಡೆಕಲ್ ಬಸವೇಶ್ವರ ದೇವಸ್ಥಾನದ ಜಾತ್ರೆ ನಿಮಿತ್ತ ಪುರಾಣ ಮುಕ್ತಾಯ, ಗ್ರಂಥ ಬಿಡುಗಡೆ ಹಾಗೂ ಕಾರ್ಣಿಕ ನುಡಿಗಳ ಕಾರ್ಯಕ್ರಮ ಶುಕ್ರವಾರ ನಡೆಯಿತು. ಈ ವೇಳೆ ದೇವಸ್ಥಾನದ ಮುಖ್ಯಗುರು ಶೂನ್ಯ ಶಂಕರಲಿಂಗ ದಿಂಡವಾರ ಶರಣರು ಕ್ರೋಧಿನಾಮ ಸಂವತ್ಸರದ ಕಾಲಮಾನ ಪ್ರಸ್ತುತ ಕಾರ್ಣಿಕ ನುಡಿಗಳನ್ನು ಹೇಳಿದರು. ದೇಶದಲ್ಲಿ ಅಭಿವೃದ್ಧಿ ಕಾರ್ಯಗಳು ಯಥಾಸ್ಥಿತಿಯಲ್ಲಿ ಮುಂದುವರಿಯುತ್ತವೆ ಎಂದು ದಿಂಡವಾರ ಶರಣರು ಕಾರ್ಣಿಕ ನುಡಿದಿದ್ದಾರೆ.

ಫಲಿತಾಂಶ ಬಂದ ಕೂಡಲೇ ಕಾಂಗ್ರೇಸ್‌ಗೆ ಚಟ್ಟದ ಮೆರವಣಿಗೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಲೋಕಸಭಾ ಚುನಾವಣೆ ಫಲಿತಾಂಶ ಜೂನ್ 4ರಂದು ಬರಲಿದೆ. ಅಂದು ಚೊಂಬಿಗೆ ಮೂರು ನಾಮವಿಟ್ಟು ಕಾಂಗ್ರೇಸ್‌ಗೆ ಚಟ್ಟದ ಮೆರವಣಿಗೆ ನಡೆಸುತ್ತೇವೆ ಎಂದು ಯಲಹಂಕ ಬಿಜೆಪಿ ಶಾಸಕ ಎಸ್. ಆರ್.ವಿಶ್ವನಾಥ್ ವಾಗ್ದಾಳಿ ನಡೆಸಿದರು.ನಗರದ ಹೊರವಲಯದ ಚೊಕ್ಕಹಳ್ಳಿ ಬಳಿ ಹಮ್ಮಿಕೊಂಡಿರುವ ವಿಜಯ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಕಾಂಗ್ರೇಸ್ ಗೆ ಈ ಬಾರಿ ಚುನಾವಣೆಯಲ್ಲಿ ಚೊಂಬೇ ಗತಿ.ಇದನ್ನು ಬರೆದಿಟ್ಟುಕೊಳ್ಳಿ ಎಂದರು. ಆಲೂಗಡ್ಡೆಯಲ್ಲಿ ಚಿನ್ನ ತೆಗೆಯುವ ರಾಹುಲ್ ಗಾಂಧಿ ಪ್ರಧಾನಿ ಆಗುವುದು ಬೇಡ. ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರು ಕಳೆದ ಎರಡು ಚುನಾವಣೆಯಲ್ಲಿ ಮೋದಿ ಅವರನ್ನು ವಿರೋಧಿಸಿದರು. ಆದರೆ ಮೋದಿ ಅವರ ಆಡಳಿತ ದೇಶ ಅಗತ್ಯ ಎಂದು ಈ ಬಾರಿ ಬೆಂಬಲ ನೀಡಿದ್ದಾರೆ. ಇದು ರಾಜ್ಯದಲ್ಲಿ ನಮ್ಮ ಶಕ್ತಿಯನ್ನು ಮತ್ತಷ್ಟು ವೃದ್ಧಿಗೊಳಿಸಿದೆ ಎಂದರು.

ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ನನ್ನ ಗೆಲುವು ಸುಲಭ : ಶೋಭಾ

• ಉದಯವಾಹಿನಿ, ಬೆಂಗಳೂರು

ಮೋದಿ ವರ್ಚಸ್ಸು, ಬಿಜೆಪಿ-ಜೆಡಿಎಸ್ ಮೈತ್ರಿ ನನ್ನ ಭಾರೀ ಗೆಲುವಿಗೆ ಸಹಕಾರಿ ಆಗಲಿದೆ ಎಂದು ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಈ ಸಂಬಂಧ ಮಾತನಾಡಿದ ಅವರು,ಬಿಜೆಪಿ-ಜೆಡಿಎಸ್ ಕೈಜೋಡಿಸಿರುವುದರಿಂದ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ವರ್ಚಸ್ಸಿನಿಂದ ಬೆಂಗಳೂರು ಉತ್ತರ ಕ್ಷೇತ್ರದಲ್ಲಿ ಭಾರೀ ಮತಗಳ ಅಂತರದಿಂದ ಈ ಬಾರಿ ಗೆಲುವು ಸಾಧಿಸುತ್ತೇನೆಂದು ಹೇಳಿದರು. ಉಡುಪಿ- ಚಿಕ್ಕಮಗಳೂರು ಕ್ಷೇತ್ರದಿಂದ ಎರಡು ಬಾರಿ ಸಂಸದರಾಗಿ ಮೂರನೇ ಬಾರಿಗೆ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಿಂದ ಅದೃಷ್ಟ ಪರೀಕ್ಷೆಗೆ ಮುಂದಾಗಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕ್ಷೇತ್ರದಲ್ಲಿ ಭರ್ಜರಿ ಪ್ರಚಾರ ಕಾರ್ಯ ನಡೆಸುತ್ತಿದ್ದಾರೆ. ಈ ಬಾರಿ ಹೊಸ ಕ್ಷೇತ್ರದಲ್ಲಿ ಹ್ಯಾಟ್ರಿಕ್ ಗೆಲುವಿನ ವಿಶ್ವಾಸದಲ್ಲಿದ್ದಾರೆ.

ನೇಹಾ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ: ಗೃಹ ಸಚಿವ

• ಉದಯವಾಹಿನಿ, ಬೆಂಗಳೂರು

ಸತ್ಯ ಮುಚ್ಚಿಡಲು ಸಾಧ್ಯವಿಲ್ಲ. ಆದರೆ, ನನ್ನ ಹೇಳಿಕೆಯಿಂದ ನೇಹಾ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೇಹಾ ಹತ್ಯೆ ಹೇಳಿಕೆಯಿಂದ ಅವರ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ. ಆದರೆ, ಸತ್ಯವನ್ನು ಯಾವತ್ತೂ ಮುಚ್ಚಿಡಲು ಸಾಧ್ಯವಿಲ್ಲ. ತನಿಖೆ ಬಳಿಕ ಎಲ್ಲಾ ವಿಷಯ ಹೊರಬರುತ್ತೆ. ನಮಗೆ ಬಂದಿರುವ ವರದಿ ಪ್ರಕಾರ ಮಾತಾಡಿದ್ದೇವೆ ಎಂದು ಹೇಳಿದರು. ಎಬಿವಿಪಿ ಕಾರ್ಯಕರ್ತರ ಮುತ್ತಿಗೆ ವಿಚಾರವಾಗಿ ಮಾತನಾಡಿ, ಅವರಿಗೆ ಸತ್ಯಾಸತ್ಯತೆ ಗೊತ್ತಿಲ್ಲ. ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ. ನಮಗೆ ಜವಾಬ್ದಾರಿ ಇದೆ. ಪ್ರಕರಣದ ಬಗ್ಗೆ ತನಿಖೆ ನಡೆಯುತ್ತಿದ್ದು, ತನಿಖೆಯಲ್ಲಿ ಎಲ್ಲಾ ಸತ್ಯ ಹೊರಬರಲಿದೆ ಎಂದು ತಿಳಿಸಿದರು. ರಾಜ್ಯಕ್ಕೆ ಮೋದಿ ಭೇಟಿ ಕುರಿತು ಮಾತನಾಡಿ, ಮೋದಿ ಅವರು ಕರ್ನಾಟಕಕ್ಕೆ ಬಂದು ಹೋಗಿದ್ದಾರೆ. ಮುಂದೇನು ಕೂಡ ಬರುತ್ತಾರೆ. ನಾವು ಅನೇಕ ಪ್ರಶ್ನೆ ಕೇಳಿದ್ದೇವೆ. ರಾಜ್ಯಕ್ಕೆ ಏನು ಕೊಡುಗೆ ಕೊಟ್ಟಿದ್ದೀರಾ ಎಂದು ಕೇಳಿದ್ದೇವೆ. ಜಿಎಸ್ ಟಿ ಹಂಚಿಕೆ ಎಷ್ಟು ಕೊಟ್ಟಿದ್ದೀರಿ? ಭೀಕರ ಬರಗಾಲ ಇತ್ತು, ವಿಶೇಷ ಅನುದಾನ ಕೊಟ್ಟಿಲ್ಲ. 18 ಸಾವಿರ ಕೋಟಿ ಬರ ಪರಿಹಾರ ಪ್ರಸ್ತಾವನೆ ಇಡಲಾಗಿತ್ತು, ಅದನ್ನು ಕೊಟ್ಟಿಲ್ಲ. ಯಾವುದೇ ಹೊಸ ಯೋಜನೆ ಕೊಟ್ಟಿಲ್ಲ. ಭದ್ರ ಮೇಲ್ದಂಡೆ ಯೋಜನೆಗೆ ಯಾವುದೇ ಸಹಕಾರ ಕೊಟ್ಟಿಲ್ಲ ಎಂದರು.

ನಮೋ ನವ ಯುಗಾರಂಭ

ಚಿಕ್ಕಬಳ್ಳಾಪುರದಲ್ಲಿ ಬೃಹತ್ ಸಮಾವೇಶ

ಕಾಂಗ್ರೇಸ್ ಸರ್ಕಾರ ಟ್ಯಾಕ್ಸ್ ಸಿಟಿಯನ್ನು ಟ್ಯಾಂಕರ್ ಸಿಟಿ ಮಾಡಿದೆ. ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದ ಕೆಲವೇ ತಿಂಗಳಲ್ಲಿ ಬೆಂಗಳೂರಿನ ಪರಿಸ್ಥಿತಿ ಹಾಳು ಮಾಡಿದೆ ಎಂದು ಪ್ರಧಾನಿ ಮೋದಿ ವಾಗ್ದಾಳಿ ನಡೆಸಿದರು. ನಗರದ ಅರಮನೆ ಮೈದಾನದಲ್ಲಿ ನಡೆದ ಸಮಾವೇಶದಲ್ಲಿ ಮಾತನಾಡಿ, ಎಲ್ಲಾ ಕಡೆ ಬಜೆಟ್ ಕಡಿತ ಮಾಡಲಾಗ್ತಿದೆ. ಎಲ್ಲೆಲ್ಲೂ ಭ್ರಷ್ಟಾಚಾರ ನಡೀತಿದೆ. ಜನರ ಸಮಸ್ಯೆ ಬಗ್ಗೆ ಈ ಸರ್ಕಾರ ಗಮನ ಕೊಡ್ತಿಲ್ಲ ಎಂದು ಕಿಡಿಕಾರಿದರು.

28 ಸ್ಥಾನ ಗೆಲ್ಲಿಸೋಣ, ಕಾವೇರಿ-ಕೃಷ್ಣ ನೀರು ಕೊಡಿ ಅಂತ ಕೇಳೋಣ

ನನ್ನನ್ನು ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಲು ದೊಡ್ಡ ದೊಡ್ಡ ಶಕ್ತಿಗಳು ಪ್ರಯತ್ನ ನಡೆಸುತ್ತಿವೆ. ನನಗೆ ತಾಯಂದಿರ ಆಶೀರ್ವಾದ ಇದೆ. ಹೀಗಾಗಿ ಎಂತಹ ಸಮಸ್ಯೆ ಬಂದರೂ ಎದುರಿಸಲು ಸಿದ್ಧವಾಗಿದ್ದೇನೆ. 3 ಕೋಟಿ ಸಹೋದರಿಯರು ಲಖಪತಿ ದೀದಿ ಆಗಲಿದ್ದಾರೆ. ಪ್ರತಿಯೊಬ್ಬ ತಾಯಂದಿರು, ಸಹೋದರಿಯರ ಸೇವೆ ಮಾಡುವುದು, ಮಹಿಳೆಯರ ಸುರಕ್ಷತೆ ನಮ್ಮ ಆದ್ಯತೆ.

-ನರೇಂದ್ರ ಮೋದಿ, ಪ್ರಧಾನಿ

ಜನರ ಕನಸು ನನಸು ಮಾಡುವುದೆ ನಮ್ಮ ಸಂಕಲ್ಪ

ಜನರ ಕನಸು ನನಸು ಮಾಡುವುದೆ ನಮ್ಮ ಸಂಕಲ್ಪ. ಇದಕ್ಕಾಗಿ ಬಿಜೆಪಿ-ಜೆಡಿಎಸ್ ಒಟ್ಟಾಗಿದ್ದೇವೆ. ನಿಮ್ಮ ಕನಸೇ ನನ್ನ ಕನಸು. ನನ್ನ ಪ್ರತಿ ಕ್ಷಣ ನಿಮಗಾಗಿ, ದೇಶಕ್ಕಾಗಿ ಸಮರ್ಪಣೆ. ಇದು 24/7 ಫಾರ್ 2047 ವರೆಗೆ ನಿರಂತರ. ನನ್ನ ಒಂದು ಕೆಲಸ ಮಾಡುತ್ತೀರಾ ಅತಿ ಹೆಚ್ಚು ಮತದಾನ ಮಾಡಿಸಿ. ನಿಮ್ಮ ಬೂತ್‌ನಲ್ಲಿ ಹೆಚ್ಚು ಲೀಡ್ ಕೊಡಿಸಿ. ಇನ್ನೊಂದು ನನ್ನ ಪರ್ಸನಲ್ ಕೆಲಸ ಮಾಡುತ್ತೀರಾ ಮನೆಗಳಿಗೆ ಹೋಗಿ ಎಲ್ಲರಿಗೂ ನಾನು ಬಂದಿದ್ದೆ ಎಂದು ಹೇಳಿ, ನಮಸ್ಕಾರ ತಿಳಿಸಿ ಎಂದಿದ್ದಾರೆ.

ಮೋದಿ ಭಾಷಣದ ಮುಖ್ಯಾಂಶಗಳು

1. ಉಚಿತವಾಗಿ ಪಡಿತರ ನೀಡುತ್ತಿದ್ದೇವೆ, ಇದು ಮೋದಿ ಗ್ಯಾರಂಟಿ, ಮುಂದಿನ 5 ವರ್ಷವೂ ಉಚಿತ ಪಡಿತರ ನೀಡುತ್ತೇವೆ.
2. ಉಚಿತವಾಗಿ ಬಡವರಿಗೆ ವೈದ್ಯಕೀಯ ಚಿಕಿತ್ಸೆ ಸಿಗಬಹುದು ಎಂದು ಯಾರೂ ಭಾವಿಸಿರಲಿಲ್ಲ, ಆಯುಷ್ಮಾನ್ ಭಾರತ್ ಯೋಜನೆ ಮೂಲಕ ನಾವು ಅದನ್ನು ಸಾಕಾರಗೊಳಿಸಿದ್ದೇವೆ.
3. ಮೋದಿ ಸರ್ಕಾರದ ಅತಿದೊಡ್ಡ ಫಲಾನುಭವಿಗಳು ಎಸ್‌ಸಿ, ಎಸ್‌ಟಿ ಜನಾಂಗ ಹಾಗೂ ಬಡವರಾಗಿದ್ದಾರೆ.
4. ಕಳೆದ 10 ವರ್ಷಗಳಲ್ಲಿ ಎಸ್‌ಸಿ-ಎಸ್‌ಟಿ ಸಮುದಾಯ 25 ಕೋಟಿ ಮಂದಿಯನ್ನು ಬಡತನ ರೇಖೆಗಿಂತ ಮೇಲೆ ತಂದಿದ್ದೇವೆ.
5. ಆದಿವಾಸಿ ಸಮುದಾಯದವರಿಗೆ ರಾಷ್ಟ್ರಪತಿ ಹುದ್ದೆ ನೀಡಲಾಗಿದೆ. ಮುದ್ರಾ ಯೋಜನೆಯಡಿ ಶ್ಯೂರಿಟಿ ಇಲ್ಲದೆ 20 ಲಕ್ಷ ಸಾಲ ನೀಡಲಾಗುತ್ತಿದೆ.
6. ಪ್ರತಿಯೊಬ್ಬ ಮಹಿಳೆಯ ಸುರಕ್ಷತೆಯೇ ನನ್ನ ಮೊದಲ ಆದ್ಯತೆ. ಹೆಣ್ಣು ಮಕ್ಕಳಿಗೂ ಡ್ರೋನ್ ತರಬೇತಿ ನೀಡಲಾಗುತ್ತಿದೆ. ಹೈನುಗಾರಿಕೆ, ಮೀನುಗಾರಿಕೆ ಮಾಡುವವರಿಗೂ ಕಿಸಾನ್ ಕಾರ್ಡ್ ನೀಡಲಾಗಿದೆ.

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಸಬರ್ಬನ್ ಪ್ರಾಜೆಕ್ಟ್ ಕೆಲಸ ಶುರುವಾಗಿದೆ. ಸ್ಯಾಟಲೈಟ್ ರಿಂಗ್ ರಸ್ತೆಯ ಲಾಭವೂ ಶೀಘ್ರದಲ್ಲಿ ಸಿಗಲಿದೆ. ಮೇಡ್ ಇನ್ ಇಂಡಿಯಾಕ್ಕೂ ಬೆಂಗಳೂರು ಕೊಡುಗೆ ಅಪಾರ. ಕರ್ನಾಟಕಕ್ಕೂ ಬುಲೆಟ್ ಟ್ರೈನ್ ಬರಲಿದೆ ಎಂದು ಭರವಸೆ ನೀಡಿದರು. ಬೆಂಗಳೂರು ಡಿಜಿಟಲ್ ಇಂಡಿಯಾದ ಹಬ್, ಡಿಜಿಟಲ್ ವೇದಿಕೆಯಲ್ಲಿ ಬೆಂಗಳೂರು ಪಾತ್ರ ದೊಡ್ಡದು. ಮೊಬೈಲ್ ಡೇಟಾ 2014 ರಲ್ಲಿ ಒಂದು ಜಿಬಿ ಗೆ 250 ರೂ. ಇತ್ತು, ಈಗ 10 ರೂ. ಮೊಬೈಲ್ ಬಿಲ್ ಈಗ 500 ರೂಗಿಂತ ಕಮ್ಮಿ ಬರ್ತಿದೆ, ಇದರಿಂದ ಐದಾರು ಸಾವಿರ ಉಳೀತಿದೆ ಎಂದರು. ಜನರ 1 ಮತದಿಂದ ಬದಲಾವಣೆ: ಹಿಂದೆ ದೇಶ ಆರ್ಥಿಕ ಸಂಕಷ್ಟದಲ್ಲಿತ್ತು. ಬ್ಯಾಂಕ್‌ಗಳು ಮುಳುಗುವ ಭೀತಿ ಎದುರಿಸುತ್ತಿದ್ದವು. ಅದು ಆ ಕಾಲ, ಈಗ ಕಾಲ ಬದಲಾಗಿದೆ. ಅನ್ಯ ದೇಶಗಳು ಭಾರತದ ಗೆಳೆತನ ಮಾಡಲು ಹಾತಿರೆಯುತ್ತಿವೆ. ಬಂಡವಾಳ ಹೂಡಲು ಉತ್ಸುಕವಾಗಿವೆ. ಭಾರತ ಜಗತ್ತಿನ ಐದನೇ ದೊಡ್ಡ ಆರ್ಥಿಕ ದೇಶ. ಭಾರತ ಯಾರನ್ನೂ ಅನುಸರಿಸುತ್ತಿಲ್ಲ, ಭಾರತವನ್ನ ಬೇರೆಯವರು ಅನುಸರಿಸ್ತಿದ್ದಾರೆ.

ಮೋದಿ ಕಾರಣದಿಂದಲೇ ಚಂದ್ರಯಾನ ಬಳಿಕ ಗಗನಯಾತ್ರೆಯ ಗೌರವ ಸಿಕ್ಕಿದೆ. ಕಾಂಗ್ರೇಸ್ ಬಂಡವಾಳ ಹೂಡಿಕೆಯ ವಿರುದ್ಧ ಇದೆ. ಮೋದಿ ವಿರುದ್ಧ ಸುಳ್ಳು ಆರೋಪ ಮಾಡಲಾಗ್ತಿದೆ. ಮೋದಿ ಪರಿವಾರದ ವಿರುದ್ಧ ಸುಳ್ಳು ಪ್ರಚಾರ ಮಾಡ್ತಿದ್ದಾರೆ. ಮೋದಿಯನ್ನು ತಿರಸ್ಕರಿಸಿ ಅಂತ ಇಂಡಿಯಾ ಕೂಟ ಹೇಳ್ತಿದೆ ಎಂದು ಇಂಡಿಯಾ ಕೂಟದ ವಿರುದ್ಧ ಮೋದಿ ವಾಗ್ದಾಳಿ ನಡೆಸಿದರು. ಆಯುಷ್ಮಾನ್ ಯೋಜನೆಯಿಂದ ಐದು ಲಕ್ಷದವರೆಗೆ ಉಚಿತ ಚಿಕಿತ್ಸೆ, ಬಿಜೆಪಿ ಪ್ರಣಾಳಿಕೆಯಲ್ಲಿ ಈ ಯೋಜನೆ ವಿಸ್ತರಣೆ ಮಾಡಿದ್ದೇವೆ. ಹಿರಿಯರಿಗೂ ಆಯುಷ್ಮಾನ್ ಯೋಜನೆಯ ಲಾಭ ಸಿಗಲಿದೆ. ಜನೌಷಧ ಕೇಂದ್ರಗಳಲ್ಲಿ 80% ಕಡಿಮೆ ದರದಲ್ಲಿ ಔಷಧ ಕೊಡಲಾಗ್ತಿದೆ. ಬಡವರಿಗೆ ಒಂದು ಕೋಟಿ ಮನೆ ಕೊಡಲಾಗಿದೆ. 84 ಸಾವಿರ ಮನೆಗಳು ಬೆಂಗಳೂರಿಗೆ ಸಿಕ್ಕಿವೆ. ಮಧ್ಯಮ ವರ್ಗದ ಮನೆಗಳ ಕನಸು ನನಸು ಮಾಡಿದ್ದೇವೆ. ಜನರ ಒಳಿತಿಗಾಗಿ ರೇರಾ ಕಾಯ್ದೆ ಜಾರಿಯಾಗಿದೆ. ಏಳು ಲಕ್ಷದವರೆಗೆ ಈಗ ತೆರಿಗೆ ಕಟ್ಟುವಂತಿಲ್ಲ. ಹತ್ತು ವರ್ಷಗಳ ಹಿಂದೆ ಈ ಪರಿಸ್ಥಿತಿ ಇರಲಿಲ್ಲ. ಜಿಎಸ್‌ಟಿ ಬಂದ ನಂತರ ಪರೋಕ್ಷ ತೆರಿಗೆಗೆ ತೆರೆ ಬಿದ್ದಿದೆ. ಎಲ್‌ಇಡಿ ಬಲ್ಬ್ 400 ಇತ್ತು, ಈಗ 40 ರೂ ಆಗಿದೆ. ಎಲ್‌ಇಡಿ ಬಲ್ಬ್‌ಗಳಿಂದ ಹೆಚ್ಚು ಬೆಳಕು ಸಿಕ್ತಿದೆ ಎಂದು ಮೋದಿ ತಿಳಿಸಿದರು.

ನಗರದಲ್ಲಿ ನಮ್ಮ ಮಕ್ಕಳ ಮೇಲೆ ಹಲ್ಲೆ ನಡೆಯುತ್ತಿದೆ. ಮಾರುಕಟ್ಟೆಗಳಲ್ಲಿ ಬಾಂಬ್ ಸ್ಫೋಟಗೊಳುತ್ತಿವೆ. ಭಜನೆ ಅಥವಾ ಕೀರ್ತನೆ ಕೇಳುವುದರಿಂದ ಕೂಡ ಹಲ್ಲೆ ಮಾಡುತ್ತಿದ್ದಾರೆ. ಇವು ಸಾಮಾನ್ಯ ಘಟನೆಗಳು ಅಲ್ಲ, ಹಾಗಾಗಿ ಈ ಕಾಂಗ್ರೇಸ್‌ನಿಂದ ಆದಷ್ಟು ಅಲರ್ಟ್ ಆಗಿರಿ ಎಂದು ಪ್ರಧಾನಿ ಮೋದಿ ಬೆಂಗಳೂರು ಮತ್ತು ಕರ್ನಾಟಕದ ಜನರಿಗೆ ಮನವಿ ಮಾಡಿದ್ದಾರೆ. ನಗರದ ಅರಮನೆ ಮೈದಾನದಲ್ಲಿ ಭಾಷಣ ಮಾಡಿದ ಅವರು, ರಾಜ್ಯ ಕಾಂಗ್ರೇಸ್ ಸರ್ಕಾರದ ನೀತಿ ಅಪಾಯಕಾರಿಯಾಗಿದೆ ಎಂದು ವಾಗ್ದಾಳಿ ಮಾಡಿದ್ದಾರೆ. ಬೆಂಗಳೂರನ್ನು ಅದ್ಭುತ ನಗರವಾಗಿಸಲು ನಾವು ಪ್ರಯತ್ನಿಸುತ್ತಿದ್ದೇವೆ. ಎನ್‌ಡಿಎ ಅವಧಿಯಲ್ಲಿ ತೆರಿಗೆ ಪದ್ಧತಿ ಬದಲಾವಣೆಯಾಗಿದೆ. ಜಿಎಸ್‌ಟಿ ಜಾರಿ ನಂತರ ಪರೋಕ್ಷ ತೆರಿಗೆ ಹೊರೆ ತಪ್ಪಿದೆ. 2014, 2019ರ ಚುನಾವಣೆಯಲ್ಲಿ ದಾಖಲೆ ಪ್ರಮಾಣದಲ್ಲಿ ಗೆಲ್ಲಿಸಿದ್ರಿ. ಭಾರತದ ಬ್ಯಾಂಕಿಂಗ್ ವ್ಯವಸ್ಥೆ ಸಂಕಷ್ಟದಲ್ಲಿತ್ತು, ಈಗ ಬದಲಾಗಿದೆ ಎಂದರು. 21ನೇ ಶತಮಾನದಲ್ಲಿ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿದೆ. ಇಡೀ ದೇಶವೇ ನನ್ನ ಪರಿವಾರವಾಗಿದೆ ಎಂದು ಹೇಳಿದ್ದಾರೆ.

ಭಾರತ ಜಗಿತ ನಿಶ್ಚಿತ

ವಿಶ್ವದ 5ನೇ ದೊಡ್ಡ ಆರ್ಥಿಕ ಶಕ್ತಿ

ಭಾರತದಲ್ಲಿ ಹೂಡಿಕೆಗೆ ಹಲವು ದೇಶಗಳು ಉತ್ಸುಕವಾಗಿವೆ. ಭಾರತದ ಗೆಳೆತನ ಮಾಡಲು ಎಲ್ಲಾ ದೇಶಗಳು ಹಾತೊರೆಯುತ್ತಿವೆ. ಭಾರತ ವಿಶ್ವದ 5ನೇ ದೊಡ್ಡ ಆರ್ಥಿಕ ಶಕ್ತಿವಾಗಿ ಹೊರಹೊಮ್ಮಿದೆ. ಭಾರತ ಯಾರನ್ನೂ ಅನುಸರಿಸುತ್ತಿಲ್ಲ, ಬೇರೆಯವರು ಅನುಸರಿಸ್ತಿದ್ದಾರೆ. ದೇಶದಲ್ಲಿ ಇಷ್ಟು ದೊಡ್ಡ ಬದಲಾವಣೆ ಆಗಿದ್ದೇಗೆ ಅಂದರೆ ನಿಮ್ಮಿಂದ. ನೀವು ನೀಡಿದ ಮತದಿಂದ ದೇಶದಲ್ಲಿ ಮಹತ್ವದ ಬದಲಾವಣೆ ಆಗಿದೆ ಎಂದಿದ್ದಾರೆ.

ಕಾಂಗ್ರೇಸ್ ವಿರುದ್ಧ ಕಿಡಿ

ಈ ಲೋಕಸಭಾ ಚುನಾವಣೆಯಲ್ಲಿ ಕೋಲಾರ, ಚಿಕ್ಕಬಳ್ಳಾಪುರವೂ ಸೇರಿದಂತೆ 28 ಕ್ಷೇತ್ರಗಳಲ್ಲಿಯೂ ಮೈತ್ರಿ (ಬಿಜೆಪಿ-ಜೆಡಿಎಸ್) ಅಭ್ಯರ್ಥಿ ಗೆಲ್ಲಿಸಿ ದೆಹಲಿಗೆ ಕಳುಹಿಸೋಣ ಆಮೇಲೆ ಕಾವೇರಿ, ಕೃಷ್ಣ ನೀರು ಕೊಡಿ ಅಂತ ಮೋದಿ ಅವರನ್ನ ಕೇಳೋಣ. ನಮ್ಮ ಕಾಣಿಕೆಯಾಗಿ ಕೋಲಾರ, ಕೇಳೋಣ. ಆದ್ದರಿಂದ ಚಿಕ್ಕಬಳ್ಳಾಪುರ, ಕೋಲಾರದಲ್ಲಿ ಮೈತ್ರಿ ಅಭ್ಯರ್ಥಿಯನ್ನು ಗೆಲ್ಲಿಸುವಂತೆ ತಲೆ ಬಾಗಿ ಕೇಳುತ್ತೇನೆ

-ದೇವೇಗೌಡ, ಮಾಜಿ ಪ್ರಧಾನಿ

ದೇವೇಗೌಡರ ಬಗ್ಗೆ ಮೆಚ್ಚುಗೆ

ಕರ್ನಾಟಕದ ಅಭಿವೃದ್ಧಿಗೆ ಎನ್‌ಡಿಎ ಸರ್ಕಾರ ಬದ್ಧ ಎಂದ ಪ್ರಧಾನಿ ಮೋದಿ, ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರನ್ನು ಹಾಡಿ ಹೊಗಳಿದರು. ಹಿರಿಯ ಅನುಭವಿ ರಾಜಕಾರಣಿ ದೇವೇಗೌಡರ ಮಾರ್ಗದರ್ಶನ ನಮಗೆ ಸಿಗಲಿದೆ. ಇಳಿ ವಯಸ್ಸಿನಲ್ಲೂ ಅವರ ಬದ್ಧತೆ ಉತ್ಸಾಹ ನಮಗೆಲ್ಲಾ ಪ್ರೇರಣೆ. ಇಂಡಿಯಾ ಮೈತ್ರಿ ಕೂಟಕ್ಕೆ ಯಾವುದೇ ನಾಯಕತ್ವ ಇಲ್ಲ ಎಂದು ದೇವೇಗೌಡರು ಹೇಳಿದ್ದಾರೆ ಎಂದರು. ಸಹಕಾರಿ ಕ್ಷೇತ್ರದ ವ್ಯಾಪ್ತಿಯನ್ನು ಎಲ್ಲಾ ಕ್ಷೇತ್ರದಲ್ಲಿ ವಿಸ್ತರಣೆ ಮಾಡಲಾಗುತ್ತಿದೆ. ಸಿರಿಧಾನ್ಯವನ್ನು ಜಗತ್ತಿನ ಮಾರುಕಟ್ಟೆಗೆ ತಲುಪಿಸುವ ಮಹತ್ವದ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ನೀರಿನ ಸಮಸ್ಯೆಯ ಬಗ್ಗೆ ಪ್ರಸ್ತಾಪಿಸಿದ ಅವರು, ಕೋಲಾರ, ಚಿಕ್ಕಬಳ್ಳಾಪುರದಲ್ಲಿ ನೀರಿನ ಸಮಸ್ಯೆ ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು. 150 ಅಮೃತ ಸರೋವರ ಯೋಜನೆ ಅಡಿಯಲ್ಲಿ ಸರೋವರ ನಿರ್ಮಾಣ ಮಾಡುಲಾಗುತ್ತದೆ. 2.70 ಲಕ್ಷ ಕುಟುಂಬಕ್ಕೆ ನಳ್ಳಿ ಮೂಲಕ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಎಂದು ವಿವರಿಸಿದರು.

##

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಸಿದ್ಧಾರೂಢರ ಪರಮ ಭಕ್ತ

ಈ ಹಿಂದೆ ದೊಡ್ಡ ಅಣ್ಣನೊಂದಿಗೆ ದೂರವಾಣಿಯಲ್ಲಿ ಮಾತನಾಡುತ್ತಿದ್ದೆ. ಸಿದ್ಧಾರೂಢರ ಹೆಸರನ್ನು ಕೇಳಿದೊಡನೆಯೇ ನಾನೂ ಸಿದ್ಧಾರೂಢರ ಪರಮ ಭಕ್ತ. ಡಾ. ರಾಜಕುಮಾರ್ ಜೊತೆ ಹಲವು ಬಾರಿ ಮಠಕ್ಕೆ ಭೇಟಿ ನೀಡಿದ್ದೇನೆ. ಮೊದಮೊದಲು ನೀನೇಕಣ್ಣ ಸಿದ್ಧಾರೂಢರ ಭಕ್ತ? ಎಂದಿದ್ದೆ. ಸಿದ್ಧಾರೂಢರ ಚರಿತ್ರೆ ಓದು, ಗೊತ್ತಾಗುತ್ತದೆ ಎಂದಿದ್ದರು. ಕಷ್ಟಪಟ್ಟು ಹುಡುಕಿ ಚರಿತ್ರೆ ಪಡೆದು ಓದಿದೆ. ಕಣ್ಣಲ್ಲಿ ದಳ ದಳ ನೀರಿನ ಕೋಡಿಯೇ ಹರಿಯಿತು! ಈಗ ಘಂಟೆ ಘಂಟೆಗಳಷ್ಟು ಕಾಲ ಸಿದ್ಧಾರೂಢರ ಬಗ್ಗೆ ಮಾತನಾಡಬಲ್ಲೆ ಎಂದರು. ಬಹಳ ಖುಷಿ ಆಯ್ತು. ಇತ್ತೀಚೆಗೆ ಅವರಿಗೆ ಕರೆ ಮಾಡಿದೆ. ವಿಷಯ ಏನೆಂದರು. ಸಿದ್ಧಾರೂಢ ಕಥಾಮೃತ ಮುದ್ರಣಕ್ಕೆ ದೇಣಿಗೆ ನೀಡಿ ಎಂದೆ. ಒಂದೇ ರೂಪಾಯಿಯೋ ಎನ್ನುವಂತೆ ಅದೆಷ್ಟು ಸುಲಭವಾಗಿ ಲಕ್ಷ ಲಕ್ಷ ಕೇಳುತ್ತೀರಲ್ಲಾ! ಎಂದರು. ನೀವು ಸಿದ್ಧಾರೂಢರ ಪರಮ ಭಕ್ತರು. ಅದಕ್ಕಾಗಿ ವಿನಂತಿಸಿದೆ. ಆಜ್ಞೆಯಲ್ಲ. ನನ್ನ ಕರ್ತವ್ಯ ಮಾಡಿದೆ. ಪೂರ್ಣವೋ ಅರ್ಧವೋ ಕೊಡುವುದೋ ಬಿಡುವುದೋ ಅದು ನಿಮ್ಮ ಕರ್ತವ್ಯ ಎಂದೆ. ಮುಂದೆ ಮಾತಿಲ್ಲ!

ಪೋಕ್ಸೋ ಕೇಸ್ ವಿಚಾರ: BSY ವಿರುದ್ಧ ಕಾನೂನು ಕ್ರಮಕ್ಕೆ ರಾಜ್ಯಪಾಲರಿಗೆ ದೂರು

• ಉದಯವಾಹಿನಿ, ಬೆಂಗಳೂರು

ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ ಎಸಗಿದ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ BSY ವಿರುದ್ಧ ಕಾನೂನು ಕ್ರಮಕ್ಕೆ ರಾಜ್ಯಪಾಲರಿಗೆ ದೂರು ನೀಡಿಲಾಗಿದೆ. ಹೌದು ಸಂತ್ರಸ್ತ ಬಾಲಕಿ ತಾಯಿ ಜನತಾ ಪಾರ್ಟಿ- ಕರ್ನಾಟಕ ವತಿಯಿಂದ ದೂರು ನೀಡಲಾಗಿದ್ದು, ಪೋಕ್ಸೋ ಕಾನೂನಿನ ಅನ್ವಯ ಯಡಿಯೂರಪ್ಪ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ. ಸಂತ್ರಸ್ತ ಬಾಲಕಿ ತಾಯಿ ಮತ್ತು ಜನತಾ ಪಾರ್ಟಿ ಸದಸ್ಯರು ದೂರು ನೀಡಲು ರಾಜಭವನಕ್ಕೆ ತೆರಳಿ BSY ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹಿಸಿದರು. ಫೆ. 2 ರಂದು ಸಹಾಯ ಕೇಳಲು ಹೋಗಿದ್ದಾಗ ತನಗೆ ಲೈಂಗಿಕ ಕಿರುಕುಳ ನೀಡಿದ್ದಾಗಿ ಸಂತ್ರಸ್ತೆ ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧ ಆರೋಪ ಮಾಡಿದ್ದರು. ಈ ಘಟನೆ ಸಂಬಂಧ ಸದಾಶಿವನಗರ ಠಾಣಾ ಪೊಲೀಸರು ಯಡಿಯೂರಪ್ಪ ವಿರುದ್ಧ ಪೋಕ್ಸೋ ಹಾಗೂ 354 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ಮೋದಿ ವಿರುದ್ಧ ಚೊಂಬು ಹಿಡಿದು ಕಾಂಗ್ರೇಸ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ಮೋದಿ ವಿರುದ್ಧ ಕಾಂಗ್ರೇಸ್‌ಕಾರ್ಯಕರ್ತರು ಚೊಂಬು ಹಿಡಿದು ಪ್ರತಿಭಟನೆ ನಡೆಸುತ್ತಿದ್ದು, ಮೋದಿ ನೇತೃತ್ವದ ಕೇಂದ್ರ ಸರ್ಕಾರ ರಾಜ್ಯಕ್ಕೆ ಅನ್ಯಾಯ ಮಾಡುವ ಮೂಲಕ ಚೊಂಬು ನೀಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ಪ್ರಚಾರಕ್ಕಾಗಿ ಇಂದು ಪ್ರಧಾನಿ ನರೇಂದ್ರ ಮೋದಿ ರಾಜ್ಯಕ್ಕೆ ಆಗಮಿಸಲಿದ್ದು, ಬೆಂಗಳೂರಿನ ಅರಮನೆ ಮೈದಾನದಲ್ಲಿ ಹಾಗೂ ಚಿಕ್ಕಬಳ್ಳಾಪುರದಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗಿದೆ. ಪ್ರಧಾನಿ ಮೋದಿ ರಾಜ್ಯಕ್ಕೆ ಆಗಮಿಸುತ್ತಿರುವ ಹೊತ್ತಲ್ಲೇ ಕಾಂಗ್ರೇಸ್ ಮೋದಿ ವಿರುದ್ಧ ಪ್ರತಿಭಟನೆ ನಡೆಸುತ್ತಿದೆ. ಬೆಂಗಳೂರಿನ ಮೇಖ್ರಿ ಸರ್ಕಲ್ ನಲ್ಲಿ ಕಾಂಗ್ರೇಸ್‌ಕಾರ್ಯಕರ್ತರು ಚೊಂಬು ಹಿಡಿದು ಪ್ರತಿಭಟನೆ ನಡೆಸಿದ್ದಾರೆ. ಪ್ರಧಾನಿ ಮೋದಿ ವಿರುದ್ಧ ಹಾಗೂ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾಂಗ್ರೇಸ್‌ಕಾರ್ಯಕರ್ತರ ಪ್ರತಿಭಟನೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಪೊಲಿಸರು ನೂರಾರು ಕಾಂಗ್ರೇಸ್‌ಕಾರ್ಯಕರ್ತರನ್ನು ವಶಕ್ಕೆ ಪಡೆದಿದ್ದಾರೆ.

ಬಾರ್ ರೆಸ್ಟೋರೆಂಟ್‌ಗಳಿಗೆ ನೋಟಿಸ್ ಜಾರಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಲೋಕಸಭಾ ಚುನಾವಣಾ ಮತದಾನಕ್ಕೆ ದಿನಗಣನೆ ಆರಂಭವಾಗಿದೆ. ಈ ನಡುವೆ ಚುನಾವಣಾ ಅಧಿಕಾರಿಗಳು ಬೆಂಗಳೂರಿನ ಬಾರ್ ರೆಸ್ಟೋರೆಂಟ್ ಗಳಿಗೆ ಬಿಸಿ ಮುಟ್ಟಿಸಿದ್ದು, ನೋಟಿಸ್ ಜಾರಿ ಮಾಡಿದ್ದಾರೆ. ಒಂದು ಸಾವಿರಕ್ಕೂ ಹೆಚ್ಚು ಬಾರ್ ರೆಸ್ಟೋರೆಂಟ್ ಗಳಿಗೆ ನೋಟಿಸ್ ನೀಡಲಾಗಿದ್ದು, ಅವಧಿ ಮೀರಿ ಬಾರ್ ಹಾಗೂ ರೆಸ್ಟೋರೆಂಟ್ ಗಳನ್ನು ನಡೆಸುತ್ತಿದ್ದ ಹಾಗೂ ದಾಖಲೆ ಇಲ್ಲದೇ ಮದ್ಯ ಮಾರಾಟ ಮಾಡುತ್ತಿದ್ದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳುವ ಬಗ್ಗೆ ಎಚ್ಚರಿಕೆ ನೀಡಲಾಗಿದೆ. ಚುನಾವಣೆ ಹಿನ್ನೆಲೆಯಲ್ಲಿ ಬಾರ್ ಹಾಗೂ ರೆಸ್ಟೋರೆಂಟ್ ಗಳಿಗೆ ಚುನಾವಣಾ ಆಯೋಗ ನಿಯಮ ಪಾಲನೆಗೆ ಸೂಚಿಸಿದೆ. ಎಂ ಆರ್ ಪಿ ಶಾಪ್ ಗಳು ಕೂಡ ನಿಯಮಕ್ಕೆ ವಿರುದ್ಧವಾಗಿ ನಡೆದುಕೊಳ್ಳುವಂತಿಲ್ಲ. ಅಕ್ರಮ ಮದ್ಯ ಮಾರಾಟ ಹಾಗೂ ಸಾಗಾಟ ಕಂಡು ಬಂದಲ್ಲಿ ಜಪ್ತಿ ಮಾಡಗುತ್ತಿದೆ. ಈ ನಿಟ್ಟಿನಲ್ಲಿ ನೋಟಿಸ್ ನೀಡಿ ಎಚ್ಚರಿಸಲಾಗಿದೆ.

ರೌಡಿ ಶೀಟರ್ ಕುಣಿಗಲ್ ಗಿರಿ ಹತ್ಯೆಗೆ ಸುಪಾರಿ: ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ಕುಖ್ಯಾತ ರೌಡಿ ಶೀಟರ್ ಕುಣಿಗಲ್ ಗಿರಿ ಕೊಲೆಗೆ ಸುಪಾರಿ ಪಡೆದಿದ್ದ ಇಬ್ಬರು ಆರೋಪಿಗಳನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಕಾಮಾಕ್ಷಿಪಾಳ್ಯದ ರೌಡಿ ಶೀಟರ್ ಕುಣಿಗಲ್ ಗಿರಿ ಕೊಲೆಗೆ ಜೈಲಿನಿಂದಲೇ ಸ್ಕೆಚ್ ಹಾಕಿದ್ದು, ರಾಬರಿ ಕಿಟ್ಟಿಯಿಂದ ಸುಪಾರಿ ಪಡೆದ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಸಿಸಿಬಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ. ಸಿಲಿಂಡರ್ ಸುನಿಲ ಹಾಗೂ ಅವಿನಾಶ್ ಬಂಧಿತ ರೌಡಿಗಳು. ಸೂರಿ ಕೊಲೆ ಪ್ರಕರಣದಲ್ಲಿ ಜೈಲಿನಲ್ಲಿರುವ ರಾಬರಿ ಕಿಟ್ಟಿ, ಕುಣಿಗಲ್ ಗಿರಿಯನ್ನು ಮುಗಿಸಬೇಕೆಂದು ತನ್ನ ಶಿಷ್ಯನಾದ ಸಿಲಿಂಡರ್ ಸುನಿಲನಿಗೆ ಸುಪಾರಿ ನೀಡಿದ್ದ. ಈ ಸಿಲಿಂಡರ್ ಸುನಿಲ ಕೆಂಗೇರಿ ಠಾಣೆಯ ರೌಡಿಶೀಟರ್ ಆಗಿದ್ದಾನೆ. ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಆರೋಪಿಗಳನ್ನು ಸಿಸಿಬಿ ಬಂಧಿಸಿದೆ. ಪರಾರಿಯಾಗಿರುವ ಮತ್ತಿಬ್ಬರಿಗಾಗಿ ಹುಡುಕಾಟ ನಡೆಯುತ್ತಿದೆ. ಈ ಸಂಬಂಧ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರೈಸ್ ಪುಲ್ಲಿಂಗ್ ದಂಧೆ; ಮೂರು ರಾಜ್ಯಗಳ ಮೂವರ ಬಂಧನ, 70 ಲಕ್ಷ ರೂ. ವಶ

• ಉದಯವಾಹಿನಿ, ಬೆಂಗಳೂರು

ರೈಸ್ ಪುಲ್ಲಿಂಗ್ ಹೆಸರಿನಲ್ಲಿ ನಕಲಿ ತಾಮ್ರದ ಪಾತ್ರೆ ತೋರಿಸಿ ಜನರಿಗೆ ವಂಚಿಸುತ್ತಿದ್ದ ಮೂವರು ಆರೋಪಿಗಳನ್ನು ಬೆಂಗಳೂರಿನ ಜಯನಗರ ಪೊಲೀಸ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಜ್ಯದ ಶಿವಶಂಕರ್, ತಮಿಳುನಾಡಿನ ಅಬ್ದುಲ್ ಮತ್ತು ಪಂಜಾಬ್‌ನ ಸನ್ನಿಗಿಲ್ ಆವರನ್ನು ಸೆರೆಹಿಡಿಯಲಾಗಿದೆ. ಈ ಮೂವರಿಂದ ರೂ. 69.79 ಲಕ್ಷ ನಗದು ಹಣವನ್ನು ವಶಪಡಿಸಿ ಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಜಯನಗರದ 6ನೇ ಬ್ಲಾಕ್ ಯಡಿಯೂರು ಕೆರೆ ಹತ್ತಿರ ರೈಸ್ ಪುಲ್ಲಿಂಗ್ ಪಾತ್ರೆಯನ್ನು ಮಾರಾಟದ ಮಾಡುತ್ತಿದ್ದ ಬಗ್ಗೆ ಮಾಹಿತಿ ಲಭಿಸಿತ್ತು.

ಈ ಖಚಿತ ಮಾಹಿತಿಯನ್ನು ಆಧರಿಸಿ ಆರೋಪಿಗಳನ್ನು ಬಂಧಿಸಲಾಯಿತು ಜಯನಗರ ಪೊಲೀಸರು ತಿಳಿಸಿದ್ದಾರೆ. ಮೂವರು ಆರೋಪಿಗಳು ರೈಸ್ ಪುಲ್ಲಿಂಗ್ ಅನ್ನು ದಂಧೆಯಾಗಿ ಮಾಡಿಕೊಂಡಿದ್ದರು. ತಾಮ್ರದ ಪಾತ್ರೆಗೆ ಅಪಾರ ಬೆಲೆಯಿದ್ದು, ಮನೆಯಲ್ಲಿ ಇಟ್ಟುಕೊಂಡರೆ ಅದೃಷ್ಟ ಬರಲಿದೆ. ಹಣದ ಹೊಳೆ ಹರಿಯಲಿದೆ ಎಂದೂ ಗ್ರಾಹಕರನ್ನು ನಂಬಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ರಾಜಕೀಯ ಕುಟುಂಬಗಳಿಗೆ ಪ್ರತಿಷ್ಠೆಯಾದ ಲೋಕ

■ ಪ್ರಧಾನಿ ಎಚ್.ಡಿ.ದೇವೇಗೌಡರು ರೈತ ಹೋರಾಟದ ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಭದ್ರ ಬುನಾದಿ ಹಾಕಿ

• ಉದಯವಾಹಿನಿ, ಬೆಂಗಳೂರು

ಈ ಬಾರಿಯ ಲೋಕಸಭೆ ಚುನಾವಣೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಮಾತ್ರ ಪ್ರತಿಷ್ಠೆಯಾಗಿರದೆ ರಾಜ್ಯದ ಎರಡು ಪ್ರಬಲ ರಾಜಕೀಯ ಕುಟುಂಬ ಗಳಿಗೂ ಮಾಡು ಇಲ್ಲವೇ ಮಡಿ ಎಂಬಂತಾಗಿದೆ. ರಾಜಕೀಯವನ್ನೇ ಅರಗಿಸಿಕೊಂಡಿರುವ ಪ್ರಧಾನಿ ಎಚ್.ಡಿ.ದೇವೇಗೌಡರು ಹಾಗೂ ರೈತ ಹೋರಾಟದ ಮೂಲಕ ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಭದ್ರ ಬುನಾದಿ ಹಾಕಿ ರಾಜಕೀಯ ನಿವೃತ್ತಿ ಅಂಚಿನಲ್ಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಲೋಕಸಭೆ ಚುನಾವಣೆ ಪ್ರತಿಷ್ಠೆಯಾಗಿ ಪರಿಣಮಿಸಿದೆ.

ಒಂದು ವೇಳೆ ಈ ಚುನಾವಣೆಯಲ್ಲಿ ದೇವೇಗೌಡ ಮತ್ತು ಯಡಿಯೂರಪ್ಪ ಕುಟುಂಬಕ್ಕೆ ಅಪ್ಪಿತಪ್ಪಿಯೂ ಸ್ವಲ್ಪವೇನಾ ದರೂ ಹಿನ್ನಡೆಯಾದರೆ ಎರಡೂ ಕುಟುಂಬಗಳ ರಾಜಕೀಯ ಭವಿಷ್ಯಕ್ಕೆ ಕಲ್ಲು ಬೀಳುವುದರಲ್ಲಿ ಸಂಶಯವಿಲ್ಲ ಎಂದು ಇಬ್ಬರನ್ನೂ ಹತ್ತಿರದಿಂದ ಬಲ್ಲವರು ಹೇಳುತ್ತಿದ್ದಾರೆ.

ಹೀಗಾಗಿಯೇ ದೇವೇಗೌಡ ಮತ್ತು ಯಡಿಯೂರಪ್ಪ ತಮ್ಮ ರಾಜಕೀಯ ಜಿದ್ದನ್ನು ಮರೆತು ಪರಸ್ಪರ ಒಂದಾಗಿ ಹೆಗಲಿಗೆ ಹೆಗಲು ಕೊಟ್ಟು ಮೈತ್ರಿಯಾಗಿರುವುದು ಹೊಸ ಬೆಳವಣಿಗೆಯಾಗಿದೆ. ಇತ್ತೀಚಿನ ಚುನಾವಣೆಗಳಲ್ಲಿ ದೇವೇಗೌಡ ಅವರ ನೇತೃತ್ವದ ಜೆಡಿಎಸ್ ಕಳಪೆ ಸಾಧನೆ ಮಾಡಿದ್ದು, ಈ ಚುನಾವಣೆ ಕೂಡ ಕೈ ಕೊಟ್ಟರೆ ದೇವೇಗೌಡರ ಕುಟುಂಬದ ರಾಜಕೀಯ ಹಿಡಿತ ಮತ್ತಷ್ಟು ಸಡಿಲಗೊಳ್ಳುವುದರಲ್ಲಿ ಯಾವುದೇ ಅನುಮಾನವಿಲ್ಲ.

2004ರಲ್ಲಿ 58 ಶಾಸಕರನ್ನು ಹೊಂದಿದ್ದ ಜೆಡಿಎಸ್ ಈಗ ಕೇವಲ 19 ಶಾಸಕರು ಹಾಗೂ ಏಕೈಕ ಸಂಸದ ಸ್ಥಾನಕ್ಕೆ ಇಳಿದಿದೆ. ಜೆಡಿಎಸ್ನ ಅಧಃಪತನಕ್ಕೆ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರೇ ಪ್ರಮುಖ ಕಾರಣ. 2023ರ ವಿಧಾನಸಭಾ ಚುನಾವಣೆಯಲ್ಲಿ ಒಕ್ಕಲಿಗ ಸಮುದಾಯದ ಮತಗಳನ್ನು ಗಣನೀಯವಾಗಿ ಕಾಂಗ್ರೇಸ್ ಕಡೆ ತಿರುಗಿಸುವಲ್ಲಿ ಡಿ.ಕೆ.ಶಿವಕುಮಾರ್ ಯಶಸ್ವಿಯಾಗಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು ಆಗ್ರೆಸ್ಸಿವ್ ಆಗಿ ಒಕ್ಕಲಿಗ ಸಮುದಾಯದ ಮತಗಳನ್ನು ಸೆಳೆಯುತ್ತಿದ್ದಾರೆ. ಒಕ್ಕಲಿಗ ಮುಖಂಡರ ಜೊತೆ ರಹಸ್ಯ ಸಭೆಗಳನ್ನು ನಡೆಸುತ್ತಿರುವ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷೆಯನ್ನು ವ್ಯಕ್ತಪಡಿಸಿದ್ದಾರೆ. ಅದರ ಜೊತೆಗೆ ದೇವೇಗೌಡರ ಕುಟುಂಬದ ಪ್ರಾಬಲ್ಯದಿಂದ ತಮ್ಮನ್ನು ತಾವು ಮುಕ್ತಗೊಳಿಸಬೇಕಾದ ಅಗತ್ಯವನ್ನು ಒಕ್ಕಲಿಗ ಮುಖಂಡರ ಮುಂದೆ ಪ್ರತಿಪಾದಿಸುತ್ತಿದ್ದಾರೆ. ಜೊತೆಗೆ ತಮ್ಮನ್ನು ಬೆಂಬಲಿಸುವಂತೆ ಮನವಿ ಮಾಡುತ್ತಿದ್ದಾರೆ ಎಂದು ಕಾಂಗ್ರೇಸ್ ಮೂಲಗಳು ಹೇಳಿವೆ.

ಉದಯವಾಹಿನಿ ಚಿತ್ರ

ಬಿಜೆಪಿ ಪಕ್ಷ ಹಲವು ಸವಾಲು

ಈ ಸಮಸ್ಯೆಯನ್ನು ಗ್ರಹಿಸಿರುವ ದೇವೇಗೌಡ ಅವರು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದಾರೆ. ನರೇಂದ್ರಮೋದಿ ಅವರು ಮೂರನೇ ಅವಗೆ ಪ್ರಧಾನಿಯಾದರೆ ಕೇಂದ್ರ ಸರ್ಕಾರದ ಭಾಗವಾಗಬಹುದು. ಆದರೆ ಒಕ್ಕಲಿಗರು ಗೌಡರ ಕುಟುಂಬವನ್ನು ಅಷ್ಟು ಸುಲಭವಾಗಿ ಬಿಟ್ಟುಬಿಡುತ್ತಾರೆಯೇ ದೇವೇಗೌಡರ ಕುಟುಂಬ ಯಾವಾಗ ರಾಜಕೀಯವಾಗಿ ಕುಸಿತ ಕಂಡಿದೆಯಾ ಆಗೆಲ್ಲಾ ಒಕ್ಕಲಿಗ ಸಮುದಾಯ ಅವರ ರಕ್ಷಣೆಗೆ ನಿಂತಿದೆ ಎಂಬ ಭಾವನೆ ಸಮುದಾಯದ ಅನೇಕರಲ್ಲಿದೆ.

ಅತ್ತ ದೇವೇಗೌಡರ ಕುಟುಂಬಕ್ಕೆ ಡಿ.ಕೆ. ಶಿವಕುಮಾರ್ ಸವಾಲಾಗಿದ್ದರೆ, ಇತ್ತ ಬಿಎಸ್ ಯಡಿಯೂರಪ್ಪ ಅವರ ಕುಟುಂಬಕ್ಕೆ ಬಿಜೆಪಿ ಪಕ್ಷದಲ್ಲಿಯೇ ಹಲವು ಸವಾಲುಗಳು ಎದುರಾಗಿವೆ. ಬಿಎಸ್ ಯಡಿಯೂರಪ್ಪ ಅವರು ತಮ್ಮ ಪುತ್ರ ಬಿವೈ ವಿಜಯೇಂದ್ರ ಅವರನ್ನು ಬಿಜೆಪಿ ರಾಜಾಯಧ್ಯಕ್ಷರನ್ನಾಗಿ ಮಾಡಿದ್ದಕ್ಕೆ ರಾಜ್ಯ ಬಿಜೆಪಿ ಘಟಕದಿಂದ ಭಾರೀ ವಿರೋಧ ವ್ಯಕ್ತವಾಗಿತ್ತು. ಬಸನಗೌಡ ಪಾಟೀಲ್ ಯತ್ನಾಳ್, ಸಿಟಿ ರವಿ, ನಳಿನ್ ಕುಮಾರ್ ಕಟೀಲ್, ಕೆಎಸ್ ಈಶ್ವರಪ್ಪ, ಡಿವಿ ಸದಾನಂದಗೌಡ ಸೇರಿ ಹಲವು ಹಿರಿಯ ಬಿಜೆಪಿ ನಾಯಕರು ವಿಜಯೇಂದ್ರ ಅವರ ಬಡ್ತಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು.

ಹಳೇ ಮೈಸೂರು ಭಾಗದಲ್ಲಿ ಕಾಂಗ್ರೇಸ್ ಸಾಕಷ್ಟು ಕ್ಷೇತ್ರಗಳನ್ನು ಗೆದ್ದರೆ ರಾಜ್ಯ ರಾಜಕಾರಣದಲ್ಲಿ ಜೆಡಿಎಸ್ಗೆ ಅಸ್ತಿತ್ವದ ಪ್ರಶ್ನೆ ಉಂಟಾಗಲಿದೆ ಎಂದು ಜೆಡಿಎಸ್ನ ಹಿರಿಯ ಕಾರ್ಯಕರ್ತರೊಬ್ಬರು ಹೇಳಿದ್ದಾರೆ. ಒಕ್ಕಲಿಗ ಸಮುದಾಯದ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಬಳಸಿಕೊಂಡು ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳನ್ನು ಓಲೈಸಲು ಕಾಂಗ್ರೇಸ್ ಸರ್ವಪ್ರಯತ್ನ ನಡೆಸುತ್ತಿದೆ.

ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾದ ಕಾಂಗ್ರೇಸ್ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೇಸ್ ನಾಯಕರ ಹೇಳಿಕೆಗೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತ ವಾಗುತ್ತಿದ್ದು, ರಾಜ್ಯ ಸರ್ಕಾರ ಈಗ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದೆ. ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಮತ್ತು ಸಂಬಂಧಪಟ್ಟ ಎಲ್ಲರನ್ನು ಜೈಲಿಗೆ ಹಾಕಲಾಗುವುದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶನಿವಾರ ಹೇಳಿದ್ದಾರೆ.

ಸಂತ್ರಸ್ತರ ಕುಟುಂಬ ಭೇಟಿ ಮಾಡುವಂತೆ ನಾವು ಸಚಿವರಿಗೆ ಸೂಚಿಸಿದ್ದೇವೆ. ಯಾರ ಮೇಲೂ ಕರುಣೆ ಇಲ್ಲ. ಈ ಬಗ್ಗೆ ಅಲ್ಪಸಂಖ್ಯಾತ ಮುಖಂಡರೂ ಮಾತನಾಡಿದ್ದಾರೆ. ಕಾನೂನು ಪ್ರಕಾರ ಶಿಕ್ಷೆ ನೀಡಲಾಗುವುದು ಎಂದು ರಾಜ್ಯ ಕಾಂಗ್ರೇಸ್ ಅಧ್ಯಕ್ಷ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಇದು 'ಲವ್ ಜಿಹಾದ್' ಕೊಲೆ ಎಂಬ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, ಬೇರೆಯವರ ಹೇಳಿಕೆಯನ್ನು ವಿವರಿಸಲು ಸಾಧ್ಯವಿಲ್ಲ ಎಂದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹತ್ಯೆಗೀಡಾದ ಮಹಿಳೆಯ ಮನೆಗೆ ಶನಿವಾರ ಭೇಟಿ ನೀಡಿ ಸಾಂತ್ವನ ಹೇಳಿದರು. ಈ ವೇಳೆ ಸಂತ್ರಸ್ತೆಯ ತಂದೆ ನಿರಂಜನ ಹಿರೇಮಠ ಅವರು ತಮ್ಮ ಅಳಲು ತೋಡಿಕೊಂಡಿದ್ದು, ಹಂತಕರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಮನವಿ ಮಾಡಿದರು.

ಉದಯವಾಹಿನಿ ಚಿತ್ರ

ಸಾರ್ವಜನಿಕ ತೀವ್ರ ಆಕ್ರೋಶ

ಬಳಿಕ ಮಾತನಾಡಿದ ಸಚಿವೆ, ನಮ್ಮ ಸಮುದಾಯ ಮತ್ತು ನಾನು ಕುಟುಂಬದೊಂದಿಗೆ ನಿಲ್ಲುತ್ತೇವೆ ಎಂದು ಪೋಷಕರಿಗೆ ಭರವಸೆ ನೀಡಿದ್ದೇನೆ. ಅವರ ಮಗಳಿಗೆ ನ್ಯಾಯ ದೊರಕಿಸಿಕೊಡುತ್ತೇವೆ. ನಿಷ್ಪಕ್ಷಪಾತ ತನಿಖೆ ನಡೆಯಲಿದ್ದು, ಅದರಲ್ಲಿ ಯಾವುದೇ ಅನುಮಾನ ಬೇಡ. ಇದೊಂದು ಹೇಯ ಕೃತ್ಯವಾಗಿದ್ದು, ಇಂತಹ ಘಟನೆಗಳನ್ನು ತಡೆಯಬೇಕು. ತನಿಖೆಯಲ್ಲಿ

ರಾಜಕೀಯಕ್ಕಾಗಿ ಒಬ್ಬರ ಸಾವನ್ನು ಬಳಸಿಕೊಳ್ಳುವುದು ದುರ್ದೈವ

ನೇಹಾ ಕೊಲೆಗಾರನಿಗೆ ಉಗ್ರ ಶಿಕ್ಷೆ, ರಾಜಕೀಯ ಬಳಕೆ ಏಕೆ, ಸಿಎಂ ಪ್ರಶ್ನೆ: ಡಿಜಿಪಿ ಎಲ್ಲಿದ್ದಾರೆ, ಬೊಮ್ಮಾಯಿ ಆಕ್ರೋಶ

• ಉದಯವಾಹಿನಿ ಮೈಸೂರು

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆಯನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಕೊಲೆಗಾರರನ್ನು ಕೂಡಲೇ ಬಂಧಿಸಲಾಗಿದೆ. ಇದು ಲವ್ ಜಿಹಾದ್ ಪ್ರಕರಣವಲ್ಲ. ಸರ್ಕಾರ ತನಿಖೆಯನ್ನು ಗಂಭೀರವಾಗಿ ಕೈಗೊಂಡಿದ್ದು, ಕೊಲೆಗಾರನಿಗೆ ಉಗ್ರ ಶಿಕ್ಷೆ ನೀಡಲು ಪ್ರಯತ್ನ ಮಾಡಲಾಗುವುದು.

ಆದರೆ ಪ್ರತಿಪಕ್ಷಗಳು ನೇಹಾಹಿರೇಮಠ ಅವರ ಕೊಲೆ ಪ್ರಕರಣವನ್ನು ರಾಜಕೀಯಕ್ಕೆ ಬಳಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು ಮೈಸೂರಿನ ತಮ್ಮ ನಿವಾಸದಲ್ಲಿ ಶನಿವಾರ ಮಾಧ್ಯಮದವರೊಂದಿಗೆ ಮಾತನಾಡಿದ ಸಿದ್ದರಾಮಯ್ಯ ಕೊಲೆ ಪ್ರಕರಣವನ್ನು ಉಗ್ರವಾಗಿ ಖಂಡಿಸಿದರು.

ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಎಲ್ಲಾ ಕಾಲದಲ್ಲಿಯೂ ಕೊಲೆಗಳಾಗಿವೆ. ಹಾಗೆಂದು ಕಾನೂನು ಸುವ್ಯವಸ್ಥೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ. ಕರ್ನಾಟಕದಲ್ಲಿ ಇರುವಷ್ಟು ಶಾಂತಿ ಸುವ್ಯವಸ್ಥೆ ಬೇರೆ ರಾಜ್ಯಗಳಲ್ಲಿಲ್ಲ. ನಾವು ಯಾವುದೇ ಕೃತ್ಯ ನಡೆದರೂ, ಅದನ್ನು ತೀವ್ರವಾಗಿ ಖಂಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ರಾಜಕೀಯಕ್ಕಾಗಿ ಒಬ್ಬರ ಸಾವನ್ನು ಬಳಸಿಕೊಳ್ಳುವುದು ದುರ್ದೈವ. ಇದು ಖಂಡನೀಯ. ರಾಜ್ಯಾದ್ಯಂತ ಪ್ರತಿಭಟನೆಗಳಾಗುತ್ತಿರುವ ಬಗ್ಗೆ ಮಾತನಾಡಿ ಇದರ ಪರಿಣಾಮ ಸರ್ಕಾರದ ಮೇಲೆ ಆಗುವುದಿಲ್ಲ ಎಂದರು.

ಹುಬ್ಬಳ್ಳಿಯಲ್ಲಿ ನಡೆದ ನೇಹಾ ಹತ್ಯೆ ಪ್ರಕರಣದ ಕುರಿತು ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು, ಎಬಿವಿಪಿಯವರಿಗೆ ಮತ್ತು ಬಿಜೆಪಿಗೆ ಪ್ರಕರಣದ ಸತ್ಯಾ ಸತ್ಯತೆ ಗೊತ್ತಿಲ್ಲ. ಇದರಲ್ಲಿ ಬಿಜೆಪಿಯವರು ರಾಜಕೀಯ ಮಾಡಲು ಹೊರಟಿದ್ದಾರೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ನನಗೂ ಜವಾಬ್ದಾರಿ ಇದೆ. ಜವಾಬ್ದಾರಿತನದಿಂದ ನಡೆದುಕೊಳ್ಳುತ್ತಿದ್ದು, ನಮಗೆ ಬಂದಿರುವ ವರದಿಯನ್ನು ನಾವು ತಿಳಿಸಿದ್ದೇವೆ ಅಷ್ಟೇ ಎಂದು ಸ್ಪಷ್ಟಪಡಿಸಿದರು. ಪ್ರಕರಣದ ಕುರಿತು

ಉದಯವಾಹಿನಿ ಚಿತ್ರ

ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ

ಪೊಲೀಸರು ಕೂಲಂಕುಶವಾಗಿ ತನಿಖೆ ನಡೆಸುತ್ತಾರೆ. ಬಳಿಕ ಸತ್ಯಾಂಶ ಹೊರಬರಲಿದೆ. ನನ್ನ ಹೇಳಿಕೆಯಿಂದ ಯುವತಿಯ -ತಾಯಿಗೆ ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುತ್ತೇನೆ. ಆದರೆ, ಸತ್ಯವನ್ನು ಮುಚ್ಚಿಡಲು ಆಗುವುದಿಲ್ಲ ಎಂದು ಹೇಳಿದರು.

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ಕೊಲೆಯಾಗಿದೆ. ವಿದ್ಯಾರ್ಥಿನಿ ಕೊಲೆ ನಡೆದ ದಿನವೇ ರಾತ್ರಿ ಗದಗನಲ್ಲಿ ದುಷ್ಕರ್ಮಿಗಳು ಅಷ್ಟೊಂದು ಧೈರ್ಯದಿಂದ ಕೊಲೆ ಮಾಡುತ್ತಾರೆ ಎಂದರೆ ಅವರಿಗೆ ಈ ಸರ್ಕಾರದಲ್ಲಿ ಮೊದಲು ಯಾರಿಗೆ ರಕ್ಷಣೆ ಸಿಗುತ್ತಿದೆ. ಕೊಲೆಗಡುಕರು ಹಂತಕರು ರಾಜ್ಯದ ಮೊದಲ ಪ್ರಜೆಗಳಾಗಿದ್ದಾರೆ. ರಾಜಕಿಯ ಬೆಂಬಲ ಅವರಿಗೆ ಇದೆ. ನೇರವಾಗಿ ಆಡಳಿತದ ವೈಫಲ್ಯದ ಜೊತೆಗೆ ಮತ ಬ್ಯಾಂಕ್ ತುಷ್ಟೀಕರಣದಿಂದ ಈ ರೀತಿಯ ಘಟನೆಗಳು ನಡೆಯುತ್ತಿವೆ. ಸಾಮೂಹಿಕ ಹತ್ಯೆಗಳು ರಾಜಾರೋಷವಾಗಿ ನಡೆಯುತ್ತಿವೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದರು. 24 ಗಂಟೆಯಲ್ಲಿ ಆರೋಪಿಗಳನ್ನು ಬಂಧಿಸಬೇಕೆಂದು ಆಗ್ರಹಿಸಿದರು.

ಸರ್ಕಾರ ಈಗಿನ ಘಟನೆಯನ್ನು ಸಮರ್ಥನೆ ಮಾಡಿಕೊಳ್ಳುತ್ತಿದೆ

ಜನರ ಮಾನ ಪ್ರಾಣ ಕಾಪಾಡುವಲ್ಲಿ ಈ ಸರ್ಕಾರ ಸಂಪೂರ್ಣ ಎಡವಿದೆ. ಹಿಂದೆ ಆಗಿಲ್ಲಾ ಎಂದು ಸರ್ಕಾರ ಈಗಿನ ಘಟನೆಯನ್ನು ಸಮರ್ಥನೆ ಮಾಡಿಕೊಳ್ಳುತ್ತಿದೆ. ನಮ್ಮ ಅವಧಿಯಲ್ಲಿ ಚಿಕ್ಕಮಗಳೂರಿನಲ್ಲಿ ಹೆಣ್ಣು ಮಗಳ ಮೇಲೆ ಅತ್ಯಾಚಾರ ನಡೆದಾಗ ನಾವು ಅವನನ್ನು ಗಲ್ಲಿಗೇರಿಸುವಂತೆ ಕ್ರಮ ಕೈಗೊಂಡಿದ್ದೇವೆ. ಹುಬ್ಬಳ್ಳಿ ಪ್ರಕರಣದಲ್ಲಿಯೂ ಅದೇ ರೀತಿ ಆಗಲಿ ಎಂದು ಆಗ್ರಹಿಸಿದರು.

ಸಿಎಂ ಸಿದ್ದರಾಮಯ್ಯ ಹಾಗೂ ಗೃಹ ಸಚಿವರು ನೇಹಾ ಕೊಲೆ ಪ್ರಕರಣವನ್ನು ವೈಯಕ್ತಿಕ ಘಟನೆ ಅಂತ ಎಷ್ಟು ಸರಳವಾಗಿ ಹೇಳುತ್ತಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಅಪರಾಧಿಗಳ ಸೇವಕನಾಗಿದೆ. ಕಾನೂನು ಹದಗೆಟ್ಟಾಗ ಕ್ರಿಮಿನಲ್‌ಗಳು ರಾಜಾರೋಷವಾಗಿ ತಿರುಗಾಡುತ್ತಾರೆ. ಮುಖ್ಯಮಂತ್ರಿಗಳು ಒಂದು ಟ್ವೀಟ್ ಮಾಡಿದರೆ ನಿಮ್ಮ ಕೆಲಸ ಮುಗಿಯಿತೇ. ಗದಗ ನಗರದ ಜನರು ಸಂಪೂರ್ಣ ಭಯ ಭೀತರಾಗಿದ್ದಾರೆ. ಯಾವ ರಾಜ್ಯದಲ್ಲಿ ಜನರು ರಾತ್ರಿ ನೆಮ್ಮದಿಯಿಂದ ಮಲಗಲು ಸಾಧ್ಯವಿಲ್ಲವೊ ಅದನ್ನು ಜಂಗಲ್ ರಾಜ್ಯ ಎನ್ನಲಾಗುತ್ತದೆಯೇ ಎಂದು ರಾಜ್ಯ ಸರ್ಕಾರದ ವಿರುದ್ಧ ಕಟು ಶಬ್ದಗಳಿಂದ ಟೀಕಿಸಿದರು. -ಬೊಮ್ಮಾಯಿ

ಜಾತ್ರೆಯಲ್ಲಿ ವಿಶೇಷ ಅಲಂಕಾರದಿಂದ ಎತ್ತುಗಳ ಮೆರವಣಿಗೆ

• ಉದಯವಾಹಿನಿ ಶಿಡ್ಲಘಟ್ಟ

ಪ್ರತಿವರ್ಷದಂತೆ ಈ ವರ್ಷವೂ ಜಯಂತಿ ಗ್ರಾಮದ ಶ್ರೀ ಯೋಗಿ ದ್ಯಾವಪ್ಪ ತಾತನವರ ಜಯಂತೋತ್ಸವ ಶನಿವಾರ ಬಹಳ ವಿಜೃಂಭಣೆಯಿಂದ ನಡೆಯಿತು.

ಶಿಡ್ಲಘಟ್ಟ ತಾಲೂಕಿನ ಅಬ್ಬೂಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ದ್ಯಾವಪ್ಪನ ಗುಡಿ ಗ್ರಾಮದಲ್ಲಿ ಸುಮಾರು ವರ್ಷಗಳಿಂದ ನಡೆದುಕೊಂಡು ಬರುತ್ತಿರುವ ಶ್ರೀ ಯೋಗಿ ದ್ಯಾವಪ್ಪನವರ ಜಯಂತೋತ್ಸವದಲ್ಲಿ ದೊಡ್ಡತೇಕಹಳ್ಳಿ ಗ್ರಾಮ ಪಂಚಾಯತಿಯ ಚಿಕ್ಕತೇಕಹಳ್ಳಿ ಗ್ರಾಮದ ರೈತರಿಂದ ಎತ್ತುಗಳ ಅದ್ದೂರಿ ಮೆರವಣಿಗೆ ನಡೆಯಿತು. ಹಾಗೆಯೇ ಚಿಕ್ಕತೇಕಹಳ್ಳಿ ಗ್ರಾಮಸ್ಥರಿಂದ ಶ್ರೀ ಯೋಗಿ ದ್ಯಾವಪ್ಪ ತಾತನವರಿಗೆ ವಿಶೇಷ ಪೂಜೆ ನೆರವೇರಿಸಿ ಭಕ್ತಾಧಿಗಳಿಗೆ ಪಾನಕ, ಮಜ್ಜಿಗೆ, ಹೆಸರುಬೇಳೆ ವಿತರಿಸಿದರು.ಇನ್ನು ಯುವಕರು ಡಿಜೆ ಸೌಂಡ್‌ನೊಂದಿಗೆ ಭರ್ಜರಿ ನೃತ್ಯಗಳನ್ನು ಪ್ರದರ್ಶಿಸಿದರು. ಶ್ರೀ ಯೋಗಿ ದ್ಯಾವಪ್ಪನವರ ದೇವಸ್ಥಾನಕ್ಕೆ ಭಾರಿ ದನಗಳ ಜಾತ್ರೆಯಲ್ಲಿ ಸುತ್ತು

ಉದಯವಾಹಿನಿ ಚಿತ್ರ

ಮುತ್ತಲ ಜಿಲ್ಲೆಗಳಿಂದ ಹಾಗೂ ಅಂತರರಾಜ್ಯದಿಂದ ಎತ್ತುಗಳು ಆಗಮಿಸಿದ್ದವು ಈ ಜಾತ್ರೆಯಲ್ಲಿ ವಿಶೇಷವಾಗಿ ಎತ್ತುಗಳ ಮಾರಾಟ, ಕೊಂಡುಕೊಳ್ಳುವುದು ಬಹಳ ಜೋರಾಗಿ ಅದ್ದೂರಿಯಾಗಿ ನಡೆಯುತ್ತದೆ. ಇಲ್ಲಿ ಈ ಬಾರಿ ಕನಿಷ್ಟ 40 ಸಾವಿರದಿಂದ ಗರಿಷ್ಠ 1.50 ಲಕ್ಷ ವರೆಗೂ ಮಾರಾಟವಾಗಿದೆ. ಹಾಸನ ಜಿಲ್ಲೆಯಿಂದ ಬಂದಿರುವ ರೈತ 1.50 ಲಕ್ಷ ರೂಪಾಯಿಗಳ ಎತ್ತುಗಳನ್ನು ಕೊಂಡುಕೊಳ್ಳುವ ಮೂಲಕ ಅತಿ ಹೆಚ್ಚಿನ ಬೆಲೆ ಬಾಳುವ ಎತ್ತುಗಳನ್ನ ಚಿಕ್ಕತೇಕಹಳ್ಳಿ ಗ್ರಾಮದ ರೈತರಿಂದ ಮಾರಾಟವಾಯಿತು.

ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಕಾಂಗ್ರೇಸ್ ಮುಖಂಡ ಆಂಜಿನಪ್ಪ ಪುಟ್ಟು ಶ್ರೀ ಯೋಗಿ ದ್ಯಾವಪ್ಪ ತಾತನವರ ದೆರವಸ್ಥಾನಕ್ಕೆ ತೆರಳಿ ವಿಶೇಷವಾದ ಪೂಜೆ ನೆರವೇರಿಸಿ ದೇವರಲ್ಲಿ ಪ್ರಾರ್ಥಿಸಿದರು. ನಂತರ ಮಾತನಾಡಿದ ಅವರು ತಾಲ್ಲೂಕಿನಾದ್ಯಂತ ಬರಗಾಲ ಎದುರಿಸುತ್ತಿದ್ದು ರೈತರು ಕಂಗೆಟ್ಟಿದ್ದಾರೆ. ಮಳೆ ಇಲ್ಲದೆ ರೈತರು ಕಂಗಾಲಾಗಿದ್ದಾರೆ ದೇವರ ಕೃಪೆಯಿಂದ ಶೀಘ್ರದಲ್ಲಿ ಮಳೆಯಾಗಿ ರೈತರಿಗೆ ಬೆಳೆ ಬೆಳೆದು ಬೆಂಬಲ ಬೆಲೆ ಸಿಗಲಿ, ರೈತರಿಗೆ ಮಳೆಯಾಗಿ ಅನುಕೂಲ ಮಾಡಿ ಕೊಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು. ಲೋಕಸಭಾ ಚುನಾವಣೆ ಪ್ರಯುಕ್ತ ನೀತಿ ಸಂಹಿತೆ ಜಾರಿಯಲ್ಲಿ ಇದ್ದರೂ ಅನುಮತಿ ಪಡೆದು ಜಾತ್ರೆಯು ಬಹಳ ವಿಜೃಂಭಣೆಯಿಂದ ನಡೆಯುತ್ತಿದೆ. ಸುಡು ಬಿಸಲು ಸುಡುತ್ತಿದ್ದರು ಜಾತ್ರೆಗೆ ಸಾವಿರಾರು ಜನ ಭಾಗವಹಿಸಿ ದೇವರ ಕೃಪೆಗೆ ಪಾತ್ರರಾದರು.

ಈ ಅದ್ದೂರಿ ಜಾತ್ರೆಗೆ ಚಿಕ್ಕತೇಕಹಳ್ಳಿ, ದೊಡ್ಡತೇಕಹಳ್ಳಿ,ಗೊರಮಿಲ್ಲಹಳ್ಳಿ,ಸಾದಹಳ್ಳಿ,ಬೈರಗಾನಹಳ್ಳಿ, ಕೋಟಹಳ್ಳಿ,ಮಲ್ಲಹಳ್ಳಿ ಹಾಗೂ ಸುತ್ತಮುತ್ತಲಿನ ಭಕ್ತಾಧಿಗಳು ಪಾಲ್ಗೊಂಡಿದ್ದರು.

ಕರ್ನಾಟಕ ರಿಪಬ್ಲಿಕನ್ ಸೇನಾ ಸಂಘಟನೆ ರಾಜ್ಯಪ್ರದಾನ ಕಾರ್ಯದರ್ಶಿ ಚಿಕ್ಕನಾರಾಯಣ ಅವರಿಂದ ಪತ್ರಿಕಾಗೋಷ್ಠಿ

ಉದಯವಾಹಿನಿ ಚಿತ್ರ

ಭ್ರಷ್ಟ ಅಧಿಕಾರಿಗಳ ರಕ್ಷಣೆಗೆ ಖಂಡನೆ

• ಉದಯವಾಹಿನಿ,ಬಂಗಾರಪೇಟೆ

ಪಟ್ಟಣದ ಹೊರವಲಯದಲ್ಲಿರುವ ಪಾರ್ಕ್ ನಲ್ಲಿ ಕರ್ನಾಟಕ ರಿಪಬ್ಲಿಕನ್ ಸೇನಾ ಸಂಘಟನೆ ವತಿಯಿಂದ ಹಮ್ಮಿಕೊಂಡಿದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಚಿಕ್ಕನಾರಾಯಣ. ಕೋಲಾರ ಜಿಲ್ಲಾದ್ಯಂತ 5 ತಾಲ್ಲೂಕುಗಳಲ್ಲಿ ಪಶುವೈದ್ಯ ಇಲಾಖೆಯ ಬಹುಕೋಟಿ ರೂ.ಗಳ ಹಗರಣಗಳ ಕುರಿತು ಸುಮಾರು ಎರಡು ವರ್ಷಗಳಿಂದ ಕೋಲಾರ ಜಿಲ್ಲೆ ಹಾಗೂ ರಾಜ್ಯ ಪಶು ಇಲಾಖೆಯಲ್ಲಿ ಹಲವು ಬಾರಿ ಭ್ರಷ್ಟ ಅಧಿಕಾರಿಗಳ ವಿರುದ್ಧ ಸಾಕ್ಷ ಸಮೇತ ಉನ್ನತ ಅಧಿಕಾರಿಗಳಿಗೆ ದೂರು ಕೊಟ್ಟರು ಸಹ ಕ್ರಮ ಜರುಗಿಸದೆ ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ.

ಭ್ರಷ್ಟ ಅಧಿಕಾರಿಗಳ ರಕ್ಷಣೆಗೆ ರಾಜಕಾರಣಿಗಳು ಹಾಗೂ ರಾಜ್ಯ ಉನ್ನತ ಅಧಿಕಾರಿಗಳು ನಿಂತಿರುವುದು ಖಂಡನೀಯ. ಕರ್ನಾಟಕ ರಿಪಬ್ಲಿಕನ್ ಸೇನಾ ಸಂಘಟನೆ ವತಿಯಿಂದ ರಾಜ್ಯಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪಶುವೈದ್ಯ ಇಲಾಖೆ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಎದುರು ಕೋಲಾರ ಜಿಲ್ಲಾ ಪಶುವೈದ್ಯ ಇಲಾಖೆ ಬಹುಕೋಟಿ ಹಗರಣಗಳ ವಿರುದ್ಧ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲು ಸಿದ್ದರಿದ್ದೇವೆ ಎಂದರು. ಈ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ವಿ. ಅಮರೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ .ವಿ. ಶ್ರೀನಾಥ್, ಮಂಜುನಾಥ್ ಇದರು.

ಅಂಗನವಾಡಿ ಕಾರ್ಯಕರ್ತೆ-ಸಹಾಯಕಿಯರ ಆನ್‌ಲೈನ್ ಅರ್ಜಿ ಆಹ್ವಾನ ಗಡುವು ವಿಸ್ತರಣೆ

• ಉದಯವಾಹಿನಿ,ಬಂಗಾರಪೇಟೆ

ಜಿಲ್ಲೆಯಲ್ಲಿನ ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನದ ಗಡುವನ್ನು ಸಾರ್ವಜನಿಕ ಹಿತಾಸಕ್ತಿಯಿಂದ ಅಂತಿಮ ದಿನಾಂಕವನ್ನು ವಿಸ್ತರಿಸಲು ಕರ್ನಾಟಕ ದಲಿತ ರೈತ ಸೇನೆ ಅಧ್ಯಕ್ಷ ಹುಣಸನಹಳ್ಳಿ ವೆಂಕಟೇಶ್ ಅವರು ಪತ್ರದ ಮುಖೇನ ಜಿಲ್ಲಾಧಿಕಾರಿಗಳಿಗೆ ಒತ್ತಾಯಿಸಿದ್ದರು. ಇದಕ್ಕೆ ಸ್ಪಂಧಿಸಿದ ಜಿಲ್ಲಾಧಿಕಾರಿಗಳು ಮೇ.20ರವರಿಗೆ ಅಂತಿಮ ದಿನಾಂಕವನ್ನು ವಿಸ್ತರಿಸಿದ್ದಾರೆಂದು ತಿಳಿಸಿದ್ದಾರೆ.

ಏ.19ರಂದು ಕೊನೆ ದಿನಾಂಕ

ಪಟ್ಟಣದ ಕಛೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕರ್ತರು ಹಾಗೂ ಸಹಾಯಕಿಯರಿಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ವಿದ್ಯಾರ್ಹತೆಯ ಅನುಗುಣವಾಗಿ ಅರ್ಜಿ ಗಳನ್ನು ಆಹ್ವಾನ ಮಾಡಿದ್ದು, ಏ.19ರಂದು ಕೊನೆ ದಿನಾಂಕ ವಾಗಿರುತ್ತದೆ ಆದರೆ ಲೋಕಸಭಾ ಚುನಾವಣೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ತಾಲ್ಲೂಕು ಮಟ್ಟದ ತಹಸೀಲ್ದಾರ್, ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಿಗರು ಚುನಾವಣಾ ಕರ್ತವ್ಯ ನಿಮಿತ್ತ ಕಾರ್ಯ ಪ್ರವೃತ್ತರಾಗಿರುತ್ತಾರೆ. ಅರ್ಹ ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರವನ್ನು ನೀಡಲು ವಿಳಂಭವಾಗುತ್ತಿರುವುದರಿಂದ ಅರ್ಹ ಫಲಾನುಭವಿಗಳು ಈ ಅವಕಾಶ ಸದುಪಯೋಗಪಡಿಸಿ ಕೊಳ್ಳಲು ಆಗದಿರುವ ಕಾರಣ ಸಾರ್ವಜನಿಕ ಹಿತಾಸಕ್ತಿಯನ್ನು ಕೋರಿ ಅಂತಿಮ ದಿನಾಂಕವನ್ನು ವಿಸ್ತರಿಸಲು ಪತ್ರದ ಮುಖೇನ ಮನವಿ ಸಲ್ಲಿಸಲಾಗಿತ್ತು.

ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಮನವಿಗೆ ಸ್ಪಂದಿಸಿ ಅಂತಿಮ ಗಡುವನ್ನು ಮೇ.20ರವರೆಗೆ ವಿಸ್ತರಿಸಿದ್ದಾರೆ, ಹಾಗಾಗಿ ಫಲಾನುಭವಿಗಳು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಲು ತಿಳಿಸಿದ್ದಾರೆ. ಕರ್ನಾಟಕ ದಲಿತ ರೈತಸೇನೆ ಮನವಿಯನ್ನು ಪುರಸ್ಕರಿಸಿ ಆದೇಶ ನೀಡಿದ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಪುಣ್ಯಾತ್ಮ ಕುಮಾರಣ್ಣ ಬಂದ್ಮೇಲೆ ಮಳೆ ಬಂದಿರೋದು: ನಿಖಿಲ್

• ಉದಯವಾಹಿನಿ ಮಂಡ್ಯ

ಲೋಕ ಸಮರದಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಮೇಲೆ ಎಲ್ಲರ ಚಿತ್ತ ಮೂಡಿದ್ದು, ಕಾಂಗ್ರೇಸ್ ಮತ್ತು ಮೈತ್ರಿ ಅಭ್ಯರ್ಥಿಗಳ ಮಧ್ಯೆ ಯಾರ ಮುಡಿಗೆ ಗೆಲುವಿನ ಕಿರೀಟ ಸೇರಲಿದೆ ಎಂಬ ಕುತೂಹಲ ಮತದಾರರಲ್ಲಿ ತೀವ್ರವಾಗಿ ಕಾಡುತ್ತಿದೆ. ಸದ್ಯ ಇದೆಲ್ಲದರ ನಡುವೆ ಇಂದು ಮಂಡ್ಯದ ಹಳೆಬೂದನೂರು ಗ್ರಾಮಕ್ಕೆ ಭೇಟಿ ಕೊಟ್ಟ ನಿಖಿಲ್ ಕುಮಾರಸ್ವಾಮಿ, ಮೈತ್ರಿ ಅಭ್ಯರ್ಥಿಯಾದ ಎಚ್.ಡಿ.ಕುಮಾರಸ್ವಾಮಿ ಪರ ಜನರಲ್ಲಿ ಮತಯಾಚನೆ ಮಾಡಿದರು.

ಉದಯವಾಹಿನಿ ಚಿತ್ರ

ಕುಮಾರಣ್ಣನ ಅಭಿವೃದ್ಧಿ ಕೆಲಸಗಳು ಉಳಿದಿವೆ

ಜನತಾದಳ ಪಕ್ಷಕ್ಕೆ ರಾಜಕೀಯವಾಗಿ ಶಕ್ತಿ ಕೊಟ್ಟಿರೋದು ಮಂಡ್ಯ ಜಿಲ್ಲೆ. 2013-18ರ ಮಧ್ಯೆ ಬರಗಾಲ ಪ್ರಾರಂಭವಾಯ್ತು. ಇದೀಗ ಕಾಂಗ್ರೇಸ್ ಅಧಿಕಾರದಲ್ಲಿ ಮತ್ತೆ ಬರಗಾಲ ಬಂದಿದೆ. ಕೈ ಯಾವಾಗ ಆಡಳಿತಕ್ಕೆ ಬರುತ್ತೋ ಆಗೆಲ್ಲಾ ಬರಗಾಲ ಬರುತ್ತದೆ. 2013-18ರ ಸಂಧರ್ಭ ಮಂಡ್ಯ ಜಿಲ್ಲೆಯಲ್ಲಿ ಅತಿ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರು. ಆ ಕುಟುಂಬಕ್ಕೆ ಸಾಂತ್ವಾನ ಹೇಳಿ, ಸಹಾಯ ಮಾಡಿದ್ದ ಕುಮಾರಣ್ಣ ಒಂದು ಮಾತು ಕೊಟ್ರು. ತನ್ನ ಸರ್ಕಾರ ಬಂದ್ರೆ ಸಂಪೂರ್ಣ ಸಾಲಮನ್ನಾ ಮಾಡ್ತೇವೆ ಎಂದ್ರು. ಅಧಿಕಾರಕ್ಕೆ ಬಂದ ತಕ್ಷಣವೇ 25 ಸಾವಿರ ಕೋಟಿ ಸಾಲಮನ್ನಾ ಮಾಡಿದ್ರು ಎಂದರು.

ಸದ್ಯ ಕೆ.ಆರ್.ಎಸ್ ಡ್ಯಾಂನಲ್ಲಿ 82 ಅಡಿ ನೀರಿದೆ. ಈ ಹಿಂದೆ 70 ಅಡಿ ನೀರಿದ್ದಾಗಲೂ ಕುಮಾರಣ್ಣನ ಸರ್ಕಾರ ನೀರು ಕೊಟ್ಟಿದೆ. ಆದ್ರೆ ಕೈ ಸರ್ಕಾರ ರೈತರಿಗೆ ಒಂದು ಹನಿ ನೀರು ಕೊಟ್ಟಿಲ್ಲ. ಇವರ ಸರ್ಕಾರ ರೈತ ವಿರೋಧಿ ಸರ್ಕಾರವಾಗಿದೆ. ಪುಣ್ಯಾತ್ಮ ಕುಮಾರಣ್ಣ ಬಂದಮೇಲೆ ಮಳೆ ಬಂದಿದೆ ಎಂದು ಕಾಂಗ್ರೇಸ್ ವಿರುದ್ಧ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದರು.

ಜನರು ಉತ್ತಮ ಪ್ರತಿಕ್ರಿಯೆ

ಮಂಡ್ಯ ಲೋಕಸಭಾ ಕ್ಷೇತ್ರದ ಹಲವೆಡೆ ಪ್ರಚಾರ ಮಾಡಿದ್ದೇವೆ. ಜನರು ಉತ್ತಮ ಪ್ರತಿಕ್ರಿಯೆ ನೀಡುತ್ತಿದ್ದಾರೆ. ಕುಮಾರಣ್ಣ ಸಾರಾಯಿ, ಲಾಟರಿ ನಿಷೇಧ ಮಾಡಿದ್ದನ್ನು ಜನರು ಇಂದಿಗೂ ಮರೆತಿಲ್ಲ. ಮಂಡ್ಯ ಜಿಲ್ಲೆಗೆ ಕುಮಾರಸ್ವಾಮಿ ಏನು ಮಾಡಿದ್ದಾರೆ ಎಂಬುದಕ್ಕೆ ದಾಖಲೆಗಳಿವೆ. ಹಲವು ಕಟ್ಟಡಗಳ ಅಭಿವೃದ್ಧಿಯನ್ನು ಕುಮಾರಣ್ಣ ಮಾಡಿದ್ದಾರೆ. ಜನರ ಮನಸ್ಸಿನಲ್ಲಿ ಕುಮಾರಣ್ಣನ ಅಭಿವೃದ್ಧಿ ಕೆಲಸಗಳು ಉಳಿದಿವೆ.

ಅಂತರಾಳದಿಂದ... EDITORIAL

ನೇಹಾ ಹಿರೇಮಠಗೆ ನ್ಯಾಯ ಸಿಗಲಿ, ಆರೋಪಿಗೆ ಗಲ್ಲು ಶಿಕ್ಷೆಯಾಗಲಿ

ಗೃಹ ಸಚಿವರು ಈ ಕುರಿತು ಪ್ರತಿಕ್ರಿಯೆ ನೀಡುತ್ತ, ನೇಹಾ ಕೊಲೆ ಆಕಸ್ಮಿಕ. ಆಕೆಯೂ ಆರೋಪಿಯೂ ಪ್ರೀತಿಸುತ್ತಿದ್ದರು. ಆಕೆ ನಿರಾಕರಿಸಿದ್ದರಿಂದ ಕೊಲೆ ಮಾಡಿದ್ದಾನೆ'' ಎಂದು ಹಗುರವಾದ ಹೇಳಿಕೆ ನೀಡಿದ್ದಾರೆ. ಇದೊಂದು ಬೇಜವಾಬ್ದಾರಿ ಹೇಳಿಕೆ. ಆಕಸ್ಮಿಕ ಎಂಬುದಕ್ಕೆ ಯಾವುದೇ ಅರ್ಥವಿಲ್ಲ. ಇಂಥ ಅಪರಾಧಗಳು ಆಕಸ್ಮಿಕವಾಗಿ ಆಗುವುದಿಲ್ಲ. ಗೃಹ ಸಚಿವರು ಹಾಗೂ ಪೊಲೀಸರು ರಾಜ್ಯದ ಕಾನೂನು ಸುವ್ಯವಸ್ಥೆಯತ್ತ ಗಂಭೀರ ಗಮನ ನೆಟ್ಟಿದ್ದಾರೆಯೇ ಎಂದು ಪ್ರಶ್ನಿಸುವಂತಾಗಿದೆ.

ಈ ಹಿಂದೆ ನೇಹಾ ಓದುತ್ತಿದ್ದ ಕಾಲೇಜಿನಲ್ಲಿ ಈಕೆಯ ಸಹಪಾಠಿಯಾಗಿದ್ದ ಈತ, ತನ್ನ ಪ್ರೀತಿಯನ್ನು ಆಕೆ ತಿರಸ್ಕರಿಸಿದ್ದರಿಂದ ರೊಚ್ಚಿಗೆದ್ದಿದ್ದ. ಬಿಸಿಎಯಲ್ಲಿ ಫೇಲ್ ಆಗಿದ್ದ ಈತನ ಯಾವ ಕಲ್ಯಾಣ ಗುಣ ನೋಡಿ ಆಕೆ ತನ್ನನ್ನು ಪ್ರೀತಿಸಬೇಕು ಎಂದುಕೊಂಡಿದ್ದನೋ ಗೊತ್ತಿಲ್ಲ. ನಿನ್ನೆ ಏಕಾಏಕಿ ಅವಳು ಓದುತ್ತಿದ್ದ ಕಾಲೇಜಿಗೆ ಬಂದು, ಕ್ಯಾಂಪಸ್‌ನಲ್ಲಿಯೇ ಆಕೆಯನ್ನು ಇರಿದು ಕೊಂದಿದ್ದಾನೆ. ಕೊಲೆ ಮಾಡಿದ ರೀತಿಯೂ ಬೆಚ್ಚಿ ಬೀಳಿಸುವಂತಿದೆ. ಒಂಬತ್ತು ಬಾರಿ ಚಾಕುವಿನಿಂದ ಇರಿದ ಈತ, ನೋವಿನಿಂದ ಆಕೆ ನರಳಾಡುತ್ತಿದ್ದರೂ, ಆಕೆ ಕೊನೆಯುಸಿರು ಎಳೆದದ್ದನ್ನು ಖಚಿತಪಡಿಸಿಕೊಂಡೇ ಅಲ್ಲಿಂದ ತೆರಳಿದ್ದಾನೆ. ಅಂದ ಮೇಲೆ ಆತನಲ್ಲಿ ಇದ್ದುದು ಪ್ರೀತಿಯಲ್ಲ, ಕ್ರೌರ್ಯ ಮಾತ್ರ. ಪ್ರೇಮ ಎಂದೂ ಇಂಥ ವಿಕೃತಿಯನ್ನು ತಾಳಲು ಸಾಧ್ಯವಿಲ್ಲ.

> ಬೆಳಗಿ ಬಾಳಬೇಕಾದ ಕುಡಿಯೊಂದು ಯವ್ವನದಲ್ಲೇ ಕಮರಿಹೋಗಿದೆ. ಬೆಳಗಾವಿ ಮೂಲದ ಯುವತಿಯೊಬ್ಬಳನ್ನು ಹುಬ್ಬಳ್ಳಿಯಲ್ಲಿ ಬರ್ಬರವಾಗಿ ಕೊಲೆ ಮಾಡಲಾಗಿದೆ. ಹುಬ್ಬಳ್ಳಿಯ ಪ್ರತಿಷ್ಠಿತ ಕಾಲೇಜಿನಲ್ಲಿ ಎಂಸಿಎ ಮೊದಲ ವರ್ಷದಲ್ಲಿ ಓದುತ್ತಿದ್ದ ನೇಹಾ ಹಿರೇಮಠ ಎಂಬಾಕೆಯನ್ನು ಫಯಾಜ್ ಎನ್ನುವವನು ಕೊಂದು ಹಾಕಿದ್ದಾನೆ.

ಘಟನೆಯನ್ನು ಖಂಡಿಸಿ, ಎಂದಿನಂತೆ, ಹಿಂದೂ ಸಂಘಟನೆಗಳು ಬೀದಿಗಿಳಿದಿವೆ. ಹುಡುಗಿಯ ಮೂಲ ಊರಾದ ಮುನವಳ್ಳಿಯಲ್ಲಿ ಮೂರು ದಿನಗಳ ಕಾಲ ಬಂದ್ ಸಾರಲಾಗಿದೆ. ಹುಬ್ಬಳ್ಳಿಯಲ್ಲಿ ಬಿಜೆಪಿ ಹಾಗೂ ಹಿಂದೂ ಕಾರ್ಯಕರ್ತರು ಪ್ರತಿಭಟನೆಗೆ ಇಳಿದಿದ್ದಾರೆ. ಬಿಜೆಪಿ ಮುಖಂಡರು ಸಂತ್ರಸ್ತ ಯುವತಿಯ ಕುಟುಂಬವನ್ನು ಭೇಟಿ ಮಾಡಿ ಸಾಂತ್ವನ ಹೇಳಿದ್ದಾರೆ.

ಆರೋಪಿಗೆ ಗಲ್ಲು ಶಿಕ್ಷೆ ಕೊಡಿಸಬೇಕು ಎಂದು ಪೊಲೀಸರನ್ನು ಹೆಚ್ಚಿನವರು ಆಗ್ರಹಿಸಿದ್ದಾರೆ. ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವಂತೆ ಸಿಎಂ ಅವರು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬಿಜೆಪಿ ಇದನ್ನು ಚುನಾವಣಾ ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸುವುದು ಸುಲಭ; ಆದರೆ ಇಷ್ಟಾದರೂ ಪ್ರತಿಭಟನೆಯ ಧ್ವನಿ ಎಬ್ಬಿಸದೇ ಹೋದರೆ, ಪೊಲೀಸರು ಹಾಗೂ ಆಡಳಿತದಲ್ಲಿ ಇರುವವರು ಇದನ್ನು ಗಂಭೀರವಾಗಿ ಪರಿಗಣಿಸುವ ಸಾಧ್ಯತೆ ಇತ್ತೇ ರಾಜ್ಯದಲ್ಲಿ ಪ್ರತಿದಿನ ಹಲವಾರು ಕೊಲೆಗಳಾಗುತ್ತವೆ. ನಿನ್ನೆಯಂತೂ ಗದಗದಲ್ಲಿ ಒಂದೇ ಕುಟುಂಬದ ನಾಲ್ಕು ಮಂದಿಯ ಕೊಲೆಯಾಗಿದೆ. ಪೊಲೀಸರು ತಮ್ಮದೇ ವೇಗದಲ್ಲಿ ಕರ್ತವ್ಯ ನಿರ್ವಹಿಸುತ್ತಾರೆ. ಪ್ರಕರಣದ ಗಂಭೀರತೆಯನ್ನು ಆಡಳಿತಕ್ಕೆ ಮುಟ್ಟಿಸಿ, ತನಿಖೆ- ವಿಚಾರಣೆ- ಶಿಕ್ಷೆ ತೀವ್ರಗತಿಯಲ್ಲಿ ನಡೆಯುವಂತೆ ಮಾಡುವುದಂತೂ ಈ ಮೂಲಕ ಸಾಧ್ಯವಿದೆ.

ಇಂಥ ಅಪರಾಧಗಳ ಮೂಲದಲ್ಲಿ ಏನಿರುತ್ತದೆ ಇನ್ನೊಬ್ಬ ವ್ಯಕ್ತಿಯನ್ನು ಕೊಲ್ಲುವುದು ಇಷ್ಟೊಂದು ಸುಲಭವೇ ತನ್ನ (ವಿಕೃತ)ಪ್ರೇಮವನ್ನು ತಿರಸ್ಕರಿಸಿದಳೆಂದು ಯುವತಿಯೊಬ್ಬಳನ್ನು ಕೊಲ್ಲುವ ಈ ಮನಸ್ಥಿತಿ ಎಷ್ಟು ವಿಕೃತವಾದುದು ಎಂಬುದನ್ನು ಮತ್ತೆ ಹೇಳಬೇಕಿಲ್ಲ. ತನಗೆ ದೊರೆಯದ ಯುವತಿ ಇನ್ಯಾರಿಗೂ ದೊರೆಯುವುದು ಬೇಡ, ಆಕೆ ಬದುಕುವುದೂ ಬೇಡ ಎನ್ನುವುದು ಬಣ್ಣಿಸಲೂ ಮಾತುಗಳಿಲ್ಲದ ನೀಚತನ. ಇದು ಅಪರೂಪದಲ್ಲಿ ಅಪರೂಪದ ದುಷ್ಕೃತ್ಯ. ಈತನಿಗೆ ಗಲ್ಲು ಶಿಕ್ಷೆ ಆಗಲೇಬೇಕಿದೆ. ಈತನ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳನ್ನು ಪೊಲೀಸರು ಕಲೆಹಾಕಿ ನ್ಯಾಯಾಲಯದಲ್ಲಿ ಗಟ್ಟಿಯಾಗಿ ವಾದ ಮಂಡಿಸಲು ಪೂರಕವಾಗಿ ಕೆಲಸ ಮಾಡಿದರೆ ಮಾತ್ರ ಇದು ಸಾಧ್ಯ. ಇದರ ಜೊತೆಗೆ ಮತಾಂಧತೆಯೂ ಸೇರಿದಂತಿದೆ.

ಇದು ಒಬ್ಬ ವ್ಯಕ್ತಿಯ ಮನಸ್ಥಿತಿ ಮಾತ್ರವೇ ಅಲ್ಲ; ಹೀಗೆ ಸಮಾಜದಲ್ಲಿ ಭಯ ಉತ್ಪಾದಿಸುವ ಸಂಘಟನೆಗಳ ವರ್ತನೆಯೂ ಹೀಗೇ ಇರುತ್ತದೆ. ಈತನ ಹಿಂದೆ ಇನ್ಯಾರದಾದರೂ ಕೈವಾಡವಿದೆಯೇ ಎಂಬ ಕೋನದಲ್ಲಿ ಕೂಡ ತನಿಖೆ ನಡೆಸುವುದು ಒಳಿತು. ಈತನ ಕೃತ್ಯವನ್ನು ನೋಡಿದರೆ ಇದು ಲವ್ ಜಿಹಾದ್ ಕೊಲೆ ಆಗಿರುವ ಸಾಧ್ಯತೆಯನ್ನೂ ಅಲ್ಲಗಳೆಯುವಂತಿಲ್ಲ.ಇದರ ಜೊತೆಗೆ ಕಾನೂನು ಸುವ್ಯವಸ್ಥೆಯ ಪ್ರಶ್ನೆಯೂ ತಳುಕು ಹಾಕಿಕೊಂಡಿದೆ. ಗೃಹ ಸಚಿವರು ಈ ಕುರಿತು ಪ್ರತಿಕ್ರಿಯೆ ನೀಡುತ್ತ, ''ನೇಹಾ ಕೊಲೆ ಆಕಸ್ಮಿಕ. ಆಕೆಯೂ ಆರೋಪಿಯೂ ಪ್ರೀತಿಸುತ್ತಿದ್ದರು. ಆಕೆ ನಿರಾಕರಿಸಿದ್ದರಿಂದ ಕೊಲೆ ಮಾಡಿದ್ದಾನೆ'' ಎಂದು ಹಗುರವಾದ ಹೇಳಿಕೆ ನೀಡಿದ್ದಾರೆ. ಇದೊಂದು ಬೇಜವಾಬ್ದಾರಿ ಹೇಳಿಕೆ. ಆಕಸ್ಮಿಕ ಎಂಬುದಕ್ಕೆ ಯಾವುದೇ ಅರ್ಥವಿಲ್ಲ. ಇಂಥ ಅಪರಾಧಗಳು ಆಕಸ್ಮಿಕವಾಗಿ ಆಗುವುದಿಲ್ಲ. ಅದರ ಹಿಂದೆ ತರ್ಕಬದ್ಧ ಯೋಜನೆ ಇರುತ್ತದೆ. ಆದ್ದರಿಂದ ಈತ ಗರಿಷ್ಠ ಶಿಕ್ಷೆಗೆ ಅರ್ಹ. ಗೃಹ ಸಚಿವರು ಹಾಗೂ ಪೊಲೀಸರು ರಾಜ್ಯದ ಕಾನೂನು ಸುವ್ಯವಸ್ಥೆಯತ್ತ ಗಂಭೀರ ಗಮನ ನೆಟ್ಟಿದ್ದಾರೆಯೇ ಈ ಪ್ರಶ್ನೆಯನ್ನು ಅವರು ಉತ್ತರಿಸಬೇಕಿದೆ. ಅಪರಾಧಗಳು ಸಂಭವಿಸದಂತೆ ಕಠಿಣ ಕಾನೂನು ಸುವ್ಯವಸ್ಥೆಯನ್ನು ಜಾರಿಯಲ್ಲಿಡುವುದೇ ಅಪರಾಧಗಳನ್ನು ತಡೆಯುವ ಸುಲಭ ವಿಧಾನ. ಇಂಥ ಅಪರಾಧಗಳು ಇನ್ನು ಘಟಿಸದಿರಲಿ.

ಮಹಾಭಾರತ
ದ್ರೋಣಪರ್ವ

• ಹಿಂದಿನ ಸಂಚಿಕೆಯಿಂದ

ರಾಧೇಯನು ದ್ರೋಣನಿಗೆ, ''ಈ ಅರ್ಜುನನ ಮಗ ನಮ್ಮನ್ನೆಲ್ಲ ಕೊಲ್ಲುವುದರೊಳಗೆ ಅವನನ್ನು ಕೊಲ್ಲುವುದು ಹೇಗೆಂದು ಹೇಳಿರಿ. ರಾಜನ ಬಳಿ ಇರುವುದು ನನ್ನ ಕರ್ತವ್ಯವಾದ್ದರಿಂದ ನಾನು ಇಲ್ಲಿದ್ದೇನೆ; ಇಲ್ಲವಾದರೆ ಹೊರಟುಹೋಗುತ್ತಿದ್ದೆ; ಅಭಿಮನ್ಯುವಿನ ಬಾಣಗಳು ನನ್ನನ್ನು ಅಷ್ಟೊಂದು ನೋಯಿಸುತ್ತಿವೆ ಎಂದುದಕ್ಕೆ ಅವನು, ''ನನ್ನ ಅರ್ಜುನನ ಮಗನ ಸಮಾನರು ಯಾರೂ ಇಲ್ಲ. ಅವನ ಬಾಣಗಳಿಂದ ನೊಂದಿದ್ದರೂ, ಅವನನ್ನು ಶ್ಲಾಘಿಸದೆ ವಿಧಿಯಿಲ್ಲವಾಗಿದೆ. ಅವನನ್ನು ಕೊಲ್ಲಬೇಕಾದರೆ ಅವನ ಅಭೇದ್ಯವಾದ ಕವಚವನ್ನು ಭೇದಿಸಬೇಕು. ರಥ ಬಿಲ್ಲುಬಾಣಗಳು ಅವನ ಬಳಿ ಇರುವವರೆಗೂ ಯಾರೂ ಅವನನ್ನು ಸೋಲಿಸಲರರು. ಆದ್ದರಿಂದ ಅವನ ರಥವನ್ನೂ ಬಿಲ್ಲನ್ನೂ ನಾಶಮಾಡಿರಿ. ಅವನು ನೋಡುತ್ತಿಲ್ಲದ ಸಮಯವನ್ನು ಸಾಧಿಸಿ ಬಿಲ್ಲಿನ ನಾಣನ್ನು ಕತ್ತರಿಸಿ ಎಂದನು. ಅಲ್ಲಿಂದ ಹೊರಟುಹೋದ ರಾಧೇಯನು ತನ್ನ ಜೀವಮಾನದಲ್ಲಿ ಎಂದೂ ಮಾಡಿರದ ಹೀನ ಕಾರ್ಯವನ್ನು ಮಾಡಿದನು-ಅಭಿಮನ್ಯುವಿನ ಹಿಂದುಗಡೆ ಹೋಗಿ ತನ್ನ ಬಾಣದಿಂದ ಅವನ ಬಿಲ್ಲನ್ನು ಕತ್ತರಿಸಿದನು. ಯುದ್ಧದಲ್ಲಿ ಅತ್ಯಂತ ತುಚ್ಛವಾದ ಇಂತಹ ಕೆಲಸ ಮಾಡಿದವರಾರೆಂದು ನೋಡಲು ಮಗುವು ಹಿಂದಕ್ಕೆ ತಿರುಗಿದ ಕೂಡಲೇ ದ್ರೋಣನು ಅಭಿಮನ್ಯುವಿನ ರಥದ ಕುದುರೆಗಳನ್ನು ಕೊಂದನು; ಕೃಪನು ಅವನ ಸಾರಥಿಯನ್ನು ಕೊಂದನು. ಕೃತವರ್ಮ, ಅಶ್ವತ್ಥಾಮ, ದುಶ್ಶಾಸನನ ಮಗ ಈ ಮೂವರೂ ಅಭಿಮನ್ಯುವನ್ನು ಬಾಣಗಳಿಂದ ಘಾತಿಸತೊಡಗಿದರು. ಆರು ಮಹಾರಥಿಕರು, ರಥರಹಿತನಾದ, ಬಿಲ್ಲೂಕೈಯಲ್ಲಿಲ್ಲದ ಮಗುವಿನ ಮೇಲೆ ನಿರ್ದಯರಾಗಿ ಪ್ರಹಾರ ಮಾಡಿದರು. ಕೋಪತಪ್ತನೂ ಅಪಮಾನಿತನೂ ಆದ ಅವನು ದ್ರೋಣನನ್ನು ಕುರಿತು, ''ನೀನು ವಯೋವೃದ್ಧನು, ಮಹಾ ಗುರುವು, ಮೇಲಾಗಿ ಸೇನಾಪತಿಯು. ನನಗೆ ಇಂಥ ಅನ್ಯಾಯ ಮಾಡಬಹುದೇ ಎಂದನು. ರಾಧೇಯನ ಕಡೆ ತಿರುಗಿ, ''ನೀನು ಭಾರ್ಗವಶಿಷ್ಯನೆಂದು ಹೇಳಿಕೊಳ್ಳುತ್ತಿಯಲ್ಲವೆ ಬಿಲ್ವಿದ್ಯೆಯಲ್ಲಿ ನನ್ನ ತಂದೆಯ ಸಮಾನ ಎಂದುಕೊಳ್ಳುವೆ. ನಿನಗಾದರೂ ಇಂಥ ಹೀನ ಬುದ್ಧಿ ಹೇಗೆ ಬಂದಿತು ನನ್ನ ದೊಡ್ಡಪ್ಪ ನಿನ್ನನ್ನು ಋಜುಬುದ್ಧಿಯವನೆಂದು ಹೊಗಳಿದರು; ಇದುವೇ ನಿನ್ನ ಋಜುಬುದ್ಧಿ ನಿಮ್ಮನ್ನೆಲ್ಲ ಲೋಕವೀರರೆಂದು ಜನರು ಗೌರವಪ್ರೀತಿಗಳಿಂದ ಕರೆಯುತ್ತಾರೆ; ನಿಮ್ಮ ಶೌರ್ಯ ಇಷ್ಟೇಯೆ ಹೇಗತಾನೆ ಈ ಭೂಮಿ ತಾಯಿಯು ನಿಮ್ಮನ್ನು ಬಾಯ್ದೆರೆದು ನುಂಗಿಬಿಡದೆ ನಾಚಿಕೆಗೆಟ್ಟ ನಿಮ್ಮನ್ನು ಸಹಿಸಿಕೊಂಡಿದ್ದಾಳೆಯೋ! ಎಂದು ಛೇಡಿಸಿದನು. ಯೋಚಿಸಲು ಅವಕಾಶವೇ ಇಲ್ಲದ ಅಭಿಮನ್ಯುವು, ಕತ್ತಿಯನ್ನು ಹಿರಿದು, ಗುರಾಣಿಯನ್ನು ತೆಗೆದುಕೊಂಡು, ರಥದಿಂದ ಕೆಳಕ್ಕೆ ಧುಮುಕಿದನು. ಕೊಲ್ಲುವ ಉದ್ದೇಶದಿಂದಲೇ ಅವರುಗಳ ಮೇಲೆ ಹಾರಿ ಬಂದನು. ದ್ರೋಣನು ಅವನ ಸಿಟ್ಟನು ನೋಡಿ ನೋಡಿ ಹೆದರಿ ತನ್ನ ಬಾಣದಿಂದ ಅವನ ಕತ್ತಿಯ ಹಿಡಿಯನ್ನು ಮುರಿದುಹಾಕಿದನು. ರಾಧೇಯನು ತನ್ನ ಬಾಣಗಳಿಂದ ಅವನ ಗುರಾಣಿಯನ್ನು ಚೂರುಚೂರು ಮಾಡಿದನು. ಈಗ ಅಭಿಮನ್ಯುವು ನಿರಾಯುಧನಾಗಿ ಆ ಆರು ಮಂದಿ ಮಹಾಕ್ರೂರ ಕೊಲೆಪಾತಕಿಗಳ ಮುಂದೆ ನಿಲ್ಲುವಂತಾಯಿತು.ಒಂದು ಕ್ಷಣ ಅಭಿಮನ್ಯುವಿಗೆ ಅಪ್ಪನ ನೆನಪಾಯಿತು. ತನ್ನ ಸಾಹಸವನ್ನು ಕೇಳಿ ತಿಳಿದ ಅಪ್ಪನ ಮುಖದಲ್ಲಿ ಮೂಡುವ ಹೆಮ್ಮೆಯನ್ನು ನೋಡುವ ಭಾಗ್ಯ ತನಗಿಲ್ಲವಲ್ಲ ಎಂದು ವ್ಯಥೆಯಾಯಿತು.

ಮುಂದುವರಿಯುವುದು...

ಪ್ರಜ್ಞಾವಂತರು ರಾಷ್ಟ್ರದಲ್ಲಿದ್ದರೂ, ಇಲ್ಲದಂತಿರುವುದು ಹಾಸ್ಯಸ್ಪದ

ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

- ದೇಶದ ಉದ್ದಗಲಕ್ಕೂ ಚುನಾವಣೆ ಯುದ್ಧ ನಡೆಯುತ್ತಿದೆ ಈ ಯುದ್ಧ ಪಕ್ಷ ಪಕ್ಷಗಳ ನಡುವೆ ನಡೆಯುವ ಆಂತರಿಕ ಯುದ್ಧ.
- ಈ ಯುದ್ಧದಲ್ಲಿ ಸೋಲು ಮತ್ತು ಗೆಲುವು ಮುಖ್ಯವಲ್ಲ ಕೇವಲ ಪಾರದರ್ಶಕ ಆಡಳಿತ ಹಾಗೂ ರಾಷ್ಟ್ರದ ಅಭಿವೃದ್ಧಿ ಮುಖ್ಯ.
- ಸೋತವರು ನಮ್ಮವರೇ ಮತ್ತು ಗೆದ್ದವರು ನಮ್ಮವರೇ ಎಂಬ ಸಾಮಾನ್ಯ ಅರಿವಿನ ಜ್ಞಾನ ಕೊರತೆ ಇರುವ ಸಾಮಾನ್ಯ ಜನರಿಗೆ ತಿಳಿಸಲು ವಿಫಲವಾಗಿರುವ ಪ್ರಜ್ಞಾವಂತರು.
- ಪ್ರಜಾಪ್ರಭುತ್ವ ಇರುವ ರಾಷ್ಟ್ರದಲ್ಲಿ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವ ಹಾಗೂ ಕಟ್ಟ ಕಡೆಯ ಮನುಷ್ಯನಿಗೆ ಮೊಟ್ಟ ಮೊದಲ ಅವಕಾಶ ದೊರೆಯಬೇಕೆಂದು ಸಂವಿಧಾನ ನೀಡಿದೆ.
- ಆದ್ದರಿಂದ ಕೆಲವರು ಕಾಳಿ- ಬೋಳಿ, ಅಸಮರ್ಥ, ಅನರ್ಹತೆ ಇರುವ ಅಭ್ಯರ್ಥಿಗಳು ಚುನಾವಣೆ ಯುದ್ಧದಲ್ಲಿ ಭಾಗವಹಿಸುತ್ತಾರೆ.

• ಉದಯವಾಹಿನಿ, ವಿಶೇಷ

ಮಾನವ ಸಂಘ ಜೀವಿ. ಆನೆಗೆ ನೂರು ವರ್ಷ ಇದ್ದಹಾಗೆ ಮಾನವನಿಗೂ ಸಹ ನೂರು ವರ್ಷ ಇದೆ. ನೂರು ವರ್ಷ ನೂರು ಮೆಟ್ಟಿಲುಗಳು. ಒಂದೊಂದು ಮೆಟ್ಟಿಲುಗಳಲ್ಲಿ ಒಂದೊಂದು ಅನುಭವ ದೊರೆಯುತ್ತದೆ. ಆ ಅನುಭವಗಳನ್ನ ಸಮಾಜಕ್ಕೆ ಹಂಚಿ ಬೆಳಕು ತೋರಿಸಿ ದಾರಿದೀಪವಾಗಬೇಕು.

ಆಗ ಬಚ್ಚಿಟ್ಟ ಜ್ಞಾನ ಕೊಳೆಯುವುದಿಲ್ಲ ಬಿಚ್ಚಿಟ್ಟ ಜ್ಞಾನ ಹೊಳೆಯುತ್ತದೆ.

ಸಮಾಜದಲ್ಲಿ ಆಗುಹೋಗುಗಳನ್ನ ಕಣ್ತುಂಬಿಕೊಂಡು ಸಲಹೆ ಅಭಿಪ್ರಾಯಗಳನ್ನು ನೀಡುವ ಸಾಮರ್ಥ್ಯ ಇದ್ದರೂ ಅಸಮರ್ಥರಂತೆ ವರ್ತಿಸುವ ಸಮೂಹವು ಭಯದ ವಾತಾವರಣದಲ್ಲಿ ಬದುಕುತ್ತಿವೆ.

ಒಬ್ಬ ಮನುಷ್ಯ ಎಷ್ಟು ವರ್ಷ ಬದುಕಿದ್ದ ಅನ್ನುವುದು ಮುಖ್ಯವಲ್ಲ. ಬದುಕಿದ್ದ ವರ್ಷಗಳು ಎಂಥ ಮೌಲ್ಯಯುತ ಬದುಕನ್ನ ನಡೆಸಿದ ಎಂಬುದು ಮುಖ್ಯ. ಹೇಗೆ ಸತ್ತ ಎಂಬುದು ಮುಖ್ಯ ಅಲ್ಲ ಹೇಗೆ ಬದುಕಿದ ಎಂಬುದು ಮುಖ್ಯ. ಹೀಗಿರುವಾಗ ದಾರಿ ತೋರಿಸುವವರೇ ಕತ್ತಲಲ್ಲಿ ಅಥವಾ ಮರೆಯಲ್ಲಿ ಇಣುಕಿ ನೋಡಿ ಸಮಾಜ ದಿಕ್ಕಾಪಾಲಾಗಿ ನಾನಾ ದಿಕ್ಕಿನತ್ತ ಚಾಚಿ ಯಾವುದೋ ಅನ್ಯಾಯ ಮಾರ್ಗವನ್ನ ಕಂಡುಹಿಡಿದುಕೊಂಡು ಹೋಗುತ್ತಿರುವ ಹಾಗೂ ಸಮಾಜದಲ್ಲಿ ಕಲುಷಿತ ವಾತಾವರಣ ಉಂಟು ಮಾಡುವ ಸಮಾಜದಲ್ಲಿ ಪ್ರಜ್ಞಾವಂತರು ಇದ್ದರೇನು ಅಥವಾ ಇಲ್ಲದಿದ್ದರೇನು ಎಂಬ ನಿರ್ಧಾರಕ್ಕೆ

ಬರಬೇಕಾಗುತ್ತದೆ.

ನಿಜಕ್ಕೂ ಇಂಥವರು ಸಮಾಜದಲ್ಲಿರುವುದು ಹಾಸ್ಯಸ್ಪದ. ಸರಿ ತಪ್ಪುಗಳ ಬಗ್ಗೆ ವಿಮರ್ಶೆ ಮಾಡಿ ಮಾರ್ಗೋಪಾಯಗಳನ್ನ ಸಮಾಜಕ್ಕೆ ತಿಳಿಸಬೇಕು ಸಮಸ್ಯೆಗಳ ಬಗ್ಗೆ ಪರಿಹಾರ ಕಂಡುಹಿಡಿದು ಪರಿಹಾರ ಸೂಚಿಸಬೇಕು.

ಮತದಾರರು ಮತವನ್ನು ಚಲಾಯಿಸಲು ತಬ್ಬಿಬ್ಬಾಗಿ ವಿಧಿ ಇಲ್ಲದೇ ಕಣ್ಣು ಮುಚ್ಚಿಕೊಂಡು ಮತ ಹಾಕಿ ಬರುತ್ತಾರೆ. ಹಾಗೂ ಮತ ಹಾಕದೇ ತಟಸ್ಥರಾಗಿರುತ್ತಾರೆ. ಒಟ್ಟಾರೆ ಕಾಲ ಕಾಲಕ್ಕೆ ತಕ್ಕಂತೆ ವಾಸ್ತುವಿಕ ಸತ್ಯಾಂಶವನ್ನು ಎಲ್ಲಾ ವಿಚಾರದಲ್ಲೂ ಸಮಾಜಕ್ಕೆ ಸಲಹೆ ಮತ್ತು ಅಭಿಪ್ರಾಯಗಳನ್ನು ಮತ್ತೆ ಮತ್ತೆ ತಿಳಿಸಬೇಕು. ಆ ರೀತಿ ತಿಳಿಸುವುದೇ ಪ್ರಜ್ಞಾವಂತರ ಬದುಕು.

ಇಳೆಯ ಚುಂಬಿಸುತ ಮಳೆರಾಯ

ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಮಳೆ ಬಂತು ಜೋರಾಗಿ
ಸಂತಸವ ತಂತು ಬಿರುಸಾಗಿ
ನಗುಮುಖದಿ ಬರ ಮಾಡಿಕೊಳ್ಳುತ
ಇಳೆಯ ಚುಂಬಿಸುತ ಮಳೆರಾಯ .....
ಪ್ರಕೃತಿಯ ಮಾತೆಗದು ಹಬ್ಬವು
ಹಸಿರ ಸೀರೆಯ ಉಡುತಿರಲು
ಚಿಗುರಲೆಗೆ ಅದುವೇ ಆಡಂಬರವು
ಹಕ್ಕಿಪಿಕ್ಕಿಗಳು ನಾದದಿ ನಲಿಯುತಿರಲು.....
ತಂಪಾದ ವಾತಾವರಣದಿಂದ ತುಂಬಿರಲು ಮನುಕುಲವು
ಸಂತಸದಿ ಕುಣಿಯುತಿರಲು ರೈತರ ಬಯಕೆಗಳೆಲ್ಲ
ಈಡೇರುತಿರಲು ಬೆಳೆಗಳ ಬಗ್ಗೆ ಚಿಂತಿಸದೆ ಕಾರ್ಯ
ಮಾಡುತಿರಲು.....
ಯುಗಾದಿ ಹಬ್ಬದ ಚಿಗುರಿನ ಪ್ರಥಮ ಮಳೆಯು
ಎಲ್ಲರಲು ಮೂಡಿಸುತಿದೆ ಆಹ್ಲಾದಕರ ಭಾವನೆಯು
ಪುಟ್ಟ ಪುಟ್ಟ ಮಕ್ಕಳಲ್ಲ ಕುಣಿಯುತಿರಲು ಮಳೆರಾಯ
ಅದನ್ನು ನೋಡಿ ಸಂತಸ ಪಡುವಂತಾಗುತ್ತಿರಲು.....
ಭಕ್ತಿಯಲಿ ಬೇಡಿದ್ದು ಈಡೇರಿತೆಂದು
ಆರಕೆಗಳ ತೀರಿಸುತ ದೇವರ ಪೂಜಿಸುತಿರಲು
ಬೇಕು ಬೇಡಗಳ ಚರ್ಚೆಯ ಮಾಡುತಲಿ
ಸಂತಸದಿ ಬಾಳಿರಿ ಎಲ್ಲಾ ಒಂದುಗೂಡು ತಲಿ.....

ಪ್ರಜಾಪ್ರಭುತ್ವ ಉಳಿವಿಗೆ, ಉತ್ತಮ ಜನಪ್ರತಿನಿಧಿ ಆಯ್ಕೆಗಾಗಿ ಮತದಾನ

• ಉದಯವಾಹಿನಿ, ವಿಜಯನಗರ

ವಾಸವಿ ಸಮೂಹ ವಿದ್ಯಾಸಂಸ್ಥೆಯಿಂದ ವಿದ್ಯಾರ್ಥಿಗಳ ಮೂಲಕ ಮತದಾನದ ಮಹತ್ವ ಮತ್ತು ತಪ್ಪದೇ ಮತದಾನ ಮಾಡುವಂತೆ ಅರಿವು ಮೂಡಿಸಲು ಮತದಾನ ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ವಾಸವಿ ಸಮೂಹ ಶಿಕ್ಷಣ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಡಿ.ಆರ್.ವಿಜಯ ಸಾರಥಿ ನೇತೃತ್ವದಲ್ಲಿ 250ಕ್ಕೂ ಹೆಚ್ಚು ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ವಿಜಯನಗರ ಸುತ್ತಮುತ್ತ 7 ಕಿಲೋ ಮೀಟರ್ ವರೆಗೆ ಜಾಥ ಮೂಲಕ ಸಾರ್ವಜನಿಕರಿಗೆ ಮತದಾನದ ಕುರಿತು ಅರಿವು ಮೂಡಿಸಿದರು. ಸಂವಿಧಾನದಲ್ಲಿ ಪ್ರತಿಯೊಬ್ಬ ನಾಗರಿಕರಿಗೂ ಮತದಾನ ಮಾಡುವ ಹಕ್ಕು ನೀಡಿದೆ.

ಉದಯವಾಹಿನಿ ಚಿತ್ರ

ಪವಿತ್ರವಾದ ಮತವನ್ನು ಹಣ, ಹೆಂಡ, ಅಮಿಷಕ್ಕೆ ಒಳಗಾಗಿ ಮಾರಿಕೊಳ್ಳಬಾರದು. ನನ್ನ ಮತ ಮಾರಟಕ್ಕೆ ಇಲ್ಲ ಎಂದು ಹೇಳಿ ಮತಗಟ್

ಕಾಂಗ್ರೇಸ್ ಪಕ್ಷನುಡಿದಂತೆ ನಡೆದು, ಐದು ಗ್ಯಾರಂಟಿ ಅನುಷ್ಠಾನ

● ಕೇಂದ್ರದಲ್ಲಿ ಸರ್ಕಾರ ಬಂದರೆ ಸಂಪೂರ್ಣ ಸಾಲಮನ್ನಾ: ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ

• ಉದಯವಾಹಿನಿ,ಚಿಂಚೋಳಿ

ಕಾಂಗ್ರೇಸ್ ಪಕ್ಷವು ನುಡಿದಂತೆ ನಡೆದು 5ಗ್ಯಾರಂಟಿ ಅನುಷ್ಠಾನಕ್ಕೆ ತಂದಿದ್ದು ಜನರು ಉಪಯೋಗ ಪಡೆದುಕೊಳ್ಳುತ್ತಿದ್ದಾರೆ, ಕೇಂದ್ರದಲ್ಲಿ ಸರ್ಕಾರ ಬಂದರೆ ಸಂಪೂರ್ಣವಾಗಿ ಸಾಲಮನ್ನಾ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಮತ್ತು ರಾಯಚೂರು ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ತಾಲ್ಲೂಕಿನ ಸೇಡಂ ಮತಕ್ಷೇತ್ರದ ಗಡಿಕೇಶ್ವಾರ, ಶಿರೋಳ್ಳಿ, ಕುಪನೂರು ಗ್ರಾಮಗಳಲ್ಲಿ ಲೋಕಸಭೆ ಚುನಾವಣೆ ಕಾಂಗ್ರೇಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಅವರ ಪರವಾಗಿ ಹಮ್ಮಿಕೊಂಡಿದ್ದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು,ಕಲ್ಯಾಣ ಕರ್ನಾಟಕಕ್ಕೆ ನಿಜವಾಗಿ ಕಲ್ಯಾಣ ಆಗಬೇಕಾದರೆ ಈ ಭಾಗದ ಕಾಂಗ್ರೇಸ್ ಪಕ್ಷದ ಅಭ್ಯರ್ಥಿಗಳು ಗೆಲ್ಲಬೇಕು.

ಬರುವ ಮೇ 7ರಂದು ನಡೆಯುವ ಚುನಾವಣೆಯ ಮತದಾನದಲ್ಲಿ ಕಾಂಗ್ರೇಸ್ ಪಕ್ಷಕ್ಕೆ ಹೆಚ್ಚಿನ ಮತ ನೀಡುವ ಮೂಲಕ ಕಾಂಗ್ರೇಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಅ ವರನ್ನು ಗೆಲ್ಲಿಸುವಂತೆ ಮನವಿ ಮಾಡಿದರು, 5ವರ್ಷಗಳಲ್ಲಿ ಕಲಬುರಗಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ತಪ್ಪಿಸಿ ಕೊಂಡು 10ವರ್ಷ ಹಿಂದೆ ಬಿದ್ದಿದೆ ಈ ಭಾಗಕ್ಕೆ ಮೋದಿ ಸರ್ಕಾರ ಅನ್ಯಾಯ ಮಾಡಿದೆ. ಕೇಂದ್ರದಲ್ಲಿ ಕಾಂಗ್ರೇಸ್ ಸರ್ಕಾರ ಬಂದರೆ ಮಹಿಳಾ ಯಜಮಾನಿ

ಉದಯವಾಹಿನಿ ಚಿತ್ರ

ಮನೆ ಯಜಮಾನಿಗೆ 1ಲಕ್ಷ ರೂ.

1ಲಕ್ಷ ರೂಪಾಯಿ ನೀಡುತ್ತೇವೆ, ಸಂಪೂರ್ಣವಾಗಿ ಸಾಲ ಮನ್ನಾ ಮಾಡುತ್ತೇವೆ, ಎಂಎಸ್ಪಿ ಕಾನೂನು ಜಾರಿಗೆ ತಂದು ರೈತರಿಗೆ ಬೆಂಬಲ ಬೆಲೆ ಕೊಡುತ್ತೇವೆ,ಯುವಕರಿಗೆ ತರಬೇತಿ ಕೊಟ್ಟು 1ಲಕ್ಷ ರೂ.ಕೊಡುತ್ತೇವೆ, ಹೀಗೆ ಕಾಂಗ್ರೇಸ್ ಜನರಿಗೆ ಬದುಕು ಕಟ್ಟಿಕೊಳ್ಳುವ ಯೋಜನೆ ರೂಪಿಸುತ್ತಿದೆ, ಬಿಜೆಪಿಗರು ಬರೀ ಸುಳ್ಳು ಹೇಳಿ ಜನರಿಗೆ ದಾರಿ ತಪ್ಪಿಸುವ ಕೆಲಸ ಮಾಡುತ್ತಿದೆ.

ಲೋಕಸಭಾ ಚುನಾವಣೆ ದೇಶದ ಭವಿಷ್ಯ ಬರೆಯುವ ಚುನಾವಣೆಯಾಗಿದೆ. ಮಲ್ಲಿಕಾರ್ಜುನ ಖರ್ಗೆಯವರಿಗೆ ದೇಶದ ಜವಾಬ್ದಾರಿ ಇರುವ ಕಾರಣ ರಾಧಾಕೃಷ್ಣ ದೊಡ್ಡಮನಿಯವರಿಗೆ ಅವಕಾಶ ನೀಡಲಾಗಿದೆ.

ಉಮೇಶ ಜಾಧವ ಗೆಲ್ಲಲು ಬಿಜೆಪಿಯ ಕುತಂತ್ರದಿಂದ, ಮಲ್ಲಿಕಾರ್ಜುನ ಖರ್ಗೆ ಮತ್ತೊಂದು ಹೆಸರೆ ಅಭಿವೃದ್ಧಿ, ನಿಷ್ಕಳಂಕ ನಾಯಕ ಅವರು ಸೋತಿದ್ದಲ್ಲಾ ಕಲಬುರ್ಗಿ ಜಿಲ್ಲೆಯೆ ಸೋತಿದ್ದು. ಜೀಮ್ಸ್, ಟೇಕ್ಸ್ ಟೈಲ್ಸ್ ಪಾರ್ಕ್, ಹದ್ದಾರಿ ರಸ್ತೆಗಳು, ರೈಲು ಭೋಗಿ ನಿರ್ಮಾಣ ಕಾರ್ಖಾನೆ, ಎಲ್ಲಾ ಹಿಂದಕ್ಕೆ ಹೋಗಿವೆ ಆದರೆ ಜಾಧವ ಬರೀ ಮೋದಿ ಹೆಸರಲ್ಲಿ ಮತಗಳು ಕೇಳುತ್ತಿದ್ದಾರೆ,ಅವರ ಅಭಿವೃದ್ಧಿ ಏನು ಹಿಂದೆ ಕಾಂಗ್ರೇಸ್ 70ಸಾವಿರ ಕೋಟಿ ರೂ.ರೈತರ ಸಾಲಮನ್ನಾ ಮಾಡಿದೆ,ಆಹಾರ ಭದ್ರತೆ ಕಾನೂನು, ಕಡ್ಡಾಯ ಶಿಕ್ಷಣ ಹೀಗೆ ಅನೇಕ ಯೋಜನೆ ಮಾಡಿ ಜನರ ಬದುಕು ಕಟ್ಟುವ ಕೆಲಸ ಮಾಡಿದೇವೆ,ಮೋದಿ ಸರ್ಕಾರ ಬಂದ ಮೇಲೆ ಬೆಲೆ ಏರಿಕೆ ಆಗಿದೆ,ಗ್ಯಾಸ್ ಸಿಲಿಂಡರ್, ಪೆಟ್ರೋಲ್ ಡಿಸೇಲ್, ಅನೇಕ ದಿನಬಳಕೆ ವಸ್ತುಗಳ ಬೆಲೆ ಏರಿಕೆ ಕಾರಣ ಟೇಕ್ಸ್ ಹಾಕುವುದರಿಂದ, ಕಾರ್ಪೊರೇಟ್ ಟೆಕ್ಸ್ ಕಡಿಮೆ ಮಾಡಿ ಬಡವರ ವಸ್ತು ಖರೀದಿ ಮಾಡುವ ಟೆಕ್ಸ್ ಹೆಚ್ಚು ಮಾಡಿದ್ದಾರೆ. ಬಿಜೆಪಿ ರೈತರ 3.59ಸಾವಿರಕೋಟಿ ಸಾಲಮನ್ನಾ ಮಾಡಿಲ್ಲ,ಶ್ರೀಮಂತರ 1200ಕೋಟಿ ಸಾಲಮನ್ನಾ ಮಾಡಿದ್ದಾರೆ. ಸಿದ್ದರಾಮಯ್ಯ ನಗದಿ ಗ್ಯಾರಂಟಿ ಯೋಜನೆ ಬೇಕೋ, ಮೋದಿಯವರ ಉದ್ರಿ ಭಾಷಣದ ಸುಳ್ಳು ಗ್ಯಾರಂಟಿ ಬೇಕೋ ಎಂಬುವುದು ಅರಿತು ಕಾಂಗ್ರೇಸ್ ಗೆ ಬಹುತಮದಿಂದ ಗೆಲ್ಲಿಸಬೇಕು ಎಂದರು.

ಕಲಬುರ್ಗಿ ಲೋಕಸಭಾ ಕಾಂಗ್ರೇಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಮಾತನಾಡಿ ನನಗೆ ಒಮ್ಮೆ ಅವಕಾಶ ಕೊಡಿ ಕಲಬುರ್ಗಿ ಸಂಪೂರ್ಣ ಅಭಿವೃದ್ಧಿಗೊಳಿಸುತ್ತೇನೆ, ನನ್ನ ಜೋತೆ ಸಚಿವರು ಶಾಸಕರು ಸೇರಿಕೊಂಡು ಅಭಿವೃದ್ಧಿ ಮಾಡುತ್ತೇನೆ ಎಂದರು. ಕಾಂಗ್ರೇಸ್ ಸೇಡಂ ಅಧ್ಯಕ್ಷ ಶಿವಶರಣರೆಡ್ಡಿ ಪಾಟೀಲ, ಬಾಬುರಾವ ಪಾಟೀಲ, ಮಹಾಂತೇಶ ಕೌವಲಗಿ, ಬಸವರಾಜ ಸಜ್ಜನ, ಕುಪನೂರ ಗ್ರಾಪಂ ಅಧ್ಯಕ್ಷ ಮಮತಾಜ ಬೇಗಂ, ಲಕ್ಷ್ಮಿದೇವಿ ಮಂಜುನಾಥ ಕೊರವಿ, ಆನಂದ ಟೈಗರ, ಮಲ್ಲಿಕಾರ್ಜುನ, ಚಂದ್ರಶೇಖರ, ನಾಗೇಶ್ವರ ಪಾಟೀಲ, ಭೀಮರಾವ ಟಿಟಿ, ಆಸೀಫ್ ಅಲಿ, ಶರಣಪ್ಪ, ಅನೀಲ ಜಮಾದಾರ, ಮಸ್ತಾನ ಅಲಿ ಪಟ್ಟೇದಾರ, ಜೀಷಾನ ಪಟ್ಟೇದಾರ, ಲಕ್ಷ್ಮಣ ಆವುಂಟಿ, ಸಂತೋಷ ಗುತ್ತೇದಾರ, ಲಿಂಗಶೇಟ್ಟಿ ತಟ್ಟೆಪಳ್ಳಿ, ಸಲಾಂಪಾಷ, ಶರಣರೆಡ್ಡಿ, ಜಗದೀಶ ಪಾಟೀಲ, ಗುಂಡರೆಡ್ಡಿ, ಜಗನ್ನಾಥ ಚಿಂತಪಳ್ಳಿ, ವೆಂಕಟ ಅನೇಕರಿದ್ದರು.

> ● ರಾಜ್ಯ ಬಿಜೆಪಿ ಸರ್ಕಾರ ಕಳೆದ 4ವರ್ಷದಲ್ಲಿ ಲೂಟಿ ಮಾಡಿ ರಾಜ್ಯಕ್ಕೆ ಅಪಕೀರ್ತಿ ಮಾಡಿದ್ದಕ್ಕಾಗಿ ಕಾಂಗ್ರೇಸ್‌ಗೆ ಗೆಲ್ಲಿಸಿದ್ದೀರಿ. ನಾವು ಕೊಟ್ಟ ಗ್ಯಾರಂಟಿಗಳು ಅನುಷ್ಠಾನಕ್ಕೆ ತಂದಿದ್ದೇವೆ,ಲೋಕಸಭೆ ಚುನಾವಣೆಯಲ್ಲಿಯು ಸಹ ನಮ್ಮ 25ಗ್ಯಾರಂಟಿಯಿವೆ ಮತದಾರರು ಕೇಂದ್ರದಲ್ಲಿ ಕಾಂಗ್ರೇಸ್ ಆಡಳಿತಕ್ಕೆ ಬಂದರೆ 25ಗ್ಯಾರಂಟಿ ಅನುಷ್ಠಾನ ಮಾಡುತ್ತೇವೆ, ಕಾಂಗ್ರೇಸ್ ನುಡಿದಂತೆ ನಡೆಯುವ ಪಕ್ಷವಾಗಿದೆ. 10ವರ್ಷದಲ್ಲಿ ನರೇಂದ್ರ ಮೋದಿ ಸರ್ಕಾರ ರೈತರಿಗೆ ಬಡವರಿಗೆ ಏನು ಕೆಲಸ ಮಾಡಿದ್ದಾರೆ,ಡಾ.ಉಮೇಶ ಜಾಧವ ಅಭಿವೃದ್ಧಿ ಹೆಸರಲ್ಲಿ ಓಟು ಕೇಳುತ್ತಿಲ್ಲ,ಮೋದಿ ಹೆಸರಲ್ಲಿ ಮತಗಳು ಕೇಳುತ್ತಿದ್ದಾರೆ ಕಲಬುರ್ಗಿಗೆ ಅವರ ಕೊಡುಗೆ ಮತ್ತು ಮೋದಿ ಕೊಡುಗೆ ಶೂನ್ಯವಾಗಿದೆ. – ಡಾ.ಶರಣಪ್ರಕಾಶ ಪಾಟೀಲ
> ವೈದ್ಯಕೀಯ ಶಿಕ್ಷಣ ಮತ್ತು ರಾಯಚೂರು ಉಸ್ತುವಾರಿ ಸಚಿವ

ಅಭಿವೃದ್ಧಿಗಾಗಿ 1.50ಕೋಟಿ ರೂ.

ಮೋದಿ ಗ್ಯಾರಂಟಿ ಜೀರೋ ಗ್ಯಾರಂಟಿ ಬೋಕಸ್ ಗ್ಯಾರಂಟಿ ನಮ್ಮಿಂದ ಕಾಫಿ ಮಾಡಿದ್ದಾರೆ ಅದರಲ್ಲಿ ಯಾವುದೇ ಹುರುಳಿಲ್ಲ, ಬಹುಮತ ಬಂದರೆ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ಅಭ್ಯರ್ಥಿ ಆಗಲಿದ್ದಾರೆ. ನನ್ನ 10 ತಿಂಗಳ ಅವ ಧಿಯಲ್ಲಿ ಕುಪನೂರ ಗ್ರಾಮದ ಸಿಸಿರಸ್ತೆ,ಚರಂಡಿ,ಕೋಣೆ ಕಟ್ಟಡಗಳ ಅಭಿವೃದ್ಧಿಗೆ ಸುಮಾರು 1ಕೋಟಿ ರೂ. ಹಾಗೂ ಡಾಂಬರೀಕರಣ ರಸ್ತೆ 1.50ಕೋಟಿ ರೂ ನೀಡಿದ್ದೇನೆ,ಗಡಿಕೇಶ್ವಾರದಿಂದ ಹೊಡೆಬೀರನಳ್ಳಿವರೆಗೆ ಡಾಂಬರೀಕರಣ ರಸ್ತೆ ಮಾಡಲು ಅನು ಮೋದನೆ ನೀಡಲಾಗಿದೆ, ಸಿರೋಳ್ಳಿ ಗ್ರಾಮಕ್ಕೆ ಅಭಿವೃದ್ಧಿಗಾಗಿ 1.50ಕೋಟಿ ನೀಡಲಾಗಿದೆ.

ನೇಹಾ ಕೊಲೆಗೆ ಇಂಡಿಯಲ್ಲಿ ಆಕ್ರೋಶ, ಪ್ರತಿಭಟನೆ

• ಉದಯವಾಹಿನಿ, ಇಂಡಿ

ಇಂಡಿ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಖಂಡಿಸಿ ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸಿ ಇಂಡಿ ತಾಲ್ಲೂಕಾ ಚಿಂತನಾ ಕ್ರೀಯಾಶೀಲ ಮಠಾಧೀಶರ ಸಮಿತಿ, ಇಂಡಿ ತಾಲ್ಲೂಕಾ ಜಂಗಮ ಕ್ಷೇಮಾಭಿವೃದ್ಧಿ ಸಂಘ, ಇಂಡಿ ತಾಲ್ಲೂಕಾ ಸರ್ವಧರ್ಮ ಸಮನ್ವಯ ಒಕ್ಕೂಟ ಸಹಯೋಗದಲ್ಲಿ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ವಿದ್ಯಾರ್ಥಿ ಕೊಲೆ ಆರೋಪಿ ಫಯಾಜ ವಿರುದ್ಧ ಘೋಷಣೆ ಕುಗಿದ ಪ್ರತಿಭಟನಾಕಾರರು ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಗಮನ ಸೆಳೆದರು.

ಪ್ರತಿಭಟನೆ ಪಟ್ಟಣದ ಅಂಬೇಡ್ಕರ ವೃತ್ತದಿಂದ ಬಸವವೃತ್ತದ ಮೂಲಕ ಮಿನಿ ವಿಧಾನಸೌಧ ತಲುಪಿ ಅಲ್ಲಿ ಬೃಹತ್ ಸಭೆಯಾಗಿ ಮಾರ್ಪಟ್ಟಿತು.

ಅಲ್ಲಿ ಮಾತನಾಡಿದ ಹತ್ತಳ್ಳಿ ಗುರುಪಾದೇಶ್ವರ ಶ್ರೀಗಳು ಮತ್ತು ತಡವಲಗಾದ ರಾಚೋಟೇಶ್ವರ ಶ್ರೀಗಳು ಆರೋಪಿ ಫಯಾಜಗೆ ಗಲ್ಲು ಶಿಕ್ಷೆ ಆಗಬೇಕು. ಕಾನೂನು ಮೂಲಕ ಕಠಿಣ ಕ್ರಮ ಕೈಕೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದರು. ಜೆಡಿಎಸ್ ಮುಖಂಡ ಬಿ.ಡಿ.ಪಾಟೀಲ, ನ್ಯಾಯವಾದಿ

ಉದಯವಾಹಿನಿ ಚಿತ್ರ

ಮತ್ತು ಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್.ಎಲ್.ನಿಂಬರಗಿಮಠ, ಶ್ರೀಶೈಲಗೌಡ ಪಾಟೀಲ, ಪುರಸಭೆ ಮಾಜಿ ಅಧ್ಯಕ್ಷ ಯಮನಾಜಿ ಸಾಳುಂಕೆ,ರಾಘವೇಂದ್ರ ಕಾಪಸೆ,ಪುಸಭೆ ಸದಸ್ಯ ಅನೀಲಗೌಡ ಬಿರಾದಾರ ಸೋಮು ನಿಂಬರಗಿಮಠ, ಸತೀಶ ಕುಂಬಾರ ಮಾತನಾಡಿ ರಾಜ್ಯದಲ್ಲಿ ಭಯೆಯ ವಾತಾವರಣ ಇದೆ.ಹೆಣ್ಣನ್ನು ಗೌರವಿಸುವ ದೇಶ ನಮ್ಮದು. ಕೊಲೆ ಮಾಡಿದವನಿಗೆ ಗಲ್ಲು ಶಿಕ್ಷೆ ನೀಡಿ ಮಹಿಳೆಗೆ ಕರ್ನಾಟಕ ಸುರಕ್ಷಿತವೆಂದು ಸಾರಬೇಕಾಗಿದೆ ಎಂದರು.

ಪ್ರತಿಭಟನೆಯಲ್ಲಿ ಬಂಥನಾಳದ ವೃಷಭಲಿಂಗೇಶ್ವರ ಶ್ರೀಗಳು, ಆಹಿರಸಂಗದ ಮಲ್ಲಿಕಾರ್ಜುನ ಶ್ರೀಗಳು, ಹಾವಿನಾಳದ ವಿಜಯಮಹಾಂತೇಶ ಶ್ರೀಗಳು, ಇಂಚಗೇರಿಯ ರುದ್ರಮುನಿ ಶ್ರೀಗಳು,ರೋಡಗಿಯ ಅಭಿನವ ಶಿವಲಿಂಗೇಶ್ವರ ಶ್ರೀಗಳು,ಅಥರ್ಗಾದ ಮುರಗೇಂದ್ರ ಶ್ರೀಗಳು,ಚಡಚಣದ ಷಡಕ್ಷರಿ ಶ್ರೀ ಗಳು, ರಾಮಸಿಂಗ ಕನ್ನೊಳ್ಳಿ, ವೇಕಂಟೇಶ ಕುಲಕರ್ಣಿ, ಪುರಸಭೆ ಸದಸ್ಯ ದೇವೇಂದ್ರ ಕುಂಬಾರ, ಚಂದು ದೇವರ, ಪ್ರಕಾಶ ಬಿರಾದಾರ, ಶ್ರೀಧರ ಕ್ಷತ್ರಿ, ರಾಜಗುರು ದೇವರ, ಶಾಂತು ಕಂಬಾರ, ಆನಂದ ದೇವರ, ಮಹೇಶ ಹೂಗಾರ, ಸೋಮಶೇಖರ ದೇವರ, ಶಿವಾಜಿ ಪವಾರ, ಅಭಿಷೇಕ ಬಿಳಗಿ, ಶಾಂತೇಶ ಪಾಸೋಡಿ ಮತ್ತಿತರಿದ್ದರು.

ಫಯಾಜ್‌ನನ್ನು ಎನ್ ಕೌಂಟರ ಮಾಡಬೇಕು

ಅಲ್ಪ ಸಂಖ್ಯಾತ ಮುಖಂಡರಾದ ರೈಸ ಅಷ್ಟೇಕರ, ಮಹಮ್ಮದ ಇಲಿಯಾಸ ಮಾಣಕ ಜನಾಬ, ಮೌಲಾನಾ ನಾಯ್ಕೋಡಿ ಮಾತನಾಡಿ ಭಾರತದಲ್ಲಿ ಹಿಂದು ಮುಸ್ಲೀಂಮರು ಸಹೋದರಂತೆ ಬಾಳುತ್ತಿದ್ದು ಇಲ್ಲಿರುವ ಮುಸ್ಲಿಮರು ಭಾರತೀಯರು, ಮಾನವೀಯತೆ ಪ್ರತೀಕ ಕಾರಣ ಅಪರಾಧಿ ಫಯಾಜ್‌ನನ್ನು ಎನ್ ಕೌಂಟರ್ ಮಾಡಬೇಕೆಂದು ಒತ್ತಾಯಿಸಿದರು. ನಂತರ ತಹಶೀಲ್ದಾರ ಮಂಜುಳಾ ನಾಯಕ ಇವರಿಗೆ ಮನವಿ ಅರ್ಪಿಸಲಾಯಿತು.

ಆಡಳಿತ ಪಕ್ಷದಿಂದಲೇ ದಾರಿ ತಪ್ಪಿಸುವ ಕೆಲಸ ನಡೆದಿದೆ

• ಉದಯವಾಹಿನಿ, ಹುಬ್ಬಳ್ಳಿ

ನನ್ನ ಮಗಳು ನೇಹಾಳ ಹತ್ಯೆ ಪ್ರಕರಣದ ತನಿಖೆಯ ದಾರಿ ತಪ್ಪಿಸುವ ಕೆಲಸ ಆಡಳಿತ ಪಕ್ಷದವರಿಂದಲೇ ನಡೆಯುತ್ತಿದೆ ಎಂದು ಪಾಲಿಕೆಯ ಕಾಂಗ್ರೇಸ್ ಸದಸ್ಯ ನಿರಂಜನ ಹಿರೇಮಠ ಆರೋಪಿಸಿದ್ದಾರೆ. ಈ ಕುರಿತು ಮಾತನಾಡಿದ ಅವರು, ಘಟನೆ ನಡೆದ ಮೊದಲ ದಿನ ನನ್ನ ಜೊತೆಗೆ ಇದ್ದವರು, ನನ್ನ ಬೆನ್ನಿಗೆ ನಿಂತಿಲ್ಲ, ಘಟನೆ ವೈಯಕ್ತಿಕ ಎಂದು ಹೇಳಿಕೆ ನೀಡಿದ್ದ ಗೃಹ ಸಚಿವ ಜಿ.ಪರಮೇಶ್ವರ ಅವರು ಇಂದು ವಿಷಾದ ವ್ಯಕ್ತಪಡಿಸಿದ್ದಾರೆ. ಆಡಳಿತ ಪಕ್ಷ ದಲ್ಲಿ ಇದ್ದವರೇ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ ಮೂಲಕ ತನಿಖೆಯ ದಾರಿ ತಪ್ಪಿಸುವ ಪ್ರಯತ್ನ ನಡೆಸಿದ್ದಾರೆ.

ನೇಹಾ ಹತ್ಯೆಯಲ್ಲಿ ಫಯಾಜ್ ಒಬ್ಬನೇ ಇಲ್ಲ, ಈತನ ಹಿಂದೆ ನಾಲ್ಕು ಜನರಿದ್ದಾರೆ. ಅವರ ಹೆಸರನ್ನು ಪೊಲೀಸರಿಗೆ ಕೊಟ್ಟಿದ್ದೇನೆ. ಪೋಲಿಸರಿಗೆ ಈ ಕುರಿತು ತನಿಖೆ ಆಗಬೇಕು ಎಂದು ಒತ್ತಾಯಿಸಿದ್ದೇನೆ. ಇನ್ಟಾಗ್ರಾಂನಲ್ಲಿ ನನ್ನ ಮಗಳ ಹೆಸರಿನಲ್ಲಿ ನಕಲಿ ಖಾತೆಯನ್ನು ಸೃಷ್ಟಿಸಿ ಅವಳ ಬಗ್ಗೆ ಸಮಾಜದಲ್ಲಿ ತಪ್ಪು ತಿಳುವಳಿಕೆ ಬರುವಂತೆ ಮಾಡಿದ್ದಾರೆ. ಆರೋಪಿ ಜೈಲಿನಲ್ಲಿದ್ದರು ಖಾತೆಯನ್ನು ಯಾರು ಸೃಷ್ಟಿ ಮಾಡಿದ್ದಾರೆ ಎಂದು ಪೊಲೀಸರು ಪತ್ತೆ ಹಚ್ಚಬೇಕು. ಈ ಕುರಿತು ವಕೀಲರೊಂದಿಗೆ ಮಾತನಾಡಿದ್ದೇನೆ. ಸೈಬರ್ ಪೊಲೀಸರಿಗೆ ದೂರು ನೀಡಲಿದ್ದೇನೆ.

ಉದಯವಾಹಿನಿ ಚಿತ್ರ

> ● ಹಿಂದೆ ಆರೋಪಿ ಫಯಾಜ್ ಆಸ್ತಿ ವಿಚಾರಕ್ಕೆ ಸಂಬಂಧಿಸಿದಂತೆ ತನ್ನ ತಂದೆಯನ್ನೇ ಪೊಲೀಸ್ ಠಾಣೆಯಲ್ಲಿ ಕೊಲೆ ಮಾಡಲು ಹೋಗಿದ್ದ, ಇದನ್ನು ಸಮಾಜದ ಮುಖಂಡರು ನನಗೆ ತಿಳಿಸಿದ್ದಾರೆ. ಪೊಲೀಸರು ಮುಚ್ಚಳಿಕೆ ಬರೆಸಿಕೊಂಡು ಕಳಿಸಿದ್ದಾರೆ. ಈ ವಿಷಯ ನನ್ನ ಗಮನಕ್ಕೆ ಬಂದಿದ್ದರೇ ನನ್ನ ಮಗಳ ರಕ್ಷಣೆಯನ್ನು ನಾನು ಮಾಡಿಕೊಳ್ಳುತ್ತಿದ್ದೆ, ಮಗಳು ಇಂದು ಬದುಕುಳಿಯುತ್ತಿದ್ದಳು
> –ನಿರಂಜನ ಹಿರೇಮಠ, ನೇಹಾಳ ತಂದೆ

ತನಿಖೆಯ ದಾರಿ ತಪ್ಪಿಸುವ ಪ್ರಯತ್ನ

ಗಾಳಿ, ಗುಡುಗು, ಸಿಡಿಲಿನ ಆರ್ಭಟ

• ಉದಯವಾಹಿನಿ, ಕಲಬುರಗಿ

ಬಿಸಿಲಿನ ಬೇಗೆಗೆ ತತ್ತರಿಸಿದ್ದ ಜನರಿಗೆ ಶನಿವಾರ ಮಧ್ಯಾಹ್ನ ಸುರಿದ ಮಳೆ ತಂಪಿನ ಕಂಪು ನೀಡಿತು. ದ್ವಿಚಕ್ರ ವಾಹನಗಳ ಸವಾರರು, ಪಾದಚಾರಿಗಳು ಮಳೆಯಲ್ಲಿ ನೆನೆದು ಮಳೆಯ ಪುಳಕ ಅನುಭವಿಸಿದರು.ಬಿರುಸಿನ ಮಳೆಯಿಂದಾಗಿ ಬಿಸಿಲಿನಿಂದ ಕಾದಿದ್ದ ರಸ್ತೆಗಳ ಮೇಲೆ ನೀರು ಹರಿಯಿತು. ನಗರದಲ್ಲಿ ಶನಿವಾರ ಬೆಳಿಗ್ಗೆಯಿಂದಲೇ ಬಹುತೇಕ ಮೋಡ ಕವಿದ ವಾತಾವರಣ ಇತ್ತು. ಜೊತೆಗೆ ಸೆಕೆಯೂ ಹೆಚ್ಚಾಗಿತ್ತು. ಮಧ್ಯಾಹ್ನ 12.30ರ ವೇಳೆಗೆ ಆಗಸದಲ್ಲಿ ಮೋಡಗಳು ದಟ್ಟಿಸಿದ್ದರಿಂದ ನಗರದಲ್ಲಿ ಕತ್ತಲಿನಂತೆ ಭಾಸವಾಯಿತು. ಮಧ್ಯಾಹ್ನ 1.15ರ ವೇಳೆಗೆ ಹನಿ–ಹನಿಯಾಗಿ ಸಿಡಿದ ಮಳೆ 1.30ರ ಹೊತ್ತಿಗೆ ಬಿರುಸು ಪಡೆಯಿತು. ಜೊತೆಗೆ ಸಣ್ಣ ಗಾಳಿ ಹಾಗೂ ಅಲ್ಲಲ್ಲಿ ಗುಡುಗು, ಸಿಡಿಲಿನ ಆರ್ಭಟವೂ ಕಂಡು ಬಂತು. ಶುಕ್ರವಾರವೂ ಬೆಳಿಗ್ಗೆಯೂ ಕೆಲ ನಿಮಿಷಗಳ ಕಾಲ ತುಂತುರು ಮಳೆಯಾಗಿತ್ತು.

ಹೊರಗುಳಿಯದಂತೆ ಮಾತದಾನ ಹಕ್ಕನ್ನು ಎಲ್ಲರೂ ಚಲಾಯಿಸಿ

• ಉದಯವಾಹಿನಿ, ಸಿಂಧನೂರು

ಯಾರೂ ಕೂಡ ಮತದಾನದಿಂದ ಹೊರಗುಳಿಯ ದಂತೆ ಎಲ್ಲರೂ ತಮ್ಮ ಹಕ್ಕನ್ನು ಚಲಾಯಿಸುವಂತೆ ತಾಲ್ಲೂಕ ಪಂಚಾಯತ್ ಸಹಾಯಕ ನಿರ್ದೇಶಕ (ಪಂ ರಾ.) ಅಮರಗುಂಡಪ್ಪ ಮತದಾನದ ಜಾಗೃತಿ ಅಭಿಯಾನಕ್ಕೆ ಅರಗಿನ ಮರದಲ್ಲಿ ಚಾಲನೆ ನೀಡಿದರು.

2024, ಕರ್ನಾಟಕ ಸರ್ಕಾರ ಜಿಲ್ಲಾ ಪಂಚಾಯತ ರಾಯಚೂರು, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ ತಾಲ್ಲೂಕು ಸ್ವಿಪ್ ಸಮಿತಿ ಸಿಂಧನೂರು , ವತಿಯಿಂದ ಲೋಕ ಸಭಾ ಸಾರ್ವತ್ರಿಕ ಚುನಾವಣೆ–2024 ರ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ,

ಉದಯವಾಹಿನಿ ಚಿತ್ರ

ಮಾತನಾಡಿದ ಅವರು ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು.

ಮೇ.7 ನೇ ತಾರೀಕಿನಂದು ತಾವು ಮತ ನೀಡಿ, ಇತರರನ್ನು ಸಹ ಮತಗಟ್ಟೆಗೆ ಕರೆದುಕೊಂಡು ಹೋಗಿ ಕಡ್ಡಾಯವಾಗಿ ಮತ ಹಾಕಿಸಬೇಕು ಯಾರೂ ಕೂಡ ಮತದಾನದಿಂದ ಹೊರಗುಳಿಯದಂತೆ ಎಲ್ಲರೂ ತಮ್ಮ ಹಕ್ಕನ್ನು ಚಲಾಯಿಸುವ ಜವಾಬ್ದಾರಿಯನ್ನು ಯಾರು ಮೆರೆಯಬಾರದು ಎಂದು ತಿಳಿಸಿದರು.

ನಂತರ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪೂರ್ಣಿಮಾ ಅವರು ಮತದಾನ ಪ್ರತಿಜ್ಞಾವಿಧಿಯನ್ನು ಭೋದಿಸಿದರು. ಕಳೆದ ಚುನಾವಣೆಯಲ್ಲಿ ಕಡಿಮೆ ಮತದಾನವಾದ ಗ್ರಾಮಗಳಲ್ಲಿ ಮತದಾನದ ಜಾಗೃತಿ ಟ್ಯಾಬ್ಲೋ ಮೂಲಕ ತಾಲೂಕಿನ ಹುಲಗುಂಚಿ, ಸಿ. ಎಸ್. ಕ್ಯಾಂಪ. ಆರ್. ಹೆಚ್ ಕ್ಯಾಂಪ, ಬಾಲಾಜಿ ಕ್ಯಾಂಪ, ಇನ್ನಿತರ ಗ

ದಿನ ಭವಿಷ್ಯ

ರಾಹುಕಾಲ	ಸಾಯಂಕಾಲ	04:30 ರಿಂದ 06:00
ಗುಳಿಕ ಕಾಲ	ಮಧ್ಯಾಹ್ನ	03:00 ರಿಂದ 04:30
ಯಮಗಂಡ ಕಾಲ	ಮಧ್ಯಾಹ್ನ	12:00 ರಿಂದ 01:30

ಮೇಷ ಜನರನ್ನು ನಿಮ್ಮಿಷ್ಟದಂತೆ ನಡೆದುಕೊಳ್ಳುವಂತೆ ಒತ್ತಾಯಿಸಬೇಡಿ. ಇತರರ ಬಯಕೆ ಮತ್ತು ಆಸಕ್ತಿಯ ಬಗ್ಗೆ ಯೋಚಿಸಿದಲ್ಲಿ ನಿಮಗೆ ಅನಿಯಮಿತ ಸಂತೋಷ ಬರುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ.

ವೃಷಭ ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.

ಮಿಥುನ ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಅಗತ್ಯವಾದ ವಸ್ತುಗಳ ಮಾತ್ರ ಖರೀದಿಸಲು ಪ್ರಯತ್ನಿಸಿ.

ಕರ್ಕಾಟಕ ಒತ್ತಡವನ್ನು ಉಪೇಕ್ಷಿಸಬಾರದು. ಇದು ವೇಗವಾಗಿ ತಂಬಾಕು ಮತ್ತು ಮದ್ಯದಷ್ಟೇ ಗಂಭೀರವಾದ ಸಾಂಕ್ರಾಮಿಕ ರೋಗವಾಗುತ್ತಿದೆ. ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ.

ಸಿಂಹ ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ. ಜೀವನದ ಜಟಿಲತೆಗಳನ್ನು ಅರ್ಥಮಾಡಿಕೊಳ್ಳಲು ಇಂದು ಮನೆಯ ಯಾವುದೇ ಹಿರಿಯ ವ್ಯಕ್ತಿಯೊಂದಿಗೆ ನೀವು ಸಮಯವನ್ನು ಕಳೆಯಬಹುದು.

ಕನ್ಯಾ ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು.

ತುಲಾ ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ.

ವೃಶ್ಚಿಕ ಇಂದು ನೀವು ನೀವು ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ. ಇದು ಒಂದು ಸುಂದರವಾದ ಅದ್ಭುತ ದಿನ. ಶಾಪಿಂಗ್ ಮತ್ತು ಇತರ ಚಟುವಟಿಕೆಗಳು ನಿಮ್ಮನ್ನು ದಿನವಿಡೀ ಬಿಡುವಿಲ್ಲದಂತಿಡುತ್ತವೆ.

ಧನಸ್ಸು ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ.

ಮಕರ ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ, ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ.

ಕುಂಭ ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು.

ಮೀನ ನೀವು ನಿಮ್ಮ ಮನೆಯ ಕಿರಿಯ ಸದಸ್ಯರೊಂದಿಗೆ ಸಮಯವನ್ನು ಕಳೆಯುವುದು ಕಲಿಯಬೇಕು. ನೀವು ಅದನ್ನು ಮಾಡದಿದ್ದರೆ, ನೀವು ಮನೆಯಲ್ಲಿ ಅಭಿಮಾನವನ್ನು ಬೆಳೆಸಲು ಸಾಧ್ಯವಾಗುವುದಿಲ್ಲ.

ನಾಲ್ವರ ಹತ್ಯೆ ಮಾಡಿದವರಿಗೆ ಗಲ್ಲು ಶಿಕ್ಷೆಯಾಗಬೇಕು: ಬೊಮ್ಮಾಯಿ

● ರಾಜ್ಯ ಕಾಂಗ್ರೇಸ್ ಸರ್ಕಾರದ ಅವಧಿಯಲ್ಲಿ ಕೊಲೆ ಗಡುಕರು, ಸಮಾಜ ಘಾತುಕರೇ ಪ್ರಥಮ ಪ್ರಜೆಗಳು

• ಉದಯವಾಹಿನಿ ಗದಗ

ರಾಜ್ಯ ಕಾಂಗ್ರೇಸ್ ಸರ್ಕಾರದ ಅವಧಿಯಲ್ಲಿ ಕೊಲೆಗಡುಕರು, ಸಮಾಜ ಘಾತುಕರೇ ಪ್ರಥಮ ಪ್ರಜೆಗಳಾಗಿದ್ದು, ಅವರಿಗೆ ರಾಜ ಮರ್ಯಾದೆ ಸಿಗುತ್ತಿದೆ. ಗದಗನಲ್ಲಿ ನಾಲ್ವರನ್ನು ಹತ್ಯೆ ಮಾಡಿರುವ ಆರೋಪಿಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಅವರು ಗದಗ ನಗರದಲ್ಲಿ ಗದಗ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಅವರ ಪುತ್ರ ಸೇರಿ ಅವರ ಕುಟುಂಬದ ನಾಲ್ವರ ಹತ್ಯೆಯಾಗಿರುವ ಹಿನ್ನೆಲೆಯಲ್ಲಿ ಇಂದು ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಘಟನೆಯಿಂದ ನಾವೆಲ್ಲ ಅತ್ಯಂತ ಆಘಾತದಲ್ಲಿದ್ದೆವೆ. ಬಾಕಳೆ ಅವರ ಕುಟುಂಬಕ್ಕೆ ಪೂರ್ಣ ದಿಗ್ಭ್ರಮೆ ಆಗಿದೆ. ಈ ಘಟನೆಯನ್ನು ಯಾರೂ ಊಹೆ ಮಾಡಲು ಸಾಧ್ಯವಿಲ್ಲ. ದುಷ್ಕರ್ಮಿಗಳಿಗೆ ಯಾವುದೇ ಭಯ ಇಲ್ಲ. ಸರ್ಕಾರ, ಪೊಲಿಸರ ಭಯ ಇಲ್ಲ. ಯಾವ ಹಂತಕ್ಕೆ ಈ ವ್ಯವಸ್ಥೆ ತಲುಪಿದೆ ಎಂದು ಹೇಳಿದರು.

> ● ಡಿಜಿಪಿ, ಐಜಿಪಿ ಎಲ್ಲಿದ್ದಾರೆ. ಉತ್ತರ ಕರ್ನಾಟಕ ಭಾಗಕ್ಕೆ ಒಮ್ಮೆಯಾದರೂ ಒಂದು ರೌಡಿಗಳ ಪರೇಡ್ ಮಾಡಿದ್ದೀರಾ ಗದಗನಲ್ಲಿ ರೌಡಿಗಳ ಪರೇಡ್ ಮಾಡಿಸಿದ್ದೀರಾ ಎಂದು ಖಾರವಾಗಿ ಪ್ರಶ್ನಿಸಿದರು.
> – ಮಾಜಿ ಸಿಎಂ ಬೊಮ್ಮಾಯಿ

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ಕೊಲೆಯಾಗಿದೆ. ವಿದ್ಯಾರ್ಥಿನಿ ಕೊಲೆ ನಡೆದ ದಿನವೇ ರಾತ್ರಿ ಗದಗನಲ್ಲಿ ದುಷ್ಕರ್ಮಿಗಳು ಅಷ್ಟೊಂದು ಧೈರ್ಯದಿಂದ ಕೊಲೆ ಮಾಡುತ್ತಾರೆ ಎಂದರೆ ಅವರಿಗೆ ಈ ಸರ್ಕಾರದಲ್ಲಿ ಮೊದಲು ರಕ್ಷಣೆ ಸಿಗುತ್ತಿದೆ. ಕೊಲೆಗಡುಕರು ಹಂತಕರು ರಾಜ್ಯದ ಮೊದಲ ಪ್ರಜೆಗಳಾಗಿದ್ದಾರೆ. ರಾಜಕಿಯ ಬೆಂಬಲ ಅವರಿಗೆ ಇದೆ. ನೇರವಾಗಿ ಆಡಳಿತದ ವೈಫಲ್ಯದ ಜೊತೆಗೆ ಮತ ಬ್ಯಾಂಕ್ ತುಷ್ಟೀಕರಣದಿಂದ ಈ ರೀತಿಯ ಘಟನೆಗಳು ನಡೆಯುತ್ತಿವೆ. ಸಾಮೂಹಿಕ ಹತ್ಯೆಗಳು ರಾಜಾರೋಷವಾಗಿ ನಡೆಯುತ್ತಿವೆ ಎಂದು ವಾಗ್ದಾಳಿ ನಡೆಸಿದರು. ಜನರ ಮಾನ ಪ್ರಾಣ ಕಾಪಾಡುವಲ್ಲಿ ಈ ಸರ್ಕಾರ ಸಂಪೂರ್ಣ ಎಡವಿದೆ. ಕಾಂಗ್ರೇಸ್ ಸರ್ಕಾರ ಜನರಿಗೆ ಗ್ಯಾರೆಂಟಿಗಳನ್ನು ಕೊಡುತ್ತಿದೆ ಈ ಸರ್ಕಾರದಲ್ಲಿ ಕೊಲೆ ಗ್ಯಾರೆಂಟಿ ಎನ್ನುವಂತಾಗಿದೆ. ಹಿಂದೆ ಆಗಿಲ್ವಾ ಎಂದು ಸರ್ಕಾರ ಈಗಿನ ಘಟನೆಯನ್ನು ಸಮರ್ಥನೆ ಮಾಡಿಕೊಳ್ಳುತ್ತಿದೆ. ನಮ್ಮ ಅವಧಿಯಲ್ಲಿ ಚಿಕ್ಕಮಗಳೂರಿನಲ್ಲಿ ಹೆಣ್ಣು ಮಗಳ ಮೇಲೆ ಅತ್ಯಾಚಾರ ನಡೆದಾಗ ನಾವು ಅವನನ್ನು ಗಲ್ಲಿಗೇರಿಸುವಂತೆ ಕ್ರಮ ಕೈಗೊಂಡಿದ್ದೇವೆ. ಈ ಪ್ರಕರಣದ್ಲಿಯೂ ಅದೇ ರೀತಿ ಆಗಲಿ ಎಂದು ಆಗ್ರಹಿಸಿದರು.

ಉದಯವಾಹಿನಿ ಚಿತ್ರ

ಕೊಲೆಗಡುಕರಿಗೆ ರಾಜ ಮರ್ಯಾದೆ

ಕುಟುಂಬದವರು ನೆಮ್ಮದಿಯಾಗಿ ನಿದ್ದೆ ಮಾಡದ ಪರಿಸ್ಥಿತಿ

ಪೊಲಿಸರು ಕೆಲವು ಸಲ ಕ್ರಮ ಕೈಗೊಳ್ಳಲು ಮುಂದಾದರೂ ಅವರ ಮೇಲೆ ರಾಜಕೀಯ ಪ್ರಭಾವ ಬೀರಲಾಗುತ್ತಿದೆ. ಪೊಲಿಸರು ಅಸಹಾಯಕರಾಗಿದ್ದಾರೆ. ಇದು ಕೇವಲ ಬಾಕಳೆ ಅವರ ಕುಟುಂಬದ ವಿಷಯವಲ್ಲ. ಇದು ಇಡೀ ಸಮಾಜದ ವಿಷಯ. ಆ ಕುಟುಂವದವರು ನೆಮ್ಮದಿಯಾಗಿ ನಿದ್ದೆ ಮಾಡದ ಪರಿಸ್ಥಿತಿ ಇದೆ. ಜನನಿಬಿಡ ಪ್ರದೇಶದಲ್ಲಿ ಬಂದು ಧೈರ್ಯವಾಗಿ ಕೊಲೆ ಮಾಡಿದ್ದಾರೆ ಎಂದರೆ ಅವರಿಗೆ ಭಯ ಇಲ್ಲ. ಕೊಲೆ ಮಾಡಿದವರನ್ನು ಗಲ್ಲಿಗೇರಿಸಬೇಕು. ಈ ಪ್ರಕರಣದಲ್ಲಿ ಸರ್ಕಾರ ಬದುಕಿದೆಯೋ ಸತ್ತಿದೆಯೋ ಎನ್ನುವುದು ಗೊತ್ತಾಗುತ್ತದೆ. ನಾವು ಈ ಕುಟುಂಬದ ಜೊತೆಗೆ ಇರುತ್ತೇವೆ. ಈ ಜನರ ಜೊತೆಗೆ ನಾವಿದ್ದೇವೆ ಎಂದು ಹೇಳಿದರು.

> ● ನಮ್ಮ ಅವಧಿಯಲ್ಲಿ ಸಮಾಜ ಘಾತುಕ ಚಟುವಟಿಕೆಗಳು ನಡೆದಾಗ ನಮ್ಮ ಸರ್ಕಾರ ಡಿಜೆ ಹಳ್ಳಿ ಕೆಜಿ ಹಳ್ಳಿ ಗಲಭೆ ಪ್ರಕರಣದಲ್ಲಿ ನಾವು ನೂರಕ್ಕೂ ಹೆಚ್ಚು ಜನರನ್ನು ಬಂಧಿಸಿದ್ದೇವು. ಅವರು ಅಮಾಯಕರು ಅವರನ್ನು ಬಿಡುಗಡೆ ಮಾಡಿ ಎಂದು ಕಾಂಗ್ರೇಸ್ ಶಾಸಕರು ಪತ್ರ ಬರೆದಿದ್ದರು. ಅದು ತಪ್ಪು ಎಂದು ಕಾಂಗ್ರೇಸ್‌ನ ಯಾವ ನಾಯಕರೂ ಹೇಳಲಿಲ್ಲ ಎಂದು ತೀವ್ರ ವಾಗ್ದಾಳಿ ನಡೆಸಿದರು. –ಮಾಜಿ ಸಿಎಂ ಬೊಮ್ಮಾಯಿ

ಖಾಜಾ ಕಾಲೋನಿ ಬಡವಣೆಯಲ್ಲಿ ನೀರಿನ ಸಮಸ್ಯೆ

• ಉದಯವಾಹಿನಿ ಜೇವರ್ಗಿ

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಬರುವ ಖಾಜಾ ಕಾಲೋನಿ ಬಡಾವಣೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವಂತೆ ಒತ್ತಾಯಿಸಿ ಬಡಾವಣೆ ಸಾರ್ವಜನಿಕರು ಪುರಸಭೆ ಮುಖ್ಯ ಅಧಿಕಾರಿ ಶಂಭುಲಿಂಗ ದೇಸಾಯಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಸುಮಾರು ಒಂದು ತಿಂಗಳುಗಳ ಕಾಲ ಗತಿಸಿದರೂ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಆಗುತ್ತಿಲ್ಲ. ಸಾರ್ವಜನಿಕರು ಕುಡಿಯಲು ನೀರು ತರಬೇಕೆಂದರೆ ದೂರದ ಬಡವಣೆಗೆ ಹೋಗಬೇಕು ಜೊತೆಗೆ ನಲ್ಲಿ ನೀರು ಸಮಯಕ್ಕೆ ಸರಿಯಾಗಿ ಬಿಡುತ್ತಿಲ್ಲ ರಂಜಾನ್ ತಿಂಗಳಲ್ಲಿ ಸಂಪೂರ್ಣವಾಗಿ ನೀರಿನ ಸಮಸ್ಯೆ ಉದ್ಭವವಾಗಿತ್ತು ಇನ್ನು ಸಮಸ್ಯೆ ಬಗೆಹರಿಸಿಲ್ಲ ಕೂಡಲೇ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಒತ್ತಾಯಿಸಿ ರಫೀಕ್ ಜಮಾದಾರ್ ಒತ್ತಾಯಿಸಿದರು.

ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಖಾಜಾ ಕಾಲೋನಿ ನಿವಾಸಿಗಳಾದ ರಫೀಕ್ ಜಮಾದಾರ್ ಕಾಂಗ್ರೇಸ್ ಯುವ ಮುಖಂಡರು, ಜಾನಿಮಿಯ ಮದ್ರಿ, ಧರ್ಮಣ್ಣ, ಸಂಪತ್ ಕುಮಾರ್, ಬಡಿ ಗೌಡ, ಸುಲೇಮಾನ್, ಮೈನುದ್ದೀನ್ , ಅಕ್ಲಾಕ್ ಪಾಷಾ, ವಾರ್ಡ್ ಮೆಂಬರ್ ಸಿದ್ದರಾಮ್ ಯಳಸಂಗಿ, ಉಪಸ್ಥಿತರಿದ್ದರು.

ಅರಣ್ಯ ಸಿಬ್ಬಂದಿಯೇ ಹುಲಿ ಬೇಟೆಗಾರ, ಹುಲಿ ದೇಹದ ಭಾಗ ವಶ

• ಉದಯವಾಹಿನಿ ಚಿಕ್ಕಮಗಳೂರು

ಅರಣ್ಯ ಸಿಬ್ಬಂದಿಯ ಸಹಕಾರದಿಂದ ಹುಲಿ ಬೇಟೆಯಾಡಿ ದೇಹದ ಭಾಗಗಳನ್ನು ಇರಿಸಿಕೊಂಡಿದ್ದ ಇಬ್ಬರನ್ನು ಚಿಕ್ಕಮಗಳೂರು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ. ಘಟನೆಯಲ್ಲಿ ಪ್ರಮುಖ ಆರೋಪಿಯಾಗಿರುವ ಅರಣ್ಯ ಸಿಬ್ಬಂದಿ ತಲೆ ಮರೆಸಿಕೊಂಡಿದ್ದು ಆತನ ಬಂಧನಕ್ಕೆ ಬಲೆ ಬೀಸಲಾಗಿದೆ.

ಎರಡು ತಿಂಗಳ ಹಿಂದೆಯೇ ಚಿಕ್ಕಮಗಳೂರು ಅರಣ್ಯ ವಿಭಾಗದಲ್ಲಿ ಘಟನೆ ನಡೆದಿದ್ದರೂ ಈಗ ಅದು ಬೆಳಕಿಗೆ ಬಂದಿದೆ. ಅದರಲ್ಲಿ ಅರಣ್ಯ ಸಿಬ್ಬಂದಿಯೂ ಇದ್ದ. ಹುಲಿ ಬೇಟೆಗೆ ಸಹಕಾರ ನೀಡಿದ್ದ ಎನ್ನುವ ಮಾಹಿತಿ ಬಯಲಾಗಿದೆ. ಆತನ ವಿರುದ್ದವೂ ಪ್ರಕರಣ ದಾಖಲಾಗುತ್ತಿದ್ದಂತೆ ಆರೋಪಿ ಪರಾರಿಯಾಗಿದ್ದಾರೆ. ಘಟನೆಯಲ್ಲಿ ಇನ್ನೂ ಹಲವರು ಭಾಗಿಯಾಗಿರುವ ಶಂಕೆಯಿದ್ದು, ಅರಣ್ಯ ಇಲಾಖೆ ಮೂಡಿಗೆರೆ ಅಧಿಕಾರಿಗಳು ತನಿಖೆಯನ್ನು ಮುಂದುವರೆಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕೆಂಜಿಗೆ ಅರಣ್ಯ ಬೀಟ್‌ನಲ್ಲಿ ಎರಡು ತಿಂಗಳ ಹಿಂದೆ ಭಾರೀ ಗಾತ್ರದ ಗಂಡು ಹುಲಿಯನ್ನು ಬೇಟೆಯಾಡಲಾಗಿತ್ತು. ಕೊಪ್ಪ ತಾಲ್ಲೂಕಿನ ಗಡಿ ಭಾಗದಲ್ಲಿ ಬರುವ ಈ ಪ್ರದೇಶದಲ್ಲಿ ಹುಲಿ ಸಂಚಾರ ಅಧಿಕವಾಗಿದೆ ಎನ್ನುವ ಕಾರಣದಿಂದ ಆದನ್ನು ಹಿಮ್ಮೆಟ್ಟಿಸಲು ಪ್ರಯತ್ನಿಸಲಾಗಿತ್ತು. ಇದಾದ ನಂತರ ಹುಲಿ ಪದೇ ಪದೇ ಕಾಣಿಸಿಕೊಂಡಿದ್ದರಿಂದ ಹುಲಿಯನ್ನು ಕೊಲ್ಲುವ ನಿರ್ಧಾರವನ್ನು ಕೊಪ್ಪದ ದೀಕ್ಷೀತ್, ಕುಂಡ್ರೆ ಗ್ರಾಮದ ಸತೀಶ್ ಹಾಗೂ ಅರಣ್ಯ ಸಿಬ್ಬಂದಿ ಸುರೇಶ್ ನಿರ್ಧರಿಸಿದ್ದರು. ಹುಲಿಯನ್ನು ಕೊಂದು ಹಾಕಲು ಸುರೇಶ್ ಎಲ್ಲಾ ರೀತಿಯಲ್ಲಿ ಸಹಕಾರ ನೀಡಿದ್ದ. ಕೆಲವು ದಿನಗಳ ಹಿಂದೆ ಅರಣ್ಯ ಇಲಾಖೆಗೆ ದೊರೆತ ಮಾಹಿತಿ ಮೇರೆಗೆ ಚಿಕ್ಕಮಗಳೂರು ಉಪ ಅರಣ್ಯ ಸಂರಕ್ಷಣಾಧಿಕಾರಿ ರಮೇಶ್ ಬಾಬು ಅವರು ಎಸಿಎಫ್ ಡಿ.ರಘು ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿದ್ದರು. ಈ ವೇಳೆ ಅರಣ್ಯ ಇಲಾಖೆ ಸಿಬ್ಬಂದಿ ದೀಕ್ಷಿತ್ ಎಂಬಾತನನ್ನು ಬಂಧಿಸಿದ್ದರು.

ಘಟನೆಯಲ್ಲಿ ಹಲವರು ಭಾಗಿ

ಸ್ಪರ್ಧೆ ಮಾಡಲು ದಿಂಗಾಲೇಶ್ವರ ಸ್ವಾಮೀಜಿಗೆ ಪೇಮೆಂಟ್ ಬಂದಿದೆ: ಯತ್ನಾಳ್

• ಉದಯವಾಹಿನಿ ಹುಬ್ಬಳ್ಳಿ

ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿರುವ ಶ್ರೀ ದಿಂಗಾಲೇಶ್ವರ ಸ್ವಾಮೀಜಿಗೆ ಪೇಮೆಂಟ್ ಬಂದಿದೆ. ಹೀಗಾಗಿ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದಾರೆ. ಯಾರು ಪೇಮೆಂಟ್ ಮಾಡಿದ್ದಾರೆ ಎಂಬುದನ್ನು ಮೇ 7 ರ ನಂತರ ಬಹಿರಂಗಪಡಿಸುವೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ವಿಚಾರ ಬಂದಾಗ ಲಿಂಗಾಯತರು, ವೀರಶೈವ ಲಿಂಗಾಯತರು ಬಿಜೆಪಿ ಜೊತೆಗೆ ನಿಲ್ಲುತ್ತಾರೆ. ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆಯಿಂದ ನಮಗೆ, ನಮ್ಮ ಅಭ್ಯರ್ಥಿಗೆ ಯಾವುದೇ ಸಮಸ್ಯೆಯಿಲ್ಲ. ಹಿಂದೆ ಮಾತೆ ಮಹಾದೇವಿ ಕೂಡ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದರು, ಅವರ ಎಷ್ಟು ಮತಗಳನ್ನು ಪಡೆದರೆ ಎಂಬುದು ಎಲ್ಲರಿಗೂ ಗೊತ್ತಿದೆ.

ಉದಯವಾಹಿನಿ ಚಿತ್ರ

ದಿಂಗಾಲೇಶ್ವರ ಸ್ವಾಮೀಜಿ 5000 ಮತಗಳನ್ನು ಪಡೆಯುತ್ತಾರೆ. ಹಿಂದೆ ಮಾಜಿ ಸಚಿವ ವಿನಯ್ ಕುಲಕರ್ಣಿ ದಿಂಗಾಲೇಶ್ವರ ಸ್ವಾಮೀಜಿಯನ್ನ ತೆಗಳುತ್ತಿದ್ದರು. ಇದೀಗ ಒಳ್ಳೆಯ ಸ್ವಾಮೀಜಿ ಎಂದು ಹೇಳುತ್ತಿರುವುದನ್ನು ಗಮನಿಸಿದರೆ ಸ್ವಾಮೀಜಿಗೆ ಪೇಮೆಂಟ್ ಆಗಿದೆ ಎಂಬುದು ಖಚಿತ ಎಂದರು.

ರಾಜ್ಯದಲ್ಲಿ ಸೃಷ್ಟಿಯಾಗುತ್ತಿರುವ ತಾಲಿಬಾನ್ ಮಾದರಿಯ ಸಂಸ್ಕೃತಿಯನ್ನು ರಾಜ್ಯಪಾಲರು ಗಮನಿಸುತ್ತಿದ್ದಾರೆ. ಎಲ್ಲಾ ಘಟನಾವಳಿಗಳನ್ನು ಕ್ರೂಢೀಕರಿಸಿ ರಾಷ್ಟ್ರಪತಿಯವರಿಗೆ ವರದಿ ಸಲ್ಲಿಸಬೇಕು. ಈ ಕುರಿತು ರಾಜ್ಯಪಾಲರನ್ನು ಭೇಟಿಯಾಗಲು ನಾವು ಮಾತನಾಡುತ್ತಿದ್ದೇವೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಡಿಕೆ ಶಿವಕುಮಾರ್ ಮತದಾರರನ್ನು ಬೆದರಿಸುತ್ತಿದ್ದಾರೆ. ಇಂತಹ ವಿಚಾರಗಳನ್ನು ಚುನಾವಣಾ ಆಯೋಗ ಗಂಭೀರವಾಗಿ ತೆಗೆದುಕೊಳ್ಳಬೇಕು ಎಂದರು.

> **ಶಿವಮೊಗ್ಗದಲ್ಲಿ ಹಿರಿಯ ನಾಯರು**
> ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಪ್ರಚಾರಕ್ಕೆ ಹೋಗುವಷ್ಟು ದೊಡ್ಡ ವ್ಯಕ್ತಿ ನಾನಲ್ಲ. ಅಲ್ಲಿ ಮೂವರು ಹಿರಿಯ ನಾಯಕರಿದ್ದಾರೆ. ಅಷ್ಟೊಂದು ದೂರ ಕಾಲು ಚಾಚುವಂತ ವ್ಯಕ್ತಿ ನಾನಲ್ಲ ಎನ್ನುವ ಮೂಲಕ ಪುನಃ ಯಡಿಯೂರಪ್ಪ ಅವರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ನನ್ನ ಮಗಳು ಹೊಲಸು ಕೆಲಸ ಮಾಡಿಲ್ಲ: ನೇಹಾ ತಾಯಿ

• ಉದಯವಾಹಿನಿ ಹುಬ್ಬಳ್ಳಿ

ನನ್ನ ಮಗಳು ಹೊಲಸು ಕೆಲಸ ಮಾಡಿಲ್ಲ. ಆತನೇ ಅವಳ ಹಿಂದೆ ಬೆನ್ನು ಬಿದ್ದಿದ್ದ ಎಂದು ನೇಹಾಳ ತಾಯಿ ಗೀತಾ ಹಿರೇಮಠ ಹೇಳಿದರು.

ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರ ಕ್ಷಮೆ ಪಡೆದುಕೊಂಡು ಏನು ಮಾಡಲಿ. ನನ್ನ ಮಗಳು ವಾಪಸ್ಸು ಬರಲ್ಲವಲ್ಲ ಎಂದು ದುಃಖ ತೋಡಿಕೊಂಡರು.

ಮಗಳು ಕಾಲೇಜ್ ಹೋಗುತಿದ್ದಳು. ಬೋಲ್ಡ್ ಆಗಿದ್ದಳು. ನಮ್ಮ ಮಗಳು ಅಂಥವಳಲ್ಲ. ಆತ ಏನು ಮದುವೆ ಬಗ್ಗೆ ಮಾತನಾಡಿಲ್ಲ. ಒಂದೇ ಕಾಲೇಜ್ ನಲ್ಲಿ ಓದುತ್ತಿದ್ದರು.

ಈಗಿನ ತಂತ್ರಜ್ಞಾನದಲ್ಲಿ ತಮಗೆ ಹೇಗೆ ಬೇಕೋ ಹಾಗೆ ಫೊಟೋ ಎಡಿಟ್ ಮಾಡುತ್ತಾರೆ ಎಂದು ಆರೋಪಿಸಿದರು. ಅವಳ ಓದು ಚೆನ್ನಾಗಿ ನಡೆದಿತ್ತು. ನನ್ನ ಮಗಳಿಗೆ ಶಾಂತಿ ಸಿಗಬೇಕೆಂದರೆ ಆತ ಬದುಕಬಾರದು. ಅವನನ್ನು ಜನರ ಕೈಗೆ ಕೊಡಿ. ಜೈಲಿನಲ್ಲಿ ಇಟ್ಟರೆ ಏನು ಪ್ರಯೋಜನ ಎಂದರು.

ರಾಹುಲ್ ಗಾಂಧಿಗೆ ಈ ಬಾರಿ ಸೋಲು ಕಟ್ಟಿಟ್ಟ ಬುತ್ತಿ: ಮೋದಿ

● ರಾಹುಲ್ ಗಾಂಧಿಗೆ ಸೋಲಿನ ರುಚಿ ತೋರಿಸಲು ವಯನಾಡು ಜನ ಕಾತುರರಾಗಿದ್ದಾರೆ: ಪ್ರಧಾನಿ ಮೋದಿ ಭವಿಷ್ಯ

ಸೋಲಿನ ರುಚಿ ತೋರಿಸಲು ಕಾತುರ

ನಾಂದೇಡ್: ಕೇರಳದ ವಯನಾಡು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿರುವ ಕಾಂಗ್ರೇಸ್ ಅಭ್ಯರ್ಥಿ ರಾಹುಲ್ ಗಾಂಧಿಗೆ ಈ ಬಾರಿ ಸೋಲು ಕಟ್ಟಿಟ್ಟ ಬುತ್ತಿ ಎಂದು ಪ್ರಧಾನಿ ನರೇಂದ್ರಮೋದಿಯವರು ಭವಿಷ್ಯ ನುಡಿದಿದ್ದಾರೆ. ಕಾಂಗ್ರೇಸ್ ಯುವ ನಾಯಕ ಉತ್ತರಪ್ರದೇಶ ಬಿಟ್ಟು ಕೇರಳದ ವಯನಾಡಿನಿಂದ ಸ್ಪರ್ಧೆ ಮಾಡಿದ್ದಾರೆ. ಆದರೆ ಅವರಿಗೆ ನೆನಪಿರಲಿ ಅಲ್ಲಿನ ಮತದಾರರು ಸೋಲಿನ ರುಚಿ ತೋರಿಸಲು ಕಾತುರರಾಗಿದ್ದಾರೆ ಸೋಲು 100ಕ್ಕೆ ನೂರು ಖಚಿತ ಎಂದು ಹೇಳಿದರು.

ಮಹಾರಾಷ್ಟ್ರದ ನಾಂದೇಡ್ ಮತ್ತು ಹಿಂಗೋಲಿ ಕ್ಷೇತ್ರಗಳ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಿದ ಅವರು, ರಾಹುಲ್ ಗಾಂಧಿಯನ್ನು ಉಲ್ಲೇಖಿಸಿ, ಅಮೇತಿಯಲ್ಲಿ ಸೋತ ನಂತರ ಕಾಂಗ್ರೇಸ್‌ನ ಯುವ ನಾಯಕ ವಯನಾಡನ್ನೂ ಕಳೆದುಕೊಳ್ಳುತ್ತಾರೆ. ಆದ್ದರಿಂದ ಅವರು ಏ.26ರ ನಂತರ ಸುರಕ್ಷಿತ ಸ್ಥಾನವನ್ನು ಹುಡುಕಬೇಕಾಗಿದೆ ಎಂದು ಲೇವಡಿ ಮಾಡಿದರು. ಕಾಂಗ್ರೇಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರನ್ನು ಉಲ್ಲೇಖಿಸಿ, ಕೆಲವು ಇಂಡಿ ಮೈತ್ರಿಕೂಟದ ನಾಯಕರು ಚುನಾವಣೆಯಲ್ಲಿ ಸ್ಪರ್ಧಿಸಲು ಧೈರ್ಯವಿಲ್ಲದ ಕಾರಣ ಲೋಕಸಭೆಯನ್ನು ತೊರೆದು ರಾಜ್ಯಸಭೆಗೆ ತೆರಳಿದ್ದಾರೆ ಎಂದು ಹೆಸರು ಹೇಳದೆ ಕಿಡಿಕಾರಿದರು.

ಮೊದಲ ಬಾರಿಗೆ ಕುಟುಂಬಸ್ಥರು ತಾವು ಬೆಳೆದುಬಂದ ಕ್ಷೇತ್ರದಲ್ಲಿ ಕಾಂಗ್ರೇಸ್ ಅಭ್ಯರ್ಥಿಗೆ ಮತ ಹಾಕುವುದಿಲ್ಲ, ಏಕೆಂದರೆ ಅಲ್ಲಿ ಪಕ್ಷದ ಅಭ್ಯರ್ಥಿಯೇ ಇಲ್ಲ. ಕಾಂಗ್ರೇಸ್ ಆಡಳಿತದ ಕೆಟ್ಟ ಆಡಳಿತವನ್ನು ಸರಿಪಡಿಸಲು 10 ವರ್ಷಗಳನ್ನು ಕಳೆದಿದ್ದೇನೆ. ಸಾಕಷ್ಟು ಕೆಲಸ ಮಾಡಬೇಕಾಗಿದೆ ಎಂದು ಎಂದು ಹೇಳಿದರು.

ವಿರೋಧ ಪಕ್ಷದಿಂದ ಪಕ್ಷದ ಕಾರ್ಯಕರ್ತರ ನೈತಿಕತೆಯನ್ನು ಹೆಚ್ಚಿಸಲು ನಾನು ಬಯಸುತ್ತೇನೆ. ನೀವು (ವಿಪಕ್ಷ ನಾಯಕರು) ಚುನಾವಣೆಯಲ್ಲಿ ಸೋಲುವುದು ಖಚಿತ, ಆದರೆ ನಿಮಗೆ ಕೆಲ ವು ಅವಕಾಶಗಳು ಸಿಗುತ್ತವೆ. ಆದರೆ ನೀವು ಮತದಾರರಿಗೆ ಮತ ಹಾಕುವಂತೆ ಮನವಿ ಮಾಡಬೇಕು ಎಂದರು. 25ರಷ್ಟು ಸೀಟುಗಳಲ್ಲಿ ಇಂಡಿ ಕೂಟ ಪರಸ್ಪರರ ವಿರುದ್ಧ ಚುನಾವಣೆಯಲ್ಲಿ ಸ್ಪರ್ಧಿಸುತ್ತಿವೆ. ಜೂನ್ 4ರಂದು ನಂತರ ಅವರು ಪರಸ್ಪರ ಹೆಚ್ಚು ಜಗಳವಾ ಡುತ್ತಾರೆ. ಪೌರತ್ವ (ತಿದ್ದುಪಡಿ) ಕಾಯಿದೆ ಇಲ್ಲದಿದ್ದರೆ, ಅಫ್ಘಾನಿಸ್ತಾನದಿಂದ ಬಂದ ಸಿಖ್ಖರಿಗೆ ಏನಾಗುತ್ತಿತ್ತು ಎಂದು ಪ್ರಶ್ನೆ ಮಾಡಿದರು.

> ರೈತರು, ಬಡವರ ಅಭಿವೃದ್ಧಿಗೆ ಕಾಂಗ್ರೇಸ್ ಅಡ್ಡಿಯಾಗಿದೆ. ಕೃಷಿ ಬಿಕ್ಕಟ್ಟು ಈಗ ಸಂಭವಿಸಿಲ್ಲ, ಇದು ಕಾಂಗ್ರೇಸ್‌ನ ದೋಷಪೂರಿತ ನೀತಿಗಳಿಂದಾಗಿ ಸಂಭವಿಸಿದೆ ಎಂದು ಟೀಕಿಸಿದರು. ಇಂಡಿ ಮೈತ್ರಿಕೂಟವನ್ನು ಗುರಿಯಾಗಿಸಿಕೊಂಡು ವಾಗ್ದಾಳಿನಡೆಸಿದ ಮೋದಿ, ಯೋಜನೆಗಳಿಗೆ ಯಾವುದೇ ಮುಖವಿಲ್ಲ ಮತ್ತು ದೇಶದ ಭವಿಷ್ಯವನ್ನು ಯಾರಿಗೆ ಒಪ್ಪಿಸಬೇಕೆಂದು ಜನರಿಗೆ ತಿಳಿದಿಲ್ಲ. ಅವರು ಏನು ಬೇಕಾದರೂ ಹೇಳಿಕೊಳ್ಳಬಹುದು, ಆದರೆ ವಾಸ್ತವವೆಂದರೆ ಚುನಾವಣೆ ಘೋಷಣೆಗೂ ಮುನ್ನವೇ ಕಾಂಗ್ರೇಸ್ ನಾಯಕರು ಸೋಲನ್ನು ಒಪ್ಪಿಕೊಂಡಿದ್ದಾರೆ
> -ನರೇಂದ್ರ ಮೋದಿ, ಪ್ರಧಾನಿ

ದೇಶದ ಭವಿಷ್ಯ ಭದ್ರ

ತಮ್ಮ ಭ್ರಷ್ಟಾಚಾರಗಳನ್ನು ರಕ್ಷಿಸಲು ಒಗ್ಗೂಡಿರುವ ಸ್ವಾರ್ಥಿಗಳ ಗುಂಪು ವಿರೋಧ ಪಕ್ಷದ ಮೈತ್ರಿಕೂಟ ಎಂದು ಟೀಕಾ ಪ್ರಹಾರ ನಡೆಸಿದರು. ಲೋಕಸಭೆ ಚುನಾವಣೆಯಲ್ಲಿ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಲು ಆಗಮಿಸಬೇಕು. ನೀವು ಮತ ಚಲಾಯಿಸುವ ಮೂಲಕ ಯಾವುದೇ ಪ್ರಯೋಜನವನ್ನು ಮಾಡುತ್ತಿಲ್ಲ, ನೀವು ದೇಶದ ಭವಿಷ್ಯವನ್ನು ಭದ್ರಪಡಿಸುತ್ತಿದ್ದೀರಿ.

ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಸಂವಿಧಾನ ಬದಲಿಸಲು ಕೈಯತ್ನ

ಪಾಟ್ನಾ: ದೇಶದಲ್ಲಿ ಕಾಂಗ್ರೇಸ್ ತುರ್ತುಪರಿಸ್ಥಿತಿಯನ್ನು ಹೇರಿದಾಗ ಮತ್ತು ಅದನ್ನು ಬದಲಾಯಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಿದಾಗ ಸಂವಿಧಾನವು ಅಪಾಯದಲ್ಲಿತ್ತು ಎಂದು ಭಾರತೀಯ ಜನತಾ ಪಕ್ಷದ ನಾಯಕ ರವಿಶಂಕರ್ ಪ್ರಸಾದ್ ಹೇಳಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) 400 ಕ್ಕೂ ಹೆಚ್ಚು ಸ್ಥಾನಗಳನ್ನು ಗಳಿಸುವ ಸೂಚನೆಗಳಿವೆ ಎಂದು ಅವರು ಹೇಳಿದರು. 21 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 102 ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ಶುಕ್ರವಾರ ನಡೆಯಿತು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಾವು 400 ಪಾರು ಎಂದು ಮಾತನಾಡುತ್ತೇವೆ ಮತ್ತು ಈಗ ಅಂಕಿಅಂಶವು ಇನ್ನೂ ಹೆಚ್ಚಿನದಕ್ಕೆ ಹೋಗುವ ಸೂಚನೆಗಳಿವೆ. ಪ್ರತಿಪಕ್ಷಗಳು ಸೋಲಿನ ಹತಾಶೆಯ ಲಕ್ಷಣಗಳನ್ನು ತೋರಿಸುತ್ತಿವೆ, ಅವರು ಒಂದೇ ಒಂದು ಮಾತನ್ನು ಹೇಳುತ್ತಾರೆ. ಸಂವಿಧಾನ ಬದಲಾವಣೆಗೆ ಕಾಂಗ್ರೇಸ್ ಪಕ್ಷ ಎಲ್ಲಾ ಪ್ರಯತ್ನಗಳನ್ನು ಮಾಡಿದೆ, ಎಡಪಂಥೀಯ ಪಕ್ಷಗಳು ಅವರೊಂದಿಗೆ ಇದ್ದವು; ಇಂದು, ಲಾಲು ಯಾದವ್ ಅವರೊಂದಿಗಿದ್ದಾರೆ ಸಂವಿಧಾನಕ್ಕೆ ಅಪಾಯ ಎದುರಾಗಿರುವುದು ಪ್ರಧಾನಿ ನರೇಂದ್ರ ಮೋದಿ ಅಥವಾ ಬಿಜೆಪಿಯಿಂದಲ್ಲ ಎಂದಿದ್ದಾರೆ. 2019 ರ ಲೋಕಸಭಾ ಚುನಾವಣೆಯಲ್ಲಿ, ಬಿಜೆಪಿ, ಜೆಡಿ (ಯು), ಮತ್ತು ಎಲ್‌ಜೆಪಿ (ಲೋಕ ಜನಶಕ್ತಿ ಪಕ್ಷ) ಗಳಿಂದ ಕೂಡಿದ ಎನ್‌ಡಿಎ 40 ರಲ್ಲಿ 39 ಸ್ಥಾನ ಗಳನ್ನು ಗೆಲ್ಲುವ ಮೂಲಕ ಗೆಲುವು ಸಾಧಿಸಿತು.



ಇದು ಅವರ ಇತಿಹಾಸ

ಸಂವಿಧಾನವನ್ನು ಬದಲಾಯಿಸುವ ಬಗ್ಗೆ ಮಾತನಾಡುವವರು ಯಾರು? ಪ್ರಧಾನಿ ಮತ್ತು ನಾವೆಲ್ಲರೂ ಈ ರೀತಿ ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದೇವೆ. ಕಾಂಗ್ರೇಸ್ ತುರ್ತು ಪರಿಸ್ಥಿತಿ ಹೇರಿದಾಗ ಸಂವಿಧಾನ ಅಪಾಯದಲ್ಲಿತ್ತು ಎಂದು ಅವರು ಹೇಳಿದರು. ಇನ್ನು ಕಾಂಗ್ರೇಸ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಇಡೀ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸಂವಿಧಾನ ಬದಲಿಸುವ ಪ್ರಯತ್ನ ನಡೆದಿತ್ತು.

ಬಿಜೆಪಿಯ 400 ಪಾರ್ ಸಿನಿಮಾ ಪ್ಲಾಪ್ ಆಗಿದೆ

ಪಾಟ್ನಾ: ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನದ ನಂತರ ಬಿಜೆಪಿಯ 400 ಪಾರ್ ಚಿತ್ರವು ಮೊದಲ ದಿನವೇ ಸೂಪರ್ ಪ್ಲಾಪ್ ಆಗಿದೆ ಎಂದು ರಾಷ್ಟ್ರೀಯ ಜನತಾ ದಳ ನಾಯಕ ತೇಜಸ್ವಿ ಯಾದವ್ ಹೇಳಿದ್ದಾರೆ. ಮಹಾಘಟಬಂಧನ್ ಮೊದಲ ಹಂತದಲ್ಲಿ ಎಲ್ಲಾ ನಾಲ್ಕು ಸ್ಥಾನಗಳನ್ನು ಗೆಲ್ಲುತ್ತಿದೆ. ನಾವು ಬ್ಲಾಕ್‌ವಾರು ಸಭೆಗಳನ್ನು ನಡೆಸಿದ್ದೇವೆ ಮತ್ತು ಪ್ರತಿಕ್ರಿಯೆ ತುಂಬಾ ಚೆನ್ನಾಗಿದೆ.

ಬಿಜೆಪಿಯ 400 ಪಾರ್ ಚಿತ್ರವು ಮೊದಲ ದಿನವೇ ಸೂಪರ್ ಪ್ಲಾಪ್ ಆಗಿದೆ. ಬಿಹಾರದ ಜನರು ಜಾಗೃತರಾಗಿದ್ದು ಅವರಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದಿದ್ದಾರೆ. ಬಿಹಾರ ಈ ಬಾರಿ ಆಘಾತಕಾರಿ ಫಲಿತಾಂಶಗಳನ್ನು ನೀಡುವುದರಿಂದ ಮೊದಲ ಹಂತದಲ್ಲಿ ಯಾವುದೇ ಸ್ಪರ್ಧೆಯಿಲ್ಲ ಎಂದು ಯಾದವ್ ಸುದ್ದಿಸಂಸ್ಥೆಗೆ ತಿಳಿಸಿದರು. ಮೊದಲ ಹಂತದಲ್ಲಿ ಯಾವುದೇ ಪೈಪೋಟಿ ಇಲ್ಲ. ಬಿಹಾರ ಈ ಬಾರಿ ಆಘಾತಕಾರಿ ಫಲಿತಾಂಶ ನೀಡಲಿದೆ ಎಂದು ನಾವು ಮೊದಲೇ ಸಾಕಷ್ಟು ಬಾರಿ ಹೇಳಿದ್ದೆವು. ಅವರು ಬಿಹಾರದ ಜನರಿಗೆ ಏನನ್ನೂ ಮಾಡಿಲ್ಲ. 2014 ಮತ್ತು 2019 ರಲ್ಲಿ ಮೋದಿ ಜಿ ನೀಡಿದ ಭರವಸೆಗಳನ್ನು ಈಡೇರಿಸಲಿಲ್ಲ. ಈಗ ಅವರ ಹೇಳಿಕೆಗಳು ಮತ್ತು ಸುಳ್ಳು ಭರವಸೆಗಳಿಂದ ಸಾರ್ವಜನಿಕರು ಬೇಸತ್ತಿದ್ದಾರೆ, ನಾವು ಬಿಹಾರಕ್ಕೆ ವಿಶೇಷ ಸ್ಥಾನಮಾನದ ಜೊತೆಗೆ ವಿಶೇಷ ಪ್ಯಾಕೇಜ್ ನೀಡುತ್ತೇವೆ ಎಂದು ಭರವಸೆ ನೀಡಿದ್ದೇವೆ. ಇಡೀ ಮಹಾಘಟಬಂಧನ್, ಇಂಡಿ ಬಣ ಒಟ್ಟಾಗಿ ಕೆಲಸ ಮಾಡುತ್ತಿವೆ. ಹಣದುಬ್ಬರ, ಬಡತನ ಮತ್ತು ಹೂಡಿಕೆಯ ಜೊತೆಗೆ ಬಿಹಾರದಲ್ಲಿ ನಿರುದ್ಯೋಗವು ದೊಡ್ಡ ಸಮಸ್ಯೆ ಯಾಗಿದೆ. ವಲಸೆ ಮತ್ತು ಪ್ರವಾಹಗಳು ಸಹ ಸಮಸ್ಯೆ ಗಳಾಗಿವೆ.

ಈ ಬಾರಿ ಬಿಜೆಪಿ ತುಂಬಾ ಚಿಂತಿತವಾಗಿದೆ. ಅವರು ಸಂವಿಧಾನವನ್ನು ರದ್ದುಗೊಳಿಸುವುದಾಗಿ ಅವರು ಹೇಳುತ್ತಾರೆ. ಯಾರು ಸಂವಿಧಾನವನ್ನು ನಾಶಪಡಿಸುತ್ತಾರೋ ಅವರೇ ನಾಶವಾಗುತ್ತಾರೆ ಎಂದು ಯಾದವ್ ಹೇಳಿದ್ದಾರೆ.

ಮತದಾನದ ಅವಕಾಶ ಕಳೆದುಕೊಳ್ಳಬೇಡಿ

ನವದೆಹಲಿ: ಸಂವಿಧಾನಾತ್ಮಕ ಪ್ರಜಾಪ್ರಭುತ್ವದಲ್ಲಿ ಇದು ಅತ್ಯಂತ ಪ್ರಮುಖ ಕರ್ತವ್ಯವಾಗಿದೆ ಎಂದು ಹೇಳುವ ಮೂಲಕ ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಮಾಡುವ ಅವಕಾಶವನ್ನು ಕಳೆದುಕೊಳ್ಳಬೇಡಿ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಕರೆ ನೀಡಿದ್ದಾರೆ. 2024ರ ಲೋಕಸಭೆ ಚುನಾವಣೆಗೆ ಚುನಾವಣಾ ಆಯೋಗದ ಮೈ ವೋಟ್ ಮೈ ವಾಯ್ಸ್ ಮಿಷನ್‌ಗಾಗಿ ವೀಡಿಯೊ ಸಂದೇಶದಲ್ಲಿ ನ್ಯಾಯಮೂರ್ತಿ ಚಂದ್ರಚೂಡ್ ಅವರು, ನಾವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವದ ಪ್ರಜೆಗಳು, ಅದು ನಮ್ಮ ದೇಶ ಎಂದು ಹೇಳಿಕೊಂಡಿದ್ದಾರೆ.

ಸಂವಿಧಾನವು ನಮಗೆ ನಾಗರಿಕರಾಗಿ ಬಹುಸಂಖ್ಯೆಯ ಹಕ್ಕುಗಳನ್ನು ನೀಡುತ್ತದೆ ಆದರೆ ನಾವು ಪ್ರತಿಯೊಬ್ಬರೂ ನಮ್ಮ ಮೇಲೆ ಹೊರಿಸಲಾದ ಕರ್ತವ್ಯವನ್ನು ನಿರ್ವಹಿಸುತ್ತೇವೆ ಎಂದು ಅದು ನಿರೀಕ್ಷಿಸುತ್ತದೆ. ಮತ್ತು ಸಾಂವಿಧಾನಿಕ ಪ್ರಜಾಪ್ರಭುತ್ವದಲ್ಲಿ ಮತ ಚಲಾಯಿಸುವುದು ಪೌರತ್ವದ ಪ್ರಮುಖ ಕರ್ತವ್ಯಗಳಲ್ಲಿ ಒಂದಾಗಿದೆ ಎಂದು ಅವರು ಹೇಳಿದರು. ನಾನು ನಿಮ್ಮಲ್ಲಿ ಪ್ರತಿಯೊಬ್ಬರನ್ನು ವಿನಂತಿಸುತ್ತೇನೆ, ದಯವಿಟ್ಟು ನಮ್ಮ ಮಹಾನ್ ತಾಯ್ನಾಡಿನ ಪ್ರಜೆಗಳಾಗಿ ಜವಾಬ್ದಾರಿಯುತವಾಗಿ ಮತದಾನ ಮಾಡಲು ಈ ಅವಕಾಶವನ್ನು ಕಳೆದುಕೊಳ್ಳಬೇಡಿ. ಐದು ನಿಮಿಷಗಳು, ಪ್ರತಿ ಐದು ವರ್ಷಗಳಿಗೊಮ್ಮೆ ನಮ್ಮ ದೇಶಕ್ಕಾಗಿ. ಇದು ಸಾಧ್ಯ, ಅಲ್ಲವೇ ಹೆಮ್ಮೆಯಿಂದ ಮತ ಚಲಾಯಿಸೋಣ. ನಾನು ಮತ ಚಲಾಯಿಸುವಾಗ ಬೆರಳಿನ ಶಾಯಿಯು ದೇಶಭಕ್ತಿಯ ಪ್ರಚಂಡ ಭಾವನೆಗಳನ್ನು ಮತ್ತು ರಾಷ್ಟ್ರದೊಂದಿಗಿನ ಒಡನಾಟವನ್ನು ನೀಡುತ್ತದೆ ಎಂದು ಅವರು ಹೇಳಿದರು. ಆದ್ದರಿಂದ ನಮ್ಮ ಸಂವಿಧಾನ ಮತ್ತು ನಮ್ಮ ಕಾನೂನು ಒಬ್ಬ ನಾಗರಿಕ, ಒಂದು ಮತ ಮತ್ತು ಒಂದು ಮೌಲ್ಯವನ್ನು ಒದಗಿಸುತ್ತದೆ. ಇದು ಸಾಂವಿಧಾನಿಕ ಪ್ರಜಾಪ್ರಭುತ್ವವಾಗಿ ನಮ್ಮ ರಾಷ್ಟ್ರದ ದೊಡ್ಡ ದೃಢತೆ ಮತ್ತು ಶಕ್ತಿ ಎಂದು ನಾನು ಭಾವಿಸುತ್ತೇನೆ ಎಂದು ಅವರು ಹೇಳಿದರು.

ಕೈಬಿಟ್ಟು ಬಿಜೆಪಿ ಸೇರಿದ ತಜೇಂದರ್ ಸಿಂಗ್ ಬಿಟ್ಟು

ನವದೆಹಲಿ: ಕಾಂಗ್ರೇಸ್ ಯುವ ನಾಯಕಿ ಪ್ರಿಯಾಂಕಾ ಗಾಂಧಿ ಅವರ ಆಪ್ತರಾಗಿದ್ದ ತಜೇಂದರ್ ಸಿಂಗ್ ಬಿಟ್ಟು ಅವರು ಕಾಂಗ್ರೇಸ್‌ಗೆ ರಾಜೀನಾಮೆ ನೀಡಿದ ಕೆಲವೇ ಗಂಟೆಗಳಲ್ಲಿ ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ. ಲೋಕಸಭೆ ಚುನಾವಣೆಯ ಸಂದರ್ಭದಲ್ಲೇ ಪಕ್ಷದ ಹಿರಿಯ ನಾಯಕರ ನಿರ್ಗಮನದಿಂದ ಕಾಂಗ್ರೇಸ್‌ಗೆ ಮತ್ತೊಂದು ಹಿನ್ನಡೆ ಉಂಟಾಗಿದೆ. ಹಿಮಾಚಲಪ್ರದೇಶದ ಕಾಂಗ್ರೇಸ್ ಉಸ್ತುವಾರಿ ಕಾರ್ಯದರ್ಶಿಯಾಗಿದ್ದ ತೇಜೇಂದರ್ ಸಿಂಗ್‌ಬಿಟ್ಟು, ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ವಿನೋದ್ ತಾವ್ಡೆ ಅವರ ಸಮ್ಮುಖದಲ್ಲಿ ಬಿಜೆಪಿ ಸೇರಿದ್ದಾರೆ.

ಮಾರ್ಚ್‌ನಲ್ಲಿ ಕಾಂಗ್ರೇಸ್ ವಕ್ತಾರ ರೋಹನ್ ಗುಪ್ತಾ ಪಕ್ಷಕ್ಕೆ ರಾಜೀನಾಮೆ ನೀಡಿದ್ದರು. ಪಕ್ಷದ ಕೆಲವು ನಾಯಕರಿಂದ ಕಿರುಕುಳ ಮತ್ತು ಚಾರಿತ್ರ್ಯ ವಧೆಯಾಗುತ್ತಿದೆ ಎಂದು ಕಾರಣ ನೀಡಿದ್ದರು. ಅಹಮದಾಬಾದ್ ಪೂರ್ವ ಕ್ಷೇತ್ರದಿಂದ ಪಕ್ಷದ ಅಭ್ಯರ್ಥಿಯಾಗಿ ರೋಹನ್ ಗುಪ್ತಾ ಅವರನ್ನು ಹೆಸರಿಸಲಾಯಿತು. ಆದರೆ ಅವರು ಕಣದಿಂದ ಹೊರಗುಳಿದಿದ್ದಾರೆ. ಈ ಹಿಂದೆ, ವಕ್ತಾರ ಗೌರವ್ ವಲ್ಲಭ್, ಒಲಿಂಪಿಕ್ ಪದಕ ವಿಜೇತ ಮತ್ತು ಬಾಕ್ಸರ್ ವಿಜೇಂದರ್ ಸಿಂಗ್ ಕಾಂಗ್ರೇಸ್ ತೊರೆದಿದ್ದರು. ಮುಂಬೈನ ಹಿರಿಯ ನಾಯಕ ಸಂಜಯ್ ನಿರುಪಮ್ ಅವರನ್ನು ಪಕ್ಷ ವಿರೋಧಿ ಚಟುವಟಿಕೆಗಳಿಗಾಗಿ ಉಚ್ಚಾಟಿಸಲಾಗಿದೆ ಎಂದು ಕಾಂಗ್ರೇಸ್ ಹೇಳಿಕೊಂಡಿದ್ದರೂ ಸಹ ರಾಜೀನಾಮೆ ನೀಡಿದ್ದರು.

ರಾಜೀನಾಮೆ ಪತ್ರ

ಕಾಂಗ್ರೇಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬರೆದ ಪತ್ರದಲ್ಲಿ, ನಾನು ಭಾರತೀಯ ರಾಷ್ಟ್ರೀಯ ಕಾಂಗ್ರೇಸ್‌ನ ಪ್ರಾಥಮಿಕ ಸದಸ್ಯತ್ವಕ್ಕೆ, ಎಐಸಿಸಿ, ಹಿಮಾಚಲ ಪ್ರದೇಶದ ಸಹ-ಪ್ರಭಾರಿ ಕಾರ್ಯದರ್ಶಿ ಹುದ್ದೆಗೆ ತಕ್ಷಣದಿಂದಲೇ ಜಾರಿಗೆ ಬರುವಂತೆ ರಾಜೀನಾಮೆ ನೀಡುತ್ತೇನೆ ಎಂದು ತಿಳಿಸಿದ್ದಾರೆ. ಭಾರವಾದ ಹೃದಯದಿಂದ, 35 ವರ್ಷಗಳ ನಂತರ ನಾನು ಕಾಂಗ್ರೇಸ್ ಪಕ್ಷಕ್ಕೆ ರಾಜೀನಾಮೆ ನೀಡುತ್ತೇನೆ ಎಂಬ ಶೀರ್ಷಿಕೆಯೊಂದಿಗೆ ತೇಜೆಂದರ್ ತನ್ನ ರಾಜೀನಾಮೆ ಪತ್ರವನ್ನು ಫೇಸ್‌ಬುಕ್ ಪೋಸ್ಟ್ ನಲ್ಲಿ ಹಂಚಿಕೊಂಡಿದ್ದಾರೆ.

ಪಾಕ್ ಹಸಿವಿನಿಂದ ನರಳುತ್ತಿದ್ದರೆ, ಭಾರತದಲ್ಲಿ 80 ಕೋಟಿ ಜನ ಉಚಿತ ಪಡಿತರ ಪಡೆಯುತ್ತಿದ್ದಾರೆ ; ಯೋಗಿ

ಅಮ್ರೋಹಾ: ನೆರೆಯ ಪಾಕಿಸ್ತಾನದಲ್ಲಿ ಜನ ಹಸಿ ವಿನಿಂದ ಕಂಗಲಾಗಿದ್ದರೆ ನಮ್ಮ ದೇಶದಲ್ಲಿ 80 ಕೋಟಿ ಜನ ಉಚಿತ ಪಡಿತರ ಪಡೆಯುತ್ತಿದ್ದಾರೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದರು. ಪಶ್ಚಿಮ ಉತ್ತರ ಪ್ರದೇಶದ ಅಮ್ರೋಹಾದಲ್ಲಿ ಚುನಾವಣಾ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಸರಿ ಪಕ್ಷದ ಫಿರ್ ಏಕ್ ಬಾರ್ ಮೋದಿ ಸರ್ಕಾರ್ ಘೋಷಣೆಯು ದೇಶಾದ್ಯಂತ ಪ್ರತಿಧ್ವನಿಸುತ್ತಿದೆ ಎಂದು ಹೇಳಿದರು. ನಡೆಯುತ್ತಿರುವ ಲೋಕಸಭೆ ಚುನಾವಣೆಯಲ್ಲಿ ಅಮ್ರೋಹಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕನ್ವರ್ ಸಿಂಗ್ ತನ್ವಾರ್ ಅವರನ್ನು ಬೆಂಬಲಿಸಿ ಆಯೋಜಿಸಿದ್ದ ರ್ಯಾಲಿಯಲ್ಲಿ ಆದಿತ್ಯನಾಥ್ ಅವರು ಪ್ರಧಾನಿ ನರೇಂದ್ರ ಮೋದಿಯವರ ಮುಂದೆ ಮಾತನಾಡಿದರು. 23 ರಿಂದ 24 ಕೋಟಿ ಜನ ಸಂಖ್ಯೆಯನ್ನು ಹೊಂದಿರುವ ಪಾಕಿಸ್ತಾನವು 1947 ರ ವಿಭಜನೆಯ ನಂತರ ರೂಪುಗೊಂಡಿತು ಮತ್ತು ಇಂದು ಹಸಿವಿನಿಂದ ನರಳುತ್ತಿದೆ, ಇದು ಒಂದು ಉದಾಹರಣೆಯಾಗಿದೆ ಒಂದು ಕಡೆ, ಪಾಕಿಸ್ತಾನವಿದೆ, ಇನ್ನೊಂದು ಕಡೆ, 80 ಕೋಟಿಗೂ ಹೆಚ್ಚು ಜನರಿಗೆ ಉಚಿತ ಪಡಿತರ ಭರವಸೆಯಾಗಿದೆ ಎಂದು ಅವರು ಹೇಳಿದರು. ಬಿಜೆಪಿ ತನ್ನ ಲೋಕಸಭಾ ಚುನಾವಣಾ ಪ್ರಣಾಳಿಕೆಯಲ್ಲಿ ಮುಂದಿನ ಐದು ವರ್ಷಗಳವರೆಗೆ ದೇಶದ 80 ಕೋಟಿಗೂ ಹೆಚ್ಚು ಜನರಿಗೆ ಉಚಿತ ಪಡಿತರ ನೀಡುವುದನ್ನು ಮುಂದುವರಿಸುವುದಾಗಿ ಭರವಸೆ ನೀಡಿದೆ ಎಂದರು.

ಇಂಡೊನೇಷ್ಯಾದಲ್ಲಿ ಜ್ವಾಲಾಮುಖಿ: 2,100 ಮಂದಿ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ

ಮನಾಡೊ: ಇಂಡೊನೇಷ್ಯಾದ ಸುಲವೆಸಿ ದ್ವೀಪ ಪ್ರದೇಶದಲ್ಲಿ 'ಮೌಂಟ್ ರಾಂಗ್' ಜ್ವಾಲಾಮುಖಿಯ ಕಾರಣದಿಂದಾಗಿ ಈ ಪ್ರದೇಶದಲ್ಲಿದ್ದ 2,100ಕ್ಕೂ ಹೆಚ್ಚು ಮಂದಿಯನ್ನು ಶುಕ



ಹೈದರಾಬಾದ್ ಎದುರು ತಲೆಬಾಗಿದ ಡೆಲ್ಲಿ

■ ಬೃಹತ್ ಮೊತ್ತದ ಪಂದ್ಯದಲ್ಲಿ ಡೆಲ್ಲಿ ವಿರುದ್ಧ ಭರ್ಜರಿ ಗೆಲುವು ಸಾಧಿಸಿದ ಹೈದರಾಬಾದ್

ಎಡಗೈ ಬ್ಯಾಟರ್‌ಗಳಾದ ಟ್ರಾವಿಸ್ ಹೆಡ್(89), ಅಭಿಷೇಕ್ ಶರ್ಮ(46) ಮತ್ತು ಶಾಬಾಜ್ ಅಹ್ಮದ್(59) ಅವರ ಬಿರುಸಿನ ಬ್ಯಾಟಿಂಗ್ ನೆರವಿನಿಂದ ಸನ್‌ರೈಸರ್ಸ್ ಹೈದರಾಬಾದ್ ತಂಡವು ಶನಿವಾರದ ಐಪಿಎಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು 67 ರನ್‌ಗಳಿಂದ ಸೋಲಿಸಿತು. ಇದು ಹೈದರಾಬಾದ್‌ಗೆ ಒಲಿದ 5ನೇ ಗೆಲುವು. ಅರುಣ್ ಜೇಟ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್‌ಗೆ ಇಳಿಸಲ್ಪಟ್ಟ ಹೈದರಾಬಾದ್ ತಂಡಕ್ಕೆ ಆರಂಭಿಕರಾದ ಟ್ರಾವಿಸ್ ಹೆಡ್(89) ಮತ್ತು ಅಭಿಷೇಕ್ ಶರ್ಮ(46) ಜಿದ್ದಿಗೆ ಬಿದ್ದವರಂತೆ ಬ್ಯಾಟ್ ಬೀಸಿ ಅಮೋಘ ಆರಂಭ ಒದಗಿಸಿದರು. ಇವರ ಈ ಬ್ಯಾಟಿಂಗ್ ಪರಾಕ್ರಮದಿಂದ ತಂಡ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್‌ಗೆ 266 ರನ್ ಬಾರಿಸಿತು. ಸವಾಲಿನ ಮೊತ್ತವನ್ನು ದಿಟ್ಟ ರೀತಿಯಲ್ಲಿ ಬೆನ್ನಟ್ಟಿಕೊಂಡು ಹೋದ ಡೆಲ್ಲಿ ಕ್ಯಾಪಿಟಲ್ಸ್ ಅಂತಿಮವಾಗಿ 19.1 ಓವರ್‌ಗಳಲ್ಲಿ 199 ರನ್‌ಗೆ ಸರ್ವಪತನ ಕಂಡಿತು. ಗೆಲುವು ಕಂಡ ಹೈದರಾಬಾದ್ 10 ಅಂಕದೊಂದಿಗೆ ಅಂಕಪಟ್ಟಿಯಲ್ಲಿ 2ನೇ ಸ್ಥಾನಕ್ಕೇರಿತು.

ಮ್ಯಾಕ್‌ಗುರ್ಕ್ ಅರ್ಧಶತಕದ ಮಿಂಚು : ಡೆಲ್ಲಿ ತಂಡದ ಆರಂಭ ಅಷ್ಟು ಉತ್ತಮವಾಗಿರಲಿಲ್ಲ. ಪೃಥ್ವಿ ಶಾ ಮೊದಲ ಓವರ್‌ನಲ್ಲಿ ಸತತ 4 ಬೌಂಡರಿ ಬಾರಿಸಿದರು. ಇದೇ ಆಟವನ್ನು ಮುಂದುವರಿಸುವಲ್ಲಿ ವಿಫಲರಾದರು. 4 ಬೌಂಡರಿಗೆ ಸೀಮಿತರಾಗಿ ವಿಕೆಟ್ ಕಳೆದುಕೊಂಡರು. ಇದರ ಬೆನ್ನಲೇ ಡೇವಿಡ್ ವಾರ್ನರ್(1) ಕೂಡ ವಿಕೆಟ್ ಕಳೆದುಕೊಂಡರು. ಸಂಕಷ್ಟದಲ್ಲಿದ್ದ ಡೆಲ್ಲಿಗೆ ಜೇಕ್ ಫ್ರೇಸರ್-ಮ್ಯಾಕ್‌ಗುರ್ಕ್ ಮತ್ತು ಅಭಿಷೇಕ್ ಪೋರೆಲ್ ಆಕ್ರಮಣಕಾರಿ ಬ್ಯಾಟಿಂಗ್ ನಡೆಸಿ ಆಸರೆಯಾದರು. ಉಭಯ ಆಟಗಾರರ ಈ ಬ್ಯಾಟಿಂಗ್ ಅರ್ಭಟದಿಂದ ಡೆಲ್ಲಿ ಕೂಡ ಹೈದರಾಬಾದ್ ತಂಡದಂತೆ 7 ಓವರ್‌ಗೂ ಮುನ್ನ 100 ರನ್‌ಗಳ ಗಡಿ ದಾಟಿತು. ಜಿದ್ದಿಗೆ ಬಿದ್ದವರಂತೆ ಬ್ಯಾಟ್ ಬೀಸುತ್ತಿದ್ದ ಈ ಜೋಡಿಯನ್ನು ಮಯಾಂಕ್ ಮಾರ್ಕಂಡೆ ಬೇರ್ಪಡಿಸಿದರು. ಸತತ ಸಿಕ್ಸರ್ ಚಚ್ಚಿಕೊಂಡಿದ್ದ ಮಾರ್ಕಂಡೆ ಕೊನೆಗೂ ಮ್ಯಾಕ್‌ಗುರ್ಕ್ ವಿಕೆಟ್ ಕಿತ್ತು ತಂಡಕ್ಕೆ ಮುನ್ನಡೆ ತಂದುಕೊಟ್ಟರು. ಮ್ಯಾಕ್‌ಗುರ್ಕ್ ಕೇವಲ 15 ಎಸೆತಗಳಿಂದ ಅರ್ಧಶತಕ ಬಾರಿಸುವ ಮೂಲಕ ಈ ಬಾರಿಯ ಐಪಿಎಲ್‌ನಲ್ಲಿ ಅತಿ ವೇಗವಾಗಿ ಅರ್ಧಶತಕ ಬಾರಿಸಿದ ದಾಖಲೆ ಬರೆದರು. ಎಬಿಡಿ ವಿಲಿಯರ್ಸ್ ರೀತಿ ಬ್ಯಾಟಿಂಗ್ ನಡೆಸಿದ ಮ್ಯಾಕ್‌ಗುರ್ಕ್ ಒಟ್ಟು 18 ಎಸೆತಗಳಿಂದ 65 ರನ್ ಚಚ್ಚಿದರು. ಈ ವೇಳೆ 7 ಸೊಗಸಾದ ಸಿಕ್ಸರ್ ಮತ್ತು 5 ಆಕರ್ಷಕ ಬೌಂಡರಿ ದಾಖಲಾಯಿತು. ಈ ವಿಕೆಟ್ ಬಿದ್ದು 26 ರನ್ ಒಟ್ಟುಗೂಡುವಷ್ಟರಲ್ಲಿ ಉತ್ತಮವಾಗಿ ಆಡುತ್ತಿದ್ದ ಅಭಿಷೇಕ್ ವಿಕೆಟ್ ಕೂಡ ಪತನಗೊಂಡಿತು. ಈ ಜೋಡಿ ಮೂರನೇ ವಿಕೆಟ್‌ಗೆ 84 ರನ್‌ಗಳ ಅತ್ಯಮೂಲ್ಯ ಜತೆಯಾಟ ನಡೆಸಿತು. ಅಭಿಷೇಕ್ 22 ಎಸೆತಗಳಿಂದ 42 ರನ್(7 ಬೌಂಡರಿ, 1 ಸಿಕ್ಸ್) ಬಾರಿಸಿದರು. ಈ ವಿಕೆಟ್ ಪತನಗೊಳ್ಳುತ್ತಿದ್ದಂತೆ ಡೆಲ್ಲಿ ಸೋಲು ಕೂಡ ಖಚಿತಗೊಂಡಿತು.

ನಟರಾಜನ್ ಘಾತಕ ದಾಳಿ

ನಾಯಕ ರಿಷಭ್ ಪಂತ್ ಕೆಳ ಕ್ರಮಾಂಕದಲ್ಲಿ ಶಕ್ತಿ ಮೀರಿ ಪ್ರಯತ್ನಿಸಿದರೂ ಇವರಿಗೆ ಮತ್ತೊಂದು ತುದಿಯಲ್ಲಿ ಸರಿಯಾದ ಸಾಥ್ ಸಿಗದ ಕಾರಣ ತಂಡವನ್ನು ಗೆಲುವಿನ ದಡ ಸೇರಿಸಲು ಸಾಧ್ಯವಾಗಲಿಲ್ಲ. ಪಂತ್ 35 ಎಸೆತಗಳಿಂದ 44 ರನ್ ಬಾರಿಸಿ ಔಟಾದರು. ಈ ವಿಕೆಟ್ ಪತನದೊಂದಿಗೆ ಡೆಲ್ಲಿ ಆಲೌಟ್ ಕೂಡ ಆಯಿತು. ಹೈದರಾಬಾದ್ ಪರ ಘಾತಕ ಬೌಲಿಂಗ್ ದಾಳಿ ನಡೆಸಿದ ಎಡಗೈ ವೇಗಿ ಟಿ.ನಟರಾಜನ್ ಕೇವಲ 19 ರನ್ ನೀಡಿ ಪ್ರಮುಖ 4 ವಿಕೆಟ್ ಕಿತ್ತು ಮಿಂಚಿದರು.

ಅಭಿಷೇಕ್-ಹೆಡ್ ಸ್ಫೋಟಕ ಬ್ಯಾಟಿಂಗ್

ಮೊದಲು ಬ್ಯಾಟಿಂಗ್ ನಡೆಸಿದ ಹೈದರಾಬಾದ್ ತಂಡದ ಪರ ಆರಂಭಿಕ ಬ್ಯಾಟರ್‌ಗಳಾದ ಅಭಿಷೇಕ್ ಶರ್ಮ ಮತ್ತು ಟ್ರಾವಿಸ್ ಹೆಡ್ ಸಿಡಿದು ನಿಂತು ಡೆಲ್ಲಿ ಬೌಲರ್ ಎಸೆತವನ್ನು ಧೂಳಿಪಟ ಮಾಡಿದರು. ಸಿಕ್ಸರ್ ಮತ್ತು ಬೌಂಡರಿಗಳ ಸುರಿಮಳೆಯನ್ನೇ ಸುರಿಸಿ ಕ್ರಿಕೆಟ್ ಅಭಿಮಾನಿಗಳಿಗೆ ಬರಪೂರ ರಂಚನೆ ನೀಡಿದರು. ವಿಕೆಟ್ ನಷ್ಟವಿಲ್ಲದೆ 125 ರನ್ ಬಾರಿಸುವ ಮೂಲಕ ಟಿ20 ಕ್ರಿಕೆಟ್‌ನಲ್ಲಿ ಪವರ್ ಪ್ಲೇಯಲ್ಲಿ ಅತ್ಯಧಿಕ ರನ್ ಬಾರಿಸಿದ ತಂಡವೆಂಬ ಹೆಗ್ಗಳಿಗೆ ಪಾತ್ರವಾಯಿತು. ಒಂದೇ ಓವರ್‌ನಲ್ಲಿ ಅಪಾಯಕಾರಿ ಅಭಿಷೇಕ್ ಆ ಬಳಿಕ ಬಂದ ಐಡೆನ್ ಮಾರ್ಕ್ರಮ್(1) ವಿಕೆಟ್ ಕಿತ್ತು ಡೆಲ್ಲಿಗೆ ಮುನ್ನಡೆ ತಂದುಕೊಟ್ಟರು. ಅಭಿಷೇಕ್ ಕೇವಲ 12 ಎಸೆತಗಳಲ್ಲಿ 6 ಸಿಕ್ಸರ್ ಮತ್ತು 2 ಬೌಂಡರಿ ನೆರವಿನಿಂದ 46 ರನ್ ಬಾರಿಸಿದರು. ಅಭಿಷೇಕ್ ಮತ್ತು ಹೆಡ್ ಸೇರಿಕೊಂಡು ಮೊದಲ ವಿಕೆಟ್‌ಗೆ 131 ರನ್ ಜತೆಯಾಟ ನಡೆಸಿದರು. 16 ಎಸೆತಗಳಿಂದ ಅರ್ಧಶತಕ ಪೂರ್ತಿಗೊಳಿಸಿದ ಟ್ರಾವಿಸ್ ಹೆಡ್ 11 ಬೌಂಡರಿ ಮತ್ತು 6 ಸಿಕ್ಸರ್ ನೆರವಿನಿಂದ 89 ರನ್ ಬಾರಿಸಿದರು. ಎದುರಿಸಿದ್ದು ಕೇವಲ 32 ಎಸೆತ. ಉಭಯ ಆಟಗಾರರ ವಿಕೆಟ್ ಪತನದ ಬಳಿಕ ಹೈದರಾಬಾದ್ ನಾಟಕೀಯ ಕುಸಿತ ಕಂಡಿತು. ಹೆನ್ರಿಚ್ ಕ್ಲಾಸೆನ್(15) ರನ್ ಗಳಿಸಿ ನಿರಾಸೆ ಮೂಡಿಸಿದರು.

ಟಿ20 ವಿಶ್ವಕಪ್‌ಗೆ ಟೀಂ ಇಂಡಿಯಾ ಪ್ರಕಟ!

ಟಿ20 ವಿಶ್ವಕಪ್‌ಗೆ ತಂಡವನ್ನು ಪ್ರಕಟಿಸಲು ಮೇ 1 ಕೊನೆಯ ಗಡುವಾಗಿರುವುದರಿಂದ ಎಲ್ಲಾ ತಂಡಗಳು ಇದರೊಳಗೆ ತಂಡವನ್ನು ಪ್ರಕಟಿಸಬೇಕಾಗಿದೆ. ಅದರಂತೆ ಟೀಮ್ ಇಂಡಿಯಾ ಕೂಡ ಏಪ್ರಿಲ್ 27 ಅಥವಾ ಏಪ್ರಿಲ್ 28 ರಂದು ತಂಡವನ್ನು ಪ್ರಕಟಿಸುವ ಸಾಧ್ಯತೆಗಳಿವೆ.

ಪ್ರಸ್ತುತ ಭಾರತದಲ್ಲಿ 17ನೇ ಆವೃತ್ತಿಯ ಐಪಿಎಲ್ ಜ್ವರ ಜೋರಾಗಿದೆ. ಈಗಾಗಲೇ ಟೂರ್ನಿಯ ಅರ್ಧಪಯಣ ಮುಗಿದಿದೆ. ಉಳಿದರ್ಧದ ಪಯಣ ಕೂಡ ಬಹಳ ರೋಚಕತೆ ಸೃಷ್ಟಿಸುವುದು ಖಚಿತ. ಈ ನಡುವೆ 2024 ರ ಟಿ20 ವಿಶ್ವಕಪ್ ಬಗ್ಗೆಯೂ ಚರ್ಚೆ ಶುರುವಾಗಿದೆ. ಐಪಿಎಲ್ ಮುಗಿಯುತ್ತಿದ್ದಂತೆ ಟಿ20 ವಿಶ್ವಕಪ್ ಕೂಡ ಆರಂಭವಾಗಲಿದೆ. ಈ ಚುಟುಕು ಸಮರಕ್ಕಾಗಿ ಟೀಂ ಇಂಡಿಯಾವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು. ಸದ್ಯಕ್ಕೆ ಸಿಕ್ಕಿರುವ ಮಾಹಿತಿ ಪ್ರಕಾರ, ಟಿ20 ವಿಶ್ವಕಪ್‌ಗೆ ಟೀಂ ಇಂಡಿಯಾದ ಆಯ್ಕೆಯು ಏಪ್ರಿಲ್ 27 ಅಥವಾ 28 ರಂದು ನಡೆಯಲಿದೆ. ಈ ಎರಡು ದಿನಾಂಕಗಳ ಪೈಕಿ ಒಂದರಲ್ಲಿ ನಾಯಕ ರೋಹಿತ್ ಶರ್ಮಾ ಮತ್ತು ಭಾರತದ ಆಯ್ಕೆಗಾರರು ಕುಳಿತು ಟೀಂ ಇಂಡಿಯಾವನ್ನು ಆಯ್ಕೆ ಮಾಡುತ್ತಾರೆ ಎಂಬ ಸುದ್ದಿ ಇದೆ.

ಟಿ20 ವಿಶ್ವಕಪ್‌ಗೆ ತಂಡವನ್ನು ಪ್ರಕಟಿಸಲು ಮೇ 1 ಕೊನೆಯ ಗಡುವಾಗಿರುವುದರಿಂದ ಎಲ್ಲಾ ತಂಡಗಳು ಇದರೊಳಗೆ ತಂಡವನ್ನು ಪ್ರಕಟಿಸಬೇಕಾಗಿದೆ. ಅದರಂತೆ ಟೀಮ್ ಇಂಡಿಯಾ ಕೂಡ ಏಪ್ರಿಲ್ 27 ಅಥವಾ ಏಪ್ರಿಲ್ 28 ರಂದು ತಂಡವನ್ನು ಪ್ರಕಟಿಸುವ ಸಾಧ್ಯತೆಗಳಿವೆ. ಏಕೆಂದರೆ ಆ ದಿನಾಂಕದಂದು ನಾಯಕ ರೋಹಿತ್ ಶರ್ಮಾ ಕೂಡ ದೆಹಲಿಯಲ್ಲಿರುತ್ತಾರೆ. ಐಪಿಎಲ್ 2024 ರ ವೇಳಾಪಟ್ಟಿಯ ಪ್ರಕಾರ, ಮುಂಬೈ ಇಂಡಿಯನ್ಸ್ ಪಂದ್ಯವು ಏಪ್ರಿಲ್ 27 ರಂದು ದೆಹಲಿಯಲ್ಲಿ ನಡೆಯಲ್ಲಿದೆ. ಹೀಗಾಗಿ ಅಂದೇ ರೋಹಿತ್, ಆಯ್ಕೆಗಾರರೊಂದಿಗೆ ಸಭೆ ನಡೆಸಿ ತಂಡವನ್ನು ಆಯ್ಕೆ ಮಾಡಲ್ಲಿದ್ದಾರೆ ಎಂದು ತಿಳಿದುಬಂದಿದೆ.

ಈ 10 ಆಟಗಾರರ ಆಯ್ಕೆ ಖಚಿತ ಈ 10 ಆಟಗಾರರಲ್ಲಿ ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಸೂರ್ಯಕುಮಾರ್ ಯಾದವ್, ರಿಷಬ್ ಪಂತ್, ರವೀಂದ್ರ ಜಡೇಜಾ, ಶುಭ್‌ಮನ್ ಗಿಲ್, ಕೆಎಲ್ ರಾಹುಲ್, ಕುಲ್ದೀಪ್ ಯಾದನ್, ಜಸ್ಪ್ರೀತ್ ಬುಮ್ರಾ ಮತ್ತು ಮೊಹಮ್ಮದ್ ಸಿರಾಜ್ ಹೆಸರುಗಳಿವೆ.

ಈ ದಿನಾಂಕದಂದು ಟೀಂ ಇಂಡಿಯಾ ಪ್ರಕಟ

ಬಿಸಿಸಿಐ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಕೂಡ ಈ ಆಯ್ಕೆ ಸಭೆಗಾಗಿ ಸ್ಪೇನ್‌ನಿಂದ ಭಾರತಕ್ಕೆ ಮರಳಿದ್ದಾರೆ. ಏಪ್ರಿಲ್ 30 ರಂದು ಲಕ್ನೋ ಸೂಪರ್ ಜೈಂಟ್ಸ್ ಜೊತೆ ಮುಂಬೈ ಇಂಡಿಯನ್ಸ್ ಪಂದ್ಯವನ್ನು ಗಮನದಲ್ಲಿಟ್ಟುಕೊಂಡು, ಏಪ್ರಿಲ್ 27 ಅಥವಾ 28 ರ ದಿನಾಂಕವನ್ನು ತಂಡದ ಆಯ್ಕೆಗೆ ಸೂಕ್ತವೆಂದು ಪರಿಗಣಿಸಲಾಗಿದೆ. ಏಕೆಂದರೆ ಈ ಅವಧಿಯಲ್ಲಿ ಆಯ್ಕೆಗಾರರ ಜೊತೆಗೆ ತಂಡದ ನಾಯಕ ರೋಹಿತ್ ಕೂಡ ದೆಹಲಿಯಲ್ಲಿರುತ್ತಾರೆ.

ಪಂಜಾಬ್ ಕಿಂಗ್ಸ್ ನಾಯಕರಾಗ್ತಾರಾ ರೋಹಿತ್

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 18 ಗಾಗಿ ಮೆಗಾ ಹರಾಜು ನಡೆಯಲಿದೆ. ಈ ಹರಾಜಿಗೂ ಮುನ್ನ ಎಲ್ಲಾ ಫ್ರಾಂಚೈಸಿಗಳು ತಮ್ಮ ಬಹುತೇಕ ಪ್ಲೇಯರ್ಸ್ ಅನ್ನು ಬಿಡುಗಡೆ ಮಾಡಬೇಕಾಗುತ್ತದೆ. ಅಂದರೆ ಐಪಿಎಲ್ ಮೆಗಾ ಆಕ್ಷನ್ ನಿಯಮದ ಪ್ರಕಾರ ಕೇವಲ 4 ಆಟಗಾರರನ್ನು ಮಾತ್ರ ತಂಡದಲ್ಲೇ ಉಳಿಸಿಕೊಳ್ಳಲು ಅವಕಾಶ ಇರಲಿದೆ. ಈ ಬಾರಿಯ ಐಪಿಎಲ್‌ನಲ್ಲಿ ರೋಹಿತ್ ಶರ್ಮಾ ಮುಂಬೈ ಇಂಡಿಯನ್ಸ್ ಪರ ಕೇವಲ ಆಟಗಾರನಾಗಿ ಕಣಕ್ಕಿಳಿಯುತ್ತಿದ್ದಾರೆ. ಕಳೆದ 10 ವರ್ಷಗಳಿಂದ ಮುಂಬೈ ತಂಡದ ನಾಯಕರಾಗಿ ಕಾಣಿಸಿಕೊಂಡಿದ್ದ ಹಿಟ್‌ಮ್ಯಾನ್ ಅವರನ್ನು ಈ ಬಾರಿ ನಾಯಕತ್ವದಿಂದ ಕೆಳಗಿಳಿಸಲಾಗಿದೆ. ಅಲ್ಲದೆ ಅವರ ಬದಲಿಗೆ ಇದೀಗ ಹಾರ್ದಿಕ್ ಪಾಂಡ್ಯ ಮುಂಬೈ ಇಂಡಿಯನ್ಸ್ ತಂಡವನ್ನು ಮುನ್ನಡೆಸುತ್ತಿದ್ದಾರೆ. ಹೀಗಾಗಿಯೇ ಮುಂದಿನ ವರ್ಷ ರೋಹಿತ್ ಶರ್ಮಾ ಮುಂಬೈ ಇಂಡಿಯನ್ಸ್ ಪರ ಆಡಲ್ಲ ಎಂಬ ಸುದ್ದಿಗಳು ಕೇಳಿ ಬಂದಿದ್ದವು. ಈ ಸುದ್ದಿಗಳ ನಡುವೆ ಐಪಿಎಲ್ 2025 ರಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಹಿಟ್‌ಮ್ಯಾನ್ ಮುನ್ನಡೆಸಲಿದ್ದಾರೆ ಎಂಬ ಸುದ್ದಿಯೊಂದು ಸಖತ್ ವೈರಲ್ ಆಗಿದೆ. ಹೀಗೆ ಸುದ್ದಿ ವೈರಲ್ ಆಗಲು ಮುಖ್ಯ ಕಾರಣ, ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದ ಬಳಿಕ ಪಂಜಾಬ್ ಕಿಂಗ್ಸ್ ತಂಡದ ಮಾಲಕಿ ಪ್ರೀತಿ ಝಿಂಟಾ ರೋಹಿತ್ ಶರ್ಮಾ ಜೊತೆ ಮಾತನಾಡಿದ್ದು. ಇದರ ಬೆನ್ನಲ್ಲೇ ಹಿಟ್‌ಮ್ಯಾನ್ ಮುಂದಿನ ವರ್ಷ ಪಂಜಾಬ್ ಕಿಂಗ್ಸ್ ಪರ ಕಣಕ್ಕಿಳಿಯಲಿದ್ದಾರೆ ಎಂಬ ಸುದ್ದಿ ಮಹತ್ವ ಪಡೆದುಕೊಂಡಿದೆ. ಇದೀಗ ಈ ವದಂತಿಗಳ ಬಗ್ಗೆ ಖುದ್ದು ಪ್ರೀತಿ ಝಿಂಟಾ ಪ್ರತಿಕ್ರಿಯಿಸಿದ್ದಾರೆ. ಸದ್ಯ ಹರಿದಾಡುತ್ತಿರುವ ಸುದ್ದಿಗಳು ಸಂಪೂರ್ಣ ಆಧಾರರಹಿತ, ಸುಳ್ಳು ಸುದ್ದಿಗಳು.

ನಾನು ರೋಹಿತ್ ಶರ್ಮಾ ಅವರನ್ನು ಬಹಳ ಗೌರವದಿಂದ ಕಾಣುತ್ತೇನೆ. ಅವರ ದೊಡ್ಡ ಅಭಿಮಾನಿ ನಾನು. ಆದರೆ ಅವರ ಜೊತೆ ಪಂಜಾಬ್ ಕಿಂಗ್ಸ್ ತಂಡಕ್ಕೆ ಬರುವ ಬಗ್ಗೆಯಾಗಲಿ ನಾನು ಚರ್ಚಿಸಿಲ್ಲ ಅಥವಾ ಅಂತಹ ಹೇಳಿಕೆಯನ್ನು ನೀಡಿಲ್ಲ. ಹೀಗಾಗಿ ಅಂತಹ ಸುದ್ದಿಗಳನ್ನು ನಂಬಬೇಡಿ ಎಂದು ಪ್ರೀತಿ ಝಿಂಟಾ ತಿಳಿಸಿದ್ದಾರೆ.

ಇದಾಗ್ಯೂ ಐಪಿಎಲ್ 2025 ಕ್ಕಾಗಿ ಮೆಗಾ ಹರಾಜು ನಡೆಯಲಿದ್ದು, ಅದಕ್ಕೂ ಮುನ್ನ ರೋಹಿತ್ ಶರ್ಮಾ ಅವರನ್ನು ಮುಂಬೈ ಇಂಡಿಯನ್ಸ್ ಬಿಡುಗಡೆ ಮಾಡಿದರೆ ಅವರು ಹರಾಜಿನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ವೇಳೆ ಹಿಟ್‌ಮ್ಯಾನ್ ಖರೀದಿಗಾಗಿ ಒಂದಷ್ಟು ಫ್ರಾಂಚೈಸಿಗಳು ಪ್ರಯತ್ನಿಸುವುದಂತು ದಿಟ. ಹೀಗೆ ರೋಹಿತ್ ಶರ್ಮಾ ಖರೀದಿಗೆ ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ಕೂಡ ಪ್ರಯತ್ನ ನಡೆಸುವುದು ಖಚಿತ ಎಂದೇ ಎನ್ನಬಹುದು.

ಯಶ್ ನಿಜವಾದ ಹೀರೋ

ಅಂದುಕೊಂಡಂತೆ ಆಗಿದ್ದರೆ ರಾಮಾಯಣ ಸಿನಿಮಾದಲ್ಲಿ ಬಾಲಿವುಡ್ ನ ಹೆಸರಾಂತ ನಟ ಆದಿತ್ಯಾ ದೇಶಮುಖ ಕೂಡ ನಟಿಸಬೇಕಿತ್ತು. ಡೇಟ್ ಹೊಂದಾಣಿಕೆ ಕಾರಣದಿಂದಾಗಿ ಅವರು ನಟಿಸೋಕೆ ಸಾಧ್ಯವಾಗಿಲ್ಲ. ಆದರೆ, ರಾಮಾಯಣ ಸಿನಿಮಾದ ಸೀಕ್ರೇಟ್ ಒಂದನ್ನು ಬಿಚ್ಚಿಟ್ಟಿದ್ದಾರೆ ಆದಿತ್ಯಾ, ಈ ರಾಮಾಯಣವನ್ನು ರಾವಣನ ದೃಷ್ಟಿಕೋನದಲ್ಲಿ ಹೆಣೆಯಲಾಗುತ್ತಿದೆಯಂತೆ. ಹಾಗಾಗಿ ನಿಜವಾಗಿಯೂ ಈ ಸಿನಿಮಾದ ಹೀರೋ ಯಶ್ ಎಂದು ಅವರು ಹೇಳಿದ್ದಾರೆ.

ಅಲ್ಲದೇ, ಬಹುನಿರೀಕ್ಷಿತ ಸಿನಿಮಾ ರಾಮಾಯಣ ಚಿತ್ರೀಕರಣ ಪ್ರಾರಂಭವಾಗಿದೆ. ಭಾರತೀಯ ಪುರಾಣದ ಕಥೆಯನ್ನು ತೆರೆದಿಡುವ ರಾಮಾಯಣ ಚಿತ್ರಕ್ಕಾಗಿ ರಾಕಿಂಗ್ ಸ್ಟಾರ್ ಯಶ್ ಹಾಗೂ ನಮಿತ್ ಮಲ್ಹೋತ್ರಾ ಕೈ ಜೋಡಿಸಿದ್ದಾರೆ. ರಾಮಾಯಣಕ್ಕೆ ರಾಕಿ ಕೂಡ ನಿರ್ಮಾಪಕ ರಾಮಾಯಣ ಸಿನಿಮಾವನ್ನು ಬಹಳ ಅದ್ದೂರಿಯಾಗಿ ದೃಶ್ಯ ರೂಪಕ್ಕೆ ಇಳಿಸುವುದಕ್ಕೆ ದಂಗಲ್ ನಿರ್ದೇಶಕ ನಿತೀಶ್ ತಿವಾರಿ ಹೊರಟಿದ್ದಾರೆ. ಅದರಂತೆ ಬಹು ಕೋಟಿ ಬಜೆಟ್ ಹಾಕಿ ಈ ಚಿತ್ರ ನಿರ್ಮಾಣ ಮಾಡೋದಿಕ್ಕೆ ರಾಕಿಭಾಯ್ ಹಾಗೂ ನಮಿತ್ ಮಲ್ಹೋತ್ರಾ ಒಂದಾಗಿದ್ದಾರೆ. ಯಶ್ ಒಡೆತನದ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ ಹಾಗೂ ನಮಿತ್ ಮಲ್ಹೋತ್ರಾ ಸಾರಥ್ಯದ ಪ್ರೈಮ್ ಫೋಕಸ್ ಸ್ಟುಡಿಯೋ ರಾಮಾಯಣ ಸಿನಿಮಾವನ್ನು ನಿರ್ಮಿಸುತ್ತಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ನಮಿತ್ ಮಲ್ಹೋತ್ರಾ, ರಾಮಾಯಣ ಕಥೆಗೆ ನ್ಯಾಯ ಸಲ್ಲಿಸಲು ನಾನು ಸಿದ್ಧನಾಗಿದ್ದೇನೆ. ನಮ್ಮ ಸಂಸ್ಕೃತಿಯನ್ನು ಜಗತ್ತಿಗೆ ಪರಿಚಯಿಸಲು ನಾನು ಉತ್ಸಕನಾಗಿದ್ದೇನೆ ಎಂದರು.

ಹರ್ಷಿಕಾ-ಭುವನ್ ಮೇಲೆ ಹಲ್ಲೆ

ದೂರು ದಾಖಲಿಸಿದ ಸ್ಟಾರ್ ದಂಪತಿ

ನಟಿ ಹರ್ಷಿಕಾ ಪೂಣಚ್ಚ ದಂಪತಿಗೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪತಿ ಭುವನ್ ಜೊತೆ ನಗರ ಪೊಲೀಸ್ ಆಯುಕ್ತರ ಕಚೇರಿಗೆ ಬಂದ ಹರ್ಷಿಕಾ ದಂಪತಿ ಅಂದು ನಡೆದು ಘಟನೆಯ ಕುರಿತಂತೆ ದೂರು ದಾಖಲಿಸಿದ್ದಾರೆ. ಪೊಲೀಸರು ಕರೆ ಮಾಡಿದ ಬೆನ್ನಲ್ಲೇ ನಡೆದ ಘಟನೆಯ ಬಗ್ಗೆ ವಿವರಣೆಯನ್ನೂ ಅವರು ಕೊಟ್ಟಿದ್ದಾರೆ.

ನಿನ್ನೆ ಸಂಬಂಧಿಕರೆಲ್ಲ ಇದ್ರು ಆಗ ಪೊಲೀಸರು ಕರೆ ಮಾಡಿದ್ರು. ನಿನ್ನೆಯಿಂದ ಎಸಿಪಿ ಟಚ್‌ಲ್ಲಿ ಇದ್ರು. ಆ ಟ್ವೀಟನ್ನ ನಾನೆ ಬರೆದಿದ್ದು. ದೂರು ಕೊಟ್ಟಿದ್ದೆ ತಪ್ಪಾ ಹಾಗಾದ್ರೆ. ನಾವು ಯಾವುದೇ ಪಕ್ಷದಲ್ಲಿ ಗುರುತಿಸಿಕೊಂಡಿಲ್ಲ. ನಮ್ಮ ಹಿತೈಷಿಗಳು ಕರೆ ಮಾಡಿ ದೂರು ಕೊಡುವಂತೆ ಹೇಳಿದ್ರು. ಎಸಿಪಿ ಗೀತಾ ಅವರನ್ನು ಇಂದು ಭೇಟಿಯಾಗಬೇಕಿತ್ತು. ಆದ್ರೆ ಅಲ್ಲಿ ಯಾವುದೋ ಪ್ರೊಟೆಸ್ಟ್ ಇದೆ ಅಂತ ಹೇಳಿದ್ರು. ಹೀಗಾಗಿ ಕಮಿಷನರ್ ಕಚೇರಿಗೆ ದೂರು ಕೊಡಲು ಬಂದ್ವಿ. ಈ ತರಹದ ಘಟನೆಗಳು ಬೆಂಗಳೂರಿನಲ್ಲಿ ಹಲವಾರು ನಡೆದಿದೆ. ಕರ್ನಾಟಕದಲ್ಲಿ ನಾವೆಲ್ಲ ಒಂದೆ. ಯಾವುದೇ ಏರಿಯಾಗೆ ಹೋದ್ರು ಭಯವಿಲ್ಲದೇ ಹೋಗಬೇಕು. ಅಂದು ಕರಾಮ ಹೋಟೆಲ್ ಹೋಗಿದ್ವಿ. ಊಟ ಮುಗಿಸಿ